12 ಸೆಪ್ಟೆಂಬರ್ 2025 ಶುಕ್ರವಾರ ಬೆಲೆ ₹ 2.00 ಸಂಪುಟ : 19 ಸಂಚಿಕೆ : 184 ಪುಟ-4 ಹಾಸನ E-mail : prajodayahsn@gmail.com RNI NO: KARKAN/2007/22629

ಜನಮನದ ದನಿ

# ಪ್ರಜೋದಯ

ದಿನಪತ್ರಿಕೆ

ಸಂಪಾದಕ : ಜೆ.ಆರ್. ಕೆಂಚೇಗೌಡ



ಭಾರತ ತಂಡವು ಮಹಿಳಾ ಏಷ್ಯಾ ಕಪ್ ಹಾಕಿ ಟೂರ್ನಿಯ ಸೂಪರ್ 4 ಹಂತದ ಪಂದ್ಯದಲ್ಲಿ ಗುರುವಾರ ಆತಿಥೇಯ ಚೀನಾ ಎದುರು 1-4ರಿಂದ ಪರಾಭವಗೊಂಡಿತು. ಟೂರ್ನಿಯಲ್ಲಿ ಭಾರತ ತಂಡಕ್ಕೆ ಇದು ಮೊದಲ ಸೋಲು.


ಒಂದೇ ದಿನ ತೆರೆಗೆ ಅಪ್ಪಳಿಸಲಿವೆ ಹತ್ತು ಕನ್ನಡ ಚಿತ್ರಗಳು » 2


ರಾಷ್ಟ್ರದ ಭವಿಷ್ಯ ರೂಪಿಸುವ ಮಹತ್ವದ ಜವಾಬ್ದಾರಿ ಮತದಾನ » 3


ನೇಪಾಳದಲ್ಲಿ ಮುಂದುವರಿದ ಸರ್ಕಾರ ರಚನೆ ಕಸರತ್ತು » 4

## ಚಾಕುವಿನಿಂದ ಇರಿದು ಅತ್ತೆಯನ್ನೇ ಕೊಂದ ಅಳಿಯ

• ಪ್ರಜೋದಯ ವರದಿ

**ಕೊಣನೂರು:** ಅಳಿಯನ ಕಿರುಕುಳದಿಂದ ಹಿಂಸೆ ಅನುಭವಿಸುತ್ತಿದ್ದ ಮಗಳನ್ನು ಕರೆದು ಕೊಂಡು ಬಂದಿದ್ದಕ್ಕೆ ಆಕ್ರೋಶಗೊಂಡ ಅಳಿಯ ಮನೆಗೆ ಬಂದು ಅತ್ತೆಯನ್ನು ಚಾಕುವಿನಿಂದ ಇರಿದು ಕೊಲೆಗೈದಿರುವ ಘಟನೆ ರಾಮನಾಥಪುರದಲ್ಲಿ ಗುರುವಾರ ನಡೆದಿದೆ.

ರಾಮನಾಥಪುರದ ಫೈರೋಜ್ ಅಹ್ಮದ್ (55) ಮೃತರು. ಬೆಟ್ಟದಪುರದ ರಸುಲ್ ಕೊಲೆ ಆರೋಪಿ. ಜಹೀರ್ ಅಹ್ಮದ್ ಹಾಗು ಫೈರೋಜ್ ಅಹ್ಮದ್ ಪುತ್ರಿ ಸಮೀರಾ ಅವರನ್ನು ಒಂಬತ್ತು ವರ್ಷಗಳ ಹಿಂದೆ ಬೆಟ್ಟದಪುರದ ರಸುಲ್‌ಗೆ ಕೊಟ್ಟು ಮದುವೆ ಮಾಡಲಾಗಿತ್ತು. ಸಣ್ಣಪುಟ್ಟ ಕೆಲಸ ಮಾಡಿಕೊಂಡಿದ್ದ ರಸುಲ್ ಆರಂಭದಲ್ಲಿ ಚೆನ್ನಾಗಿಯೇ ಇದ್ದ. ಕಳೆದ ಎರಡು ತಿಂಗಳಿಂದ ಮದ್ಯ ವ್ಯಸನಿಯಾಗಿ ಹೆಂಡತಿಗೆ ಚಿತ್ರಹಿಂಸೆ ನೀಡುತ್ತಿದ್ದ. ಮನೆಗೆ ದಿನಸಿ, ತರಕಾರಿ ತಂದುಕೊಡದೆ ಹಣ ವನ್ನೆಲ್ಲಾ ಕುಡಿತಕ್ಕೆ ಖರ್ಚು ಮಾಡುತ್ತಿದ್ದ. ಹೆಂಡತಿ ಜೊತೆಗೆ ಸುಖಾ ಸುಮ್ಮನೆ ಜಗಳ ಮಾಡುತ್ತಿದ್ದ. ಅದರಿಂದ ಬೇಸತ್ತಿದ್ದ ಸಮೀರಾ ತಂದೆ-ತಾಯಿಗೆ ವಿಷಯ ತಿಳಿಸಿದ್ದರು.

ಗುರುವಾರ ಬೆಳಿಗ್ಗೆ ಸಂಬಂಧಿಕರೆಲ್ಲ ಬೆಟ್ಟದಪುರಕ್ಕೆ ತೆರಳಿ ಸಮೀರಾ ಅವರನ್ನು ರಾಮನಾಥ ಪುರದ ತವರು ಮನೆಗೆ ಕರೆತಂದಿದ್ದರು. ಅವರನ್ನೇ ಹಿಂಬಾಲಿಸಿಕೊಂಡು ಬಂದಿದ್ದ ರಸುಲ್ ಏಕಾಏಕಿ ಮನೆಯೊಳಗೆ ನುಗ್ಗಿದ್ದಾನೆ. ತನ್ನ ಜೊತೆಗೆ ಬರುವಂತೆ ಹೆಂಡತಿ ಜೊತೆಗೆ ಗಲಾಟೆ ಮಾಡುತ್ತಿದ್ದಾಗ ಜಗಳ ಬಿಡಿಸಲು ಬಂದ ಅತ್ತೆ ಫೈರೋಜ್ ಅವರ ಎದೆಗೆ ಚಾಕುವಿನಿಂದ ಇರಿ ದಿದ್ದಾನೆ. ನಂತರ ಹೆಂಡತಿ ಮೇಲೂ ಹಲ್ಲೆನಡೆಸಿದ್ದಾನೆ. ತೀವ್ರ ರಕ್ತಸ್ರಾವದಿಂದ ಫೈರೋಜ್ ಸ್ಥಳದಲ್ಲೇ ಮೃತಪಟ್ಟರೆ ಸಮೀರಾ ಅವರನ್ನು ಆಸ್ಪತ್ರೆಗೆ ದಾಖಲಿಸಲಾಯಿತು. ಆರೋಪಿ ರಸುಲ್‌ನನ್ನು ಸ್ಥಳೀಯರು ಪೊಲೀಸರಿಗೆ ಒಪ್ಪಿಸಿದ್ದಾರೆ. ಕೊಣನೂರು ಠಾಣೆಯಲ್ಲಿ ಪ್ರಕರಣ ದಾಖಲಾಗಿದೆ.

# ಮದ್ದೂರು ಗಲಭೆ: ರಾಜಕೀಯ ಜಟಾಪಟಿ

### ಪ್ರಚೋದನಕಾರಿ ಭಾಷಣ-ಸಿ.ಟಿ.ರವಿ ವಿರುದ್ಧ ಎಫ್‌ಐಆರ್ | ಸರ್ಕಾರದ ವಿರುದ್ಧ ಯತ್ನಾಳ್ ವಾಗ್ದಾಳಿ

• ಪ್ರಜೋದಯ ವರದಿ

**ಬೆಂಗಳೂರು:** ಗಣೇಶ ವಿಸರ್ಜನೆ ಮೆರವಣಿಗೆ ಮೇಲೆ ಕಲ್ಲು ತೂರಾಟ ಬಳಿಕ ಮಂಡ್ಯ ಜಿಲ್ಲೆಯ ಮದ್ದೂರು ಪಟ್ಟಣ ಬೂದಿಮುಚ್ಚಿದ ಕೆಂಡದಂತಿದೆ. ಇದೇ ವಿಚಾರ ಕಾಂಗ್ರೆಸ್ ಮತ್ತು ಬಿಜೆಪಿ ನಡುವೆ ವಾಕ್ಸಮರಕ್ಕೆ ಕಾರಣವಾಗಿದೆ.

ಗಣೇಶ ಮೂರ್ತಿಗಳ ಸಾಮೂಹಿಕ ವಿಸರ್ಜನಾ ಮೆರವಣಿಗೆ ವೇಳೆ ಪ್ರಚೋದನಕಾರಿ ಭಾಷಣ ಮಾಡಿದ ಆರೋಪದ ಮೇಲೆ ವಿಧಾನ ಪರಿಷತ್ ಸದಸ್ಯ ಸಿ.ಟಿ.ರವಿ ವಿರುದ್ಧ ಮದ್ದೂರು ಪೊಲೀಸರು ಸ್ವಯಂಪ್ರೇರಿತ ಪ್ರಕರಣ ದಾಖಲಿಸಿಕೊಂಡಿದ್ದಾರೆ.

ಸಬ್ ಇನ್ಸ್‌ಪೆಕ್ಟರ್ ಮಂಜುನಾಥ್ ನೀಡಿದ ದೂರಿನ ಆಧಾರದ ಮೇಲೆ, ಸಿ.ಟಿ. ರವಿ ವಿರುದ್ಧ ಮದ್ದೂರು ಪೊಲೀಸ್ ಠಾಣೆಯಲ್ಲಿ ಭಾರತೀಯ ನ್ಯಾಯ ಸಂಹಿತಾ ಸೆಕ್ಷನ್ 196 (1) (ಧರ್ಮ, ಜನಾಂಗ, ಜನ್ಮಸ್ಥಳ, ವಾಸಸ್ಥಳ, ಭಾಷೆ ಇತ್ಯಾದಿಗಳ ಆಧಾರದ ಮೇಲೆ ವಿವಿಧ ಗುಂಪುಗಳ ನಡುವೆ ದ್ವೇಷವನ್ನು ಉತ್ತೇಜಿಸುವುದು ಮತ್ತು ಸಾಮರಸ್ಯವನ್ನು ಕಾಪಾಡಿಕೊಳ್ಳಲು ಹಾನಿಕರವಾದ ಕೃತ್ಯಗಳನ್ನು ಎಸಗುವುದು) ಅಡಿಯಲ್ಲಿ ಪ್ರಕರಣ ದಾಖಲಿಸಲಾಗಿದೆ.



#### ಕೇಸ್ ದಾಖಲಿಸಿದರೆ ಹೆದರಲ್ಲ

ತಮ್ಮ ವಿರುದ್ಧ ಪ್ರಕರಣ ದಾಖಲಾಗಿರುವ ಕುರಿತು ಪ್ರತಿಕ್ರಿಯೆ ನೀಡಿರುವ ಸಿ.ಟಿ.ರವಿ ಅವರು, ನನ್ನ ವಿರುದ್ಧ ಪ್ರಕರಣ ದಾಖಲಿಸಿದ ತಕ್ಷಣ ನಾನು ಹೆದರಲ್ಲ. ಜನತೆಗಾಗಿ, ಹಿಂದುತ್ವಕ್ಕಾಗಿ ನನ್ನ ಹೋರಾಟ ನಿಲ್ಲದು ಎಂದು ಹೇಳಿದ್ದಾರೆ.

ನನ್ನ ಮೇಲೆ ಪ್ರಕರಣಗಳು ಹೊಸದೇನಲ್ಲ, ಪ್ರಕರಣ ದಾಖಲಿಸಿ ನನ್ನನ್ನು ಹೆದರಿಸಲು ಸಾಧ್ಯವಿಲ್ಲ. ಪ್ರಕರಣ ದಾಖಲಾಯಿತು ಎಂದು ಭಯಪಟ್ಟು ಮನೆಯಲ್ಲಿ ಕೂರುವ ಜಾಯಮಾನ ನನ್ನದಲ್ಲ. ನಮ್ಮನ್ನು ಪ್ರಚೋದನೆ ಮಾಡಿದ್ದು ಯಾರು? ಕಲ್ಲು ತೂರಾಟ ಮಾಡಿರುವವರಲ್ಲವೇ? ಪ್ರಚೋದನೆಗಳಿಗೆ ಪ್ರತಿಕ್ರಿಯೆ ಇರುತ್ತದೆಂದು ನಾನು ಹೇಳಿದ್ದೇನೆ. ಪ್ರಕರಣ ದಾಖಲಿಸಲಿ ಭಯವಿಲ್ಲ. ಜನತೆಗಾಗಿ ನನ್ನ ಹೋರಾಟ ಮುಂದುವರೆಯುತ್ತದೆ ಎಂದರು.

#### ಕರ್ನಾಟಕ ಹಿಂದೂ ಪಾರ್ಟಿ ಕಟ್ಟುತ್ತೇವೆ

ನಾನು ಮತ್ತು ಪ್ರತಾಪ ಸಿಂಹ ಹಿಂದೂಗಳ ಪರವಾಗಿ ಗಟ್ಟಿಯಾಗಿ ಮಾತನಾಡುತ್ತೇವೆ. ನಾವೆಲ್ಲ ಒಂದಾಗಿ ರಾಜ್ಯದಲ್ಲಿ ಕರ್ನಾಟಕ ಹಿಂದೂ ಪಾರ್ಟಿ ಕಟ್ಟುತ್ತೇವೆ. ಆ ಪಕ್ಷದ ಗುರುತು ಜೆಸಿಬಿ. ಅಧಿಕಾರಕ್ಕೆ ಬಂದರೆ ಮುಸ್ಲಿಮರ ಮೀಸಲಾತಿ ತೆಗೆದು ಹಿಂದೂಗಳಿಗೆ ಹಂಚುತ್ತೇನೆ, ಅಕ್ರಮವಾಗಿ ಕಟ್ಟಿದ ಮಸೀದಿಗಳನ್ನು ನೆಲ ಸಮಗೊಳಿಸುತ್ತೇವೆಂದು ಶಾಸಕ ಬಸನಗೌಡ ಪಾಟೀಲ್ ಯತ್ನಾಳ್ ಆಕ್ರೋಶ ವ್ಯಕ್ತಪಡಿಸಿದರು.

ಮದ್ದೂರು ಘಟನೆಯಲ್ಲಿ ಗಾಯಗೊಂಡವರ » ಮೂರನೇ ಪುಟದಲ್ಲಿ

#### ಮುಸ್ಲಿಂ ಏಜೆಂಟರಂತೆ ಕೆಲಸ ಮಾಡಬೇಡಿ

ಗಣೇಶ ಮೆರವಣಿಗೆಯಲ್ಲಿ ಡಿ.ಜೆ ಹಾಕಬೇಡಿ ಅಂತ ಸರ್ಕಾರ ನಿರ್ಬಂಧ ಹಾಕುತ್ತದೆ. ಆದರೆ, ಅವರು ದಿನಕ್ಕೆ ಐದು ಬಾರಿ ಮೈಕ್ ಹಾಕ್ತಾರೆ. ಸಿದ್ದರಾಮಯ್ಯ, ಡಿ.ಕೆ.ಶಿವಕುಮಾರ್, ಪರಮೇಶ್ವರ್ ಅವರೇ ನಿಮಗೆ ತಾಕತ್ ಇದ್ದರೆ ಮಸೀದಿ ಮೈಕ್ ಅನ್ನು ನಿಲ್ಲಿಸಿ. ಮುಸ್ಲಿಂ ಏಜೆಂಟಗಳಂತೆ ಕೆಲಸ ಮಾಡಬೇಡಿ. ಹಾಲುಮತದಲ್ಲಿ ಹುಟ್ಟಿದ ಸಿದ್ದರಾಮಯ್ಯ ಅವರು ಕುಂಕುಮ, ಪೇಟಾ ಬೇಡ ಅಂತಾರೆ. ಸಾಬರ ಟೋಪಿ ಹಾಕಿಕೊಳ್ತಾರೆ. ನೇಪಾಳದ ಪರಿಸ್ಥಿತಿ ಬರುವ ಮೊದಲೇ ಎಚ್ಚೆತ್ತುಕೊಳ್ಳಿ ಎಂದು ಯತ್ನಾಳ್ ವಾಗ್ದಾಳಿ ನಡೆಸಿದರು.

## ಶೀಘ್ರ ಆನೆಧಾಮ ಸ್ಥಾಪಿಸಲು ಮನವಿ



• ಪ್ರಜೋದಯ ವರದಿ

**ಹಾಸನ:** ಶೀಘ್ರವೇ ಆನೆಧಾಮ ಸ್ಥಾಪಿಸಬೇಕು. ರೈತರಿಗೆ ತೊಂದರೆ ನೀಡುತ್ತಿರುವ ಕಾಡಾನೆ ಗಳನ್ನು ಸ್ಥಳಾಂತರಿಸಬೇಕೆಂದು ಒತ್ತಾಯಿಸಿ ಅರಣ್ಯ ಸಚಿವ ಈಶ್ವರ್ ಖಂಡ್ರೆ ಅವರಿಗೆ ಶಾಸಕ ಹೆಚ್.ಕೆ.ಸುರೇಶ್ ಅವರು ಮನವಿ ಸಲ್ಲಿಸಿದರು.

ಬೆಂಗಳೂರಿನಲ್ಲಿ ಸಚಿವರನ್ನು ಭೇಟಿಯಾಗಿ, ಬೇಲೂರು ತಾಲ್ಲೂಕಿನ ಬಿಕ್ಕೋಡು ಹೋಬಳಿ ಸುತ್ತಮುತ್ತಲಿನ ಗ್ರಾಮಗಳಲ್ಲಿ ಕಾಡಾನೆಗಳು ಗುಂಪುಕಟ್ಟಿಕೊಂಡು ಹಾವಳಿ ಮಾಡುತ್ತಿವೆ. ಕಾಡಾನೆಗಳ ದಾಳಿಯಿಂದ ಹುಲುಸಾಗಿ ಬೆಳೆದ ಭತ್ತ, ಶುಂಠಿ, ಕಾಫಿ ಗಿಡಗಳನ್ನು ನಾಶ ಮಾಡು ತ್ತಿವೆ. ದಿನೇ ದಿನೇ ಹೆಚ್ಚುತ್ತಿರುವ ಕಾಡಾನೆ ಸಮಸ್ಯೆಗೆ ಶಾಶ್ವತ ಪರಿಹಾರ ಹಾಗು ಹಾನಿಯಾಗಿರುವ ಬೆಳೆಗೆ ಪರಿಹಾರ ನೀಡಬೇಕೆಂದು ಆಗ್ರಹಿಸಿದರು.

ಕಾಡಾನೆಯಿಂದ ಹಾಳಾಗಿರುವ ರೈತರ ಬೆಳೆಗಳಿಗೆ ಪ್ರತಿ ಎಕರೆ ಶುಂಠಿಗೆ 2 ಲಕ್ಷ ರೂ., ಮೆಕ್ಕೆ ಜೋಳ ಬೆಳೆಗೆ 1.20 ಲಕ್ಷ ರೂ., ಅಡಿಕೆ ಬೆಳೆಗೆ 2 ಲಕ್ಷ ರೂ., ತೆಂಗು ಬೆಳೆಗೆ 1 ಲಕ್ಷ ರೂ., ಕಾಫಿ ಬೆಳೆಗೆ 2 ಲಕ್ಷ ರೂ. ಹಾಗು ಬಾಳೆ ಬೆಳೆಗೆ 2 ಲಕ್ಷ ರೂ. ಪರಿಹಾರ ನೀಡುವಂತೆ ಮನವಿ ಮಾಡಿದರು.

## ಕುಡಿದ ಅಮಲಿನಲ್ಲಿ ಹೆಂಡತಿ ಕೊಲೆಗೈದ ಪತಿ

• ಪ್ರಜೋದಯ ವರದಿ



**ಚನ್ನರಾಯಪಟ್ಟಣ:** ಕುಡಿದ ಅಮಲಿನಲ್ಲಿ ಪತಿಯು ಚಾಕುವಿನಿಂದ ಎದೆಗೆ ಇರಿದು ಹೆಂಡತಿ ಯನ್ನು ಕೊಲೆಗೈದಿರುವ ಘಟನೆ ತಾಲ್ಲೂಕಿನ ಹಿರೀಸಾವೆಯ ಪಿಳ್ಳೇಶ್ವರ ಬಡಾವಣೆಯ ಮನೆಯೊಂದರಲ್ಲಿ ನಡೆದಿದೆ.

ರೇಖಾ (38) ಮೃತರು. ಪತಿ ರಘು (40) ಕೊಲೆ ಆರೋಪಿ. ಮಂಡ್ಯ ಜಿಲ್ಲೆ ನಾಗಮಂಗಲ ತಾಲ್ಲೂಕು ಹೊನ್ನದೇವಿಹಳ್ಳಿ ಗ್ರಾಮದ ರೇಖಾ ಅವರನ್ನು 18 ವರ್ಷಗಳ ಹಿಂದೆ ಸಕಲೇಶಪುರ ತಾಲ್ಲೂಕು ಹಾನುಬಾಳ್ ಗ್ರಾಮದ ರಘು ಜೊತೆಗೆ ವಿವಾಹ ಮಾಡಿಕೊಡಲಾಗಿತ್ತು.

ದಂಪತಿಗೆ ಇಬ್ಬರು ಗಂಡು ಮಕ್ಕಳಿದ್ದಾರೆ. ರಘು ತನ್ನ ಹುಟ್ಟೂರಿನಲ್ಲಿ ಇರದೆ ಎರಡು ವರ್ಷಗಳ ಹಿಂದೆ ಹಿರೀಸಾವೆಯಲ್ಲಿ ಬಾಡಿಗೆ ಮನೆ ಮಾಡಿಕೊಂಡು ಕುಟುಂಬ ಸಮೇತ ವಾಸವಿದ್ದ. ಕೂಲಿ ಕೆಲಸ ಮಾಡಿಕೊಂಡಿದ್ದ ಆತ ವಿಪರೀತ ಮದ್ಯ ವ್ಯಸನಿಯಾಗಿದ್ದ.

ಬುಧವಾರ ಮಧ್ಯಾಹ್ನ ಹೆಂಡತಿ ರೇಖಾ ಜೊತೆಗೆ ಜಗಳ ಮಾಡಿದ್ದು, ಆವೇಶದಲ್ಲಿ ಚಾಕು ವಿನಿಂದ ಕುತ್ತಿಗೆಗೆ ಇರಿದಿದ್ದಾನೆ. ಪಕ್ಕದ ಮನೆಯಲ್ಲಿ ಟ್ಯೂಷನ್‌ಗೆಂದು ತೆರಳಿದ್ದ ಹಿರಿಯ ಪುತ್ರ ಜೋರು ಶಬ್ದ ಕೇಳಿದ್ದಕ್ಕೆ ಓಡಿ ಬಂದಿದ್ದು, ಅಮ್ಮ ರಕ್ತದ ಮಡುವಿನಲ್ಲಿ ಬಿದ್ದಿರುವುದನ್ನು ಕಂಡಿದ್ದಾನೆ. ಕೈಯಲ್ಲಿ ಚಾಕು ಹಿಡಿದು ನಿಂತಿದ್ದ ರಘು ಮಗ ಬರುತ್ತಿದ್ದಂತೆ ಅಲ್ಲಿಂದ ಕಾಲ್ಕಿತ್ತಿ ದ್ದಾನೆ. ಸ್ಥಳೀಯರು ದೌಡಾಯಿಸಿ ರೇಖಾ ಅವರನ್ನು ಹಿರೀಸಾವೆ ಆಸ್ಪತ್ರೆಗೆ ಕರೆದೊಯ್ದು ಚಿಕಿತ್ಸೆ ಕೊಡಿಸಿದರು. ಹೆಚ್ಚಿನ ಚಿಕಿತ್ಸೆಗಾಗಿ ಎ.ಸಿ. ಗಿರಿ ಆಸ್ಪತ್ರೆಗೆ ಕರೆದೊಯ್ಯುತ್ತಿದ್ದಾಗ ಮಾರ್ಗಮಧ್ಯೆ ಮೃತಪಟ್ಟಿದ್ದಾರೆ. ಹಿರೀಸಾವೆ ಠಾಣೆಯಲ್ಲಿ ಪ್ರಕರಣ ದಾಖಲಾಗಿದೆ.

# ಭ್ರಷ್ಟರ ಕೂಪವಾದ ಜಿಲ್ಲಾ ಪಂಚಾಯಿತಿ: ಸಿಇಒಗೆ ಪಾಲೆಷ್ಟು?

### ವಸತಿ, ನರೇಗಾ, ಜೆಜೆಎಂ, ಗ್ರಾಮೀಣಾಭಿವೃದ್ಧಿ ಯೋಜನೆಯಡಿ ಭಾರೀ ಅವ್ಯವಹಾರ | ಲಂಚಬಾಕ ಅಧಿಕಾರಿಗಳ ವಿರುದ್ಧ ಲೋಕಾಯುಕ್ತ ಅಸ್ತ್ರ

• ಪ್ರಜೋದಯ ವರದಿ

**ಹಾಸನ:** ಜಿಲ್ಲಾ ಮತ್ತು ತಾಲ್ಲೂಕು ಪಂಚಾಯಿತಿಯಲ್ಲಿ ಚುನಾಯಿತ ಜನ ಪ್ರತಿನಿಧಿಗಳಿಲ್ಲದೆ ಅಧಿಕಾರಿಗಳದ್ದೇ ರಾಜ್ಯಭಾರ ನಡೆಯುತ್ತಿರುವುದರಿಂದ ಭ್ರಷ್ಟರು, ಲಂಚ ಬಾಕರ ಕೂಪವಾಗಿ ಮಾರ್ಪಟ್ಟಿದೆ.

ಜಿಲ್ಲೆಯಲ್ಲಿ ಪ್ರಸ್ತುತ ಭಾರೀ ಸದ್ದು ಮಾಡುತ್ತಿರುವ ಪ್ರಧಾನ ಮಂತ್ರಿ ಆವಾಜ್ ಯೋಜನೆ (ಪಿಎಂಎವೈ) ಯಡಿ 4 ಕೋಟಿ ರೂ. ಅವ್ಯವಹಾರ, ಗ್ರಾಮೀಣಾಭಿವೃದ್ಧಿ ಯೋಜನೆಯಡಿ ನಡೆಸಿದ ಕಾಮಗಾರಿಗಳಿಗೆ ಹಣ ಮಂಜೂರು ಮಾಡಲು ಗುತ್ತಿಗೆದಾರ ರಿಂದ ಲಂಚಕ್ಕೆ ಬೇಡಿಕೆ, ಜಲಜೀವನ್ ಮಿಷನ್ (ಜೆಜೆಎಂ) ಯೋಜನೆಯಡಿ ಕೋಟ್ಯಾಂತರ ರೂ. ಅಕ್ರಮ, ನರೇಗಾ ಯೋಜನೆಯಡಿಕಾಮಗಾರಿಗಳನ್ನು ಮಂಜೂರು ಮಾಡಲು ಗ್ರಾಮ ಪಂಚಾಯಿತಿ ಅಧ್ಯಕ್ಷರು, ಸದಸ್ಯರಿಂದ ಕಮೀಷನ್ ವಸೂಲಿ ನಡೆಯುತ್ತಿದೆ. ಈ ಎಲ್ಲಾ ಅಕ್ರಮ-ಅವ್ಯವಹಾರದಲ್ಲಿ ಜಿಲ್ಲಾ ಪಂಚಾಯಿತಿ ಮುಖ್ಯಾಧಿಕಾರಿ ಬಿ.ಆರ್. ಪೂರ್ಣಿಮಾ ಅವರ ಪಾಲು ಎಷ್ಟಿದೆ ಎಂದು ಸಾರ್ವಜನಿಕರು ಪ್ರಶ್ನಿಸುತ್ತಿದ್ದಾರೆ. » ನಾಲ್ಕನೇ ಪುಟದಲ್ಲಿ





#### ತಿರುಗಿ ಬಿದ್ದ ಪಿಡಿಒಗಳು-ಸಚಿವರಿಗೆ ಪತ್ರ

ವಸತಿ ಯೋಜನೆಯಡಿ ನಡೆದಿರುವ ಅಕ್ರಮದಲ್ಲಿ ಜಿಲ್ಲಾ ಮತ್ತು ತಾಲ್ಲೂಕು ಪಂಚಾಯಿತಿ ಅಧಿಕಾರಿಗಳನ್ನು ಬಿಟ್ಟು ಪಂಚಾಯಿತಿ ಅಭಿವೃದ್ಧಿ ಅಧಿಕಾರಿಗಳನ್ನು ಬಲಿಪಶು ಮಾಡಲಾಗುತ್ತಿದೆ ಎಂದು ಆರೋಪಿಸಿ, ಪಿಡಿಒಗಳು ಜಿಲ್ಲಾ ಪಂಚಾಯಿತಿ ಸಿಇಒ ವಿರುದ್ಧ ತಿರುಗಿ ಬಿದ್ದು, ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯಿತ್ ರಾಜ್ ಸಚಿವ ಪ್ರಿಯಾಂಕ್ ಖರ್ಗೆ ಅವರಿಗೆ ಪತ್ರ ಬರೆದಿದ್ದಾರೆ.

ಪಿಎಂಎವೈ ಯೋಜನೆಯಡಿ ಫಲಾನುಭವಿಗಳ ಆಯ್ಕೆ, ಗುರಿ ನಿಗದಿ, ಫಲಾನುಭವಿ ಪಟ್ಟಿ ಮಾಡಿ ಅನುಮೋದನೆ ಪಡೆಯುವುದು, ಪ್ರಸ್ತಾವನೆ ಸಲ್ಲಿಸುವುದು, ತಂತ್ರಾಂಶ ಲಾಗಿನ್ ಬಳಸಲು ನಮಗೆ ಅವಕಾಶ ನೀಡಿಲ್ಲ. ಆದ್ದರಿಂದ ವಸತಿ ಯೋಜನೆಯಡಿ ಅನುದಾನ ದುರ್ಬಳಕೆ ಆಗಿರುವುದರಲ್ಲಿ ಪಿಡಿಒಗಳ ಪಾತ್ರವಿಲ್ಲ, ನಮ್ಮ ಮೇಲೆ ಕ್ರಮ ಸರಿಯಲ್ಲವೆಂದು ಸಚಿವರಿಗೆ ಪತ್ರ ಬರೆದು ಕೋರಿಕೊಂಡಿದ್ದಾರೆ.

#### ನರೇಗಾ ಕಾಮಗಾರಿ ಅನುಮೋದನೆಗೆ ಕಮೀಷನ್

ಮಹಾತ್ಮಗಾಂಧಿ ರಾಷ್ಟ್ರೀಯ ಗ್ರಾಮೀಣ ಉದ್ಯೋಗ ಖಾತ್ರಿ ಯೋಜನೆಯಡಿ ಕಾಮಗಾರಿ ಮಂಜೂರು ಮಾಡಬೇಕಾದರೆ ಮೊದಲೇ ಜಿಲ್ಲಾ ಪಂಚಾಯಿತಿ ಕಾರ್ಯ ನಿರ್ವಹಣಾಧಿಕಾರಿ, ಮುಖ್ಯ ಲೆಕ್ಕಾಧಿಕಾರಿಗೆ 15 ರಿಂದ 20 ಪರ್ಸೆಂಟ್ ಕಮೀಷನ್ ನೀಡಿ, ಅನುಮೋದನೆ ಪಡೆಯ ಬೇಕಿದೆ. ಗ್ರಾಮ ಪಂಚಾಯಿತಿ ಅಧ್ಯಕ್ಷರು, ಸದಸ್ಯರು ತಮ್ಮ ಗ್ರಾಮದ ಅಭಿವೃದ್ಧಿಗೆ ನರೇಗಾ ಯೋಜನೆಯಡಿ ಸಿಮೆಂಟ್ ರಸ್ತೆ, ಚರಂಡಿ, ಸ್ಮಶಾನ ಅಭಿವೃದ್ಧಿ, ಶಾಲಾ ಕಾಂಪೌಂಡ್ ನಿರ್ಮಾಣ, ಕೆರೆ ಅಭಿವೃದ್ಧಿ, ನಮ್ಮ ಹೊಲ-ನಮ್ಮ ರಸ್ತೆ ಕಾಮಗಾರಿಗೆ ಅನುಮೋದನೆ ಪಡೆದು, ಹಣ ಬಿಡುಗಡೆ ಮಾಡಬೇಕಾದರೆ ಜಿಲ್ಲಾ ಪಂಚಾಯಿತಿ ಅಧಿಕಾರಿಗಳನ್ನು ಸಂಪರ್ಕಿಸಿ, ಕಮೀಷನ್ ನೀಡಿದರೆ ಮಾತ್ರ ಸಾಧ್ಯವಾಗುತ್ತದೆ. ಬಿಲ್ ಮಂಜೂರು ಮಾಡಬೇಕಾದರೂ ಇಂಜಿನೀಯರ್, ಎಫ್‌ಡಿಎಗಳಿಗೆ ಲಂಚ ನೀಡ ಬೇಕಿದೆ. 5 ಲಕ್ಷ ರೂ. ಕಾಮಗಾರಿಗೆ ಅನುಮೋದನೆ ಪಡೆದು, ಹಣ ಮಂಜೂರಾಗಬೇಕಾದರೆ ಅಧಿಕಾರಿಗಳಿಗೆ 60 ರಿಂದ 70 ಸಾವಿರ ರೂ. ಲಂಚ ನೀಡಬೇಕೆಂದು ಸಕಲೇಶಪುರ ತಾಲ್ಲೂಕಿನ ಗ್ರಾಮ ಪಂಚಾಯಿತಿ ಅಧ್ಯಕ್ಷರೊಬ್ಬರು ಆರೋಪಿಸಿದ್ದಾರೆ.

> ಜಿಲ್ಲಾ ಪಂಚಾಯಿತಿ ಮುಖ್ಯ ಕಾರ್ಯ ನಿರ್ವಹಣಾಧಿಕಾರಿ ಗಮನಕ್ಕೆ ಬರದೇ ವಸತಿ ಯೋಜನೆಯಡಿ ಅಕ್ರಮ ನಡೆಯಲು ಸಾಧ್ಯವಿಲ್ಲ. ಸರ್ಕಾರಕ್ಕೆ ನೈತಿಕತೆ ಇದ್ದರೆ ಕೂಡಲೇ ಸಂಬಂಧಪಟ್ಟ ಅಧಿಕಾರಿಗಳನ್ನು ಅಮಾನತುಗೊಳಿಸಿ ತನಿಖೆ ನಡೆಸಿ, ತಪ್ಪಿತಸ್ಥ ಅಧಿಕಾರಿಗಳನ್ನು ಜೈಲಿಗೆ ಕಳುಹಿಸಬೇಕು.
>
> -ಸಿಮೆಂಟ್ ಮಂಜು, ಶಾಸಕ

> ಫಲಾನುಭವಿಗಳಿಗೆ ಹಣ ವರ್ಗಾವಣೆಯನ್ನು ಜಿಲ್ಲಾ ಪಂಚಾಯಿತಿ ಮುಖ್ಯ ಕಾರ್ಯನಿರ್ವಹಣಾಧಿಕಾರಿ, ಲೆಕ್ಕಾಧಿಕಾರಿಯೇ ಮಾಡುವು ದರಿಂದ ವಸತಿ ಯೋಜನೆಯಡಿ ನಡೆದಿರುವ ಅಕ್ರಮದಲ್ಲಿ ಅವರೂ ಭಾಗಿಯಾಗಿದ್ದಾರೆ. ಜಿಲ್ಲಾ ಪಂಚಾಯಿತಿ ಸಿಇಒ, ತಾಲ್ಲೂಕು ಪಂಚಾಯಿತಿ ಇಒಗಳ ವಿರುದ್ಧ ಲೋಕಾ ಯುಕ್ತಕ್ಕೆ ದೂರು ನೀಡಿದ್ದೇನೆ.
>
> -ಅಗಿಲೆ ಯೋಗೇಶ್, ಎಎಪಿ ರಾಜ್ಯ ಉಪಾಧ್ಯಕ್ಷ

## ಪರಿಹಾರಕ್ಕಾಗಿ ದಾಖಲೆ ಸಲ್ಲಿಕೆಗೆ ಸೂಚನೆ

• ಪ್ರಜೋದಯ ವರದಿ

**ಹಾಸನ:** ರಾಷ್ಟ್ರೀಯ ಹೆದ್ದಾರಿ 373 ಚಿಕ್ಕಮಗಳೂರು-ಬಿಳಿಕೆರೆ ರಸ್ತೆಯ 27.780 ಕಿ.ಮೀ.ಯಿಂದ 57.320ರ ವರೆಗೆ ಕೈಗೊಂಡಿರುವ ಕಾಮಗಾರಿಗೆ ಜಮೀನು ನೀಡಿದವರು ಪರಿಹಾರಕ್ಕೆ ಅಗತ್ಯ ದಾಖಲೆಗಳನ್ನು ಸಲ್ಲಿಸುವಂತೆ ಸೂಚಿಸಿದೆ.

ಬೇಲೂರು ತಾಲ್ಲೂಕಿನ ಮುದಿಗೆರೆಯಿಂದ ಹಾಸನದ ತಣ್ಣೀರುಹಳ್ಳ ವೃತ್ತದ ವರೆಗೆ ಚತುಷ್ಪಥ ರಸ್ತೆ (ಪ್ಯಾಕೇಜ್-2) ಕಾಮಗಾರಿಗೆ ಸಂಬಂಧಿಸಿ ಭೂಸ್ವಾಧೀನಕ್ಕೆ ಒಳಪಡುವ ಜಮೀನುಗಳ ಮಾಲೀಕರಿಗೆ 3ಎ ಅವಾರ್ಡ್ ನೋಟೀಸ್‌ಗಳನ್ನು ನೀಡಲಾಗಿರುತ್ತದೆ. 3ಎ ಅವಾರ್ಡ್ ನೋಟೀಸ್‌ಗಳಲ್ಲಿ ನಮೂದಿಸಿರುವ ದಾಖಲೆಗಳನ್ನು ವಿಶೇಷ ಭೂಸ್ವಾಧೀನಾಧಿಕಾರಿಗೆ ಸಲ್ಲಿಸಿದೆ. ಹೀಗಾಗಿ ಪರಿಹಾರ ಮೊತ್ತವನ್ನು ಸಂದಾಯ ಮಾಡಲಾಗುತ್ತದೆ. ಈವರೆಗೂ ದಾಖಲೆಗಳನ್ನು ಸಲ್ಲಿಸದೇ ಇರುವ ಭೂಮಾಲೀಕರು ಸೆ.23ರ ರೊಳಗಾಗಿ ಅವಶ್ಯ ದಾಖಲೆಗಳನ್ನು ಈ ಬೆಂಗಳೂ ರಿನ ಕೆ.ಆರ್.ವೃತ್ತದಲ್ಲಿರುವ ವಿಶೇಷ ಭೂಸ್ವಾಧೀನಾಧಿಕಾರಿ ಮತ್ತು ಸಕ್ಷಮ ಪ್ರಾಧಿಕಾರ, ರಾಷ್ಟ್ರೀಯ ಹೆದ್ದಾರಿಗಳು, ಲೋಕೋಪಯೋಗಿ ಇಲಾಖೆ ಕಚೇರಿ ಇಲ್ಲಿಗೆ ಸಲ್ಲಿಸಬೇಕೆಂದು ತಿಳಿಸಿದೆ.

# ಬೇಲೂರು ತಾಲ್ಲೂಕಿನ ಕೆರೆಗೆ ಎತ್ತಿನಹೊಳೆ ನೀರು

• ಪ್ರಜೋದಯ ವರದಿ

**ಹಾಸನ:** ಎತ್ತಿನಹೊಳೆ ಯೋಜನೆ ಕಾಮಗಾರಿಗೆ ಅರಣ್ಯ ಇಲಾಖೆಯಿಂದ ಅಡ್ಡಿ ಉಂಟಾಗಿ ರುವುದರಿಂದ ಪೋಲಾಗುತ್ತಿದ್ದ ನೀರನ್ನು ಬೇಲೂರು ತಾಲ್ಲೂಕಿನ ಕೆರೆಗಳ ಭರ್ತಿ ಮಾಡಲು ಬಳಸಿಕೊಳ್ಳಲಾಗುತ್ತಿದೆ.

ಈ ಬಾರಿ ಮಳೆಗಾಲದಲ್ಲಿ ಸಂಗ್ರಹವಾದ ನೀರನ್ನು ಮೇಲೆತ್ತಬೇಕಾದ ಅನಿವಾರ್ಯತೆ ಮತ್ತು ಮೋಟರ್‌ಗಳ ಪರೀಕ್ಷಾ ಕಾರ್ಯ ನಡೆಯುತ್ತಿರುವುದರಿಂದ ನೀರನ್ನು ವ್ಯರ್ಥವಾಗಿ ಹೇಮಾವತಿ ನದಿಗೆ ಮತ್ತು ಚಿತ್ರದುರ್ಗ ಜಿಲ್ಲೆಯಲ್ಲಿರುವ ವಾಣಿವಿಲಾಸ ಸಾಗರಕ್ಕೆ ಹರಸಲಾಗುತ್ತಿತ್ತು. ಈ ನೀರನ್ನು ಸದ್ಬಳಕೆ ಮಾಡಿಕೊಂಡು ಬೇಲೂರು ತಾಲ್ಲೂಕಿನಲ್ಲಿರುವ ಕೆರೆಗಳ ಭರ್ತಿಗೆ ಕ್ರಮ ವಹಿಸಲಾಗಿದೆ.

ಗುರುವಾರ ಶಾಸಕ ಹೆಚ್.ಕೆ.ಸುರೇಶ್ ಅವರ ನೇತೃತ್ವದಲ್ಲಿ ಬೇಲೂರು ತಾಲ್ಲೂಕಿನ ಬೆಟ್ಟದಾಲೂರು ಗ್ರಾಮದ ಹತ್ತಿರವಿರುವ ಎತ್ತಿನಹೊಳೆ ನೀರಾವರಿ ಯೋಜನೆಯ ಕಾಗೆದಹಳ್ಳಿ ಎಕ್ಸಿಟ್ ಗೇಟ್ ಬಳಿ ಅಧಿಕಾರಿಗಳು ಹಾಗು ರೈತ ಪ್ರತಿನಿಧಿಗಳು ಭೇಟಿ ನೀಡಿ ಪರಿಶೀಲನೆ ನಡೆಸಿದರು. ಈ ಸಂದರ್ಭದಲ್ಲಿ ನೀರನ್ನು ಮುಂದಕ್ಕೆ ಹರಿಸುವ ಕುರಿತು ತಕ್ಷಣ ಕ್ರಮ ಕೈಗೊಳ್ಳುವಂತೆ ಅಧಿಕಾರಿಗಳಿಗೆ ಸೂಚನೆ ನೀಡಲಾಯಿತು.



ಈ ವೇಳೆ ಅಧಿಕಾರಿಗಳು, ಶಾಸಕರು ಕಾಗೆದಹಳ್ಳಿ ಎಕ್ಸಿಟ್ ಗೇಟ್‌ನಲ್ಲಿ ನೀರಿನ ಹರಿವು ಪರಿ ಶೀಲನೆ ನಡೆಸಿ, ನೀರಿನ ಹಂಚಿಕೆ ರೈತರೊಂದಿಗೆ ಸಮಾಲೋಚನೆ ನಡೆಸಿ, ಸಮನ್ವಯದ ಆಧಾರದ ಮೇಲೆ ಮುಂದಿನ ದಿನಗಳಲ್ಲಿ ನಿರಂತರ ನೀರಾವರಿ ವ್ಯವಸ್ಥೆ ಕಲ್ಪಿಸುವ ಬಗ್ಗೆ ಚರ್ಚಿಸಲಾಯಿತು.

ಅಧಿಕಾರಿಗಳು ನಿರ್ದೇಶನದಂತೆ ನೀರು ಬಿಡುಗಡೆ ಮಾಡುವುದರಿಂದ ಮಾದಿಹಳ್ಳಿ ಹಾಗು ಹಳೇಬೀಡು ಹೋಬಳಿಯ ಅನೇಕ ಗ್ರಾಮಗಳ ಕೆರೆಗಳಿಗೆ ಜೀವಕಳೆ ಬಂದಂತಾಗಿದೆ. ಮುಂದಿನ ದಿನಗಳಲ್ಲಿ ಬೇಲೂರು ತಾಲ್ಲೂಕಿನ ಕೋಮಾರನಹಳ್ಳಿ, ವಡ್ಡರಹಳ್ಳಿ, ಅಡಗೂರು, ಗೋಣಿ ಸೋಮನಹಳ್ಳಿ, ದಾಸಗೋಡನಹಳ್ಳಿ, ಘಟ್ಟದಹಳ್ಳಿ, ಲಿಂಗಪ್ಪನ ಕೊಪ್ಪಲು, ದ್ಯಾವಪ್ಪನಹಳ್ಳಿ ಸೇರಿ ಹಲ ಹಳ್ಳಿಗಳ ಕೆರೆಗಳು ತುಂಬಿಕೊಳ್ಳುವುದರಿಂದ ಕೃಷಿ ಚಟುವಟಿಕೆಗಳಿಗೆ ಅನುಕೂಲವಾಗಲಿದೆ ಎಂದು ರೈತರು ಸಂತೋಷ ವ್ಯಕ್ತಪಡಿಸಿದ್ದಾರೆ.

## ರೈಲ್ವೆ ಕಾಮಗಾರಿಯಿಂದ ರಸ್ತೆಗೆ ಅಡ್ಡಿ: ಪರಿಶೀಲನೆ

• ಪ್ರಜೋದಯ ವರದಿ



**ಹಾಸನ:** ರಾಜಘಟ್ಟದಲ್ಲಿ ರೈಲ್ವೆ ಇಲಾಖೆಯಿಂದ ನಡೆಯುತ್ತಿರುವ ಕಾಮಗಾರಿಯಿಂದ ಸ್ಥಳೀಯ ನಿವಾಸಿಗಳ ಸಂಚಾರಕ್ಕೆ ಸಮಸ್ಯೆ ಉಂಟಾಗುತ್ತದೆಂಬ ಆರೋಪ ಕೇಳಿ ಬಂದ ಹಿನ್ನಲೆ ಸಂಸದ ಶ್ರೇಯಸ್ ಪಟೇಲ್ ಅವರು ಬುಧವಾರ ಭೇಟಿ ನೀಡಿ ಪರಿಶೀಲನೆ ನಡೆಸಿದರು.

ರಾಜಘಟ್ಟ, ಗವೇನಹಳ್ಳಿ ಸೇರಿ ಸುತ್ತಲಿನ ಬಡಾವಣೆಗಳಿಗೆ ಸಂಪರ್ಕ ಕಲ್ಪಿಸುವ ರಸ್ತೆಗೆ ತೊಂದರೆಯಾಗದ ರೀತಿ ಯಲ್ಲಿ ರೈಲ್ವೆ ಇಲಾಖೆ ಕಾಮಗಾರಿ ನಡೆಸುತ್ತಿದೆ ಎಂದು ಸ್ಥಳೀಯರು ಆರೋಪಿಸಿದ್ದರು.

ಈ ವೇಳೆ ಮಾತನಾಡಿದ ಶ್ರೇಯಸ್ ಪಟೇಲ್ ಅವರು, ಸಾರ್ವಜನಿಕರಿಗೆ ತೊಂದರೆ ಆಗುವ ಯಾವ ಕೆಲಸವನ್ನು ಮಾಡಲು ಬಿಡುವುದಿಲ್ಲ. ಈ ಬಗ್ಗೆ ಈಗಾಗಲೇ ರೈಲ್ವೆ ಇಲಾಖೆ ಅಧಿಕಾರಿಗಳೊಂದಿಗೆ ಮಾತನಾಡಿದ್ದು ಶುಕ್ರವಾರವೇ ಅಧಿಕಾರಿಗಳ ತಂಡ ಭೇಟಿ ನೀಡಿ ಪರಿಶೀಲಿಸಲಿದೆ. ಈ ಬಗ್ಗೆ ಸ್ಥಳೀ ಯರು ಆತಂಕಕ್ಕೆ ಒಳಗಾಗದೆ ನಿರ್ಭೀತಿಯಿಂದ ಇರುವಂತೆ ಧೈರ್ಯ ತುಂಬಿದರು. ಪಾಲಿಕೆ ಸದಸ್ಯ ರಕ್ಷಿತ್ ಇದ್ದರು.

## ಬೂವನಹಳ್ಳಿ ಮಾದರಿ ಗ್ರಾಮವಾಗಿಸುವ ಭರವಸೆ

• ಪ್ರಜೋದಯ ವರದಿ

**ಹಾಸನ:** ಮಹಾನಗರ ಪಾಲಿಕೆ ವ್ಯಾಪ್ತಿಯ ಬೂವನಹಳ್ಳಿ ಗ್ರಾಮಕ್ಕೆ ಮೂಲ ಸೌಕರ್ಯ ಕಲ್ಪಿಸಿ ಮಾದರಿ ಗ್ರಾಮವಾಗಿಸಲು ಕ್ರಮ ಕೈಗೊಳ್ಳಲಾಗುವುದೆಂದು ಶಾಸಕ ಹೆಚ್.ಪಿ.ಸ್ವರೂಪ್ ಅವರು ಭರವಸೆ ನೀಡಿದರು.

ಗ್ರಾಮ ಅಭಿವೃದ್ಧಿ ಸಂಬಂಧ ಎರಡು ದಿನ ವಿಶೇಷ ಸಭೆ ನಡೆಸಿದ್ದ ಅವರು ಗುರುವಾರ ಮಾತನಾಡಿ, ರಸ್ತೆ, ಕುಡಿಯುವ ನೀರು, ಮೂಲ ಸೌಕರ್ಯ ಕೊರತೆಯಿಂದ ಜನ ಜೀವನಕ್ಕೆ ತೊಂದರೆಯಾಗಬಾರದು. ಸಂಬಂಧಪಟ್ಟ ಇಲಾಖೆಯವರು ಶೀಘ್ರ ಸಮಸ್ಯೆಗೆ ಪರಿಹಾರ ಕ್ರಮ ಕೈಗೊಳ್ಳಬೇಕು. ಅಭಿವೃದ್ಧಿ ಕಾಮಗಾರಿಗೆ ಅನಗತ್ಯ ವಿಳಂಬ ಆಗದಂತೆ ನಿಯಮಾವಳಿ ಪಾಲಿಸಿ ನಿಗದಿತ ಅವಧಿಯಲ್ಲಿ ಕಾಮಗಾರಿ ಪೂರ್ಣ ಗೊಳಿಸಬೇಕೆಂದು ಸೂಚನೆ ನೀಡಿದರು.

ಮುಖ್ಯವಾಗಿ ರಸ್ತೆ ಕಾಮಗಾರಿಗೆ ಪ್ರಾಮುಖ್ಯತೆ ನೀಡಬೇಕು. ಶುದ್ಧ ಕುಡಿಯುವ ನೀರಿನ ಸಮಸ್ಯೆ ಪರಿಹಾರಕ್ಕೆ ತುರ್ತು ಯೋಜನೆ ಸಿದ್ಧಪಡಿಸಬೇಕೆಂದು ಹೇಳಿದರು.



#### ಸ್ಮಶಾನ ಜಾಗವಿಲ್ಲದೆ ಪರದಾಟ

ಗ್ರಾಮದಲ್ಲಿ ಸ್ಮಶಾನ ಜಾಗವಿಲ್ಲದೆ ಅಂತ್ಯಕ್ರಿಯೆಗೆ ಭಾರೀ ಸಮಸ್ಯೆಯಾಗುತ್ತಿದೆ ಎಂದು ಗ್ರಾಮಸ್ಥರು ಶಾಸಕರ ಗಮನಕ್ಕೆ ತಂದರು. ಸ್ಥಳಕ್ಕೆ ಭೇಟಿ ನೀಡಿದ ಶಾಸಕ ಹೆಚ್.ಪಿ.ಸ್ವರೂಪ್ ಅವರು, ಹುಡಾ ಅಧಿಕಾರಿಗಳೊಂದಿಗೆ ಚರ್ಚಿಸಿ ಸಮಸ್ಯೆಗೆ ಪರಿಹಾರ ಕಲ್ಪಿಸುವಂತೆ ಸೂಚಿಸಿದರು. ಅಂತ್ಯಕ್ರಿಯೆಗೆ ಯಾವ ತೊಂದರೆ ಆಗದಂತೆ ಸೂಕ್ತ ಕ್ರಮ ಕೈಗೊಳ್ಳುವುದಾಗಿ ಭರವಸೆ ನೀಡಿದರು.

ಸ್ಮಶಾನ ಜಾಗದ ಗಡಿ ನಿಗದಿ, ರಸ್ತೆ ಸಂಪರ್ಕ, ಶೌಚಾಲಯ, ಕುಡಿಯುವ ನೀರು ಹಾಗು ಬೆಳಕು ವ್ಯವಸ್ಥೆ ಸೇರಿ ಮೂಲ ಸೌಕರ್ಯ ಕಲ್ಪಿಸಲು ತುರ್ತು ಕ್ರಮ ಕೈಗೊಳ್ಳುವಂತೆ ಅಧಿಕಾರಿ ಗಳಿಗೆ ಸೂಚಿಸಿದರು. ಸ್ಮಶಾನಕ್ಕಾಗಿ ಮೀಸಲಿರುವ 3 ಎಕರೆ 18 ಗುಂಟೆ ಜಾಗದ ಸರ್ವೆ » ನಾಲ್ಕನೇ ಪುಟದಲ್ಲಿ

### ರಾಷ್ಟ್ರೀಯ ಅರಣ್ಯ ಹುತಾತ್ಮರ ದಿನಾಚರಣೆಯಲ್ಲಿ ನ್ಯಾ|| ಹೇಮಾವತಿ

# ಅರಣ್ಯ ಇಲಾಖೆ ಸಿಬ್ಬಂದಿ ಕರ್ತವ್ಯಕ್ಕೆ ಬೆಲೆ ಕಟ್ಟಲು ಸಾಧ್ಯವಿಲ್ಲ

• ಪ್ರಜೋದಯ ವರದಿ

**ಹಾಸನ:** ಕಾಡುಗಳ್ಳ ವೀರಪ್ಪನ್‌ನಿಂದ ಡಿಸಿಎಫ್ ಪಿ.ಶ್ರೀನಿವಾಸ್ ಅವರು ಹತ್ಯೆಯಾದ ಬಳಿಕ ಜನರಿಗೆ ಅರಣ್ಯ ಇಲಾಖೆ ನೌಕರರು ಅನುಭವಿಸುವ ಕಷ್ಟ-ನಷ್ಟಗಳು ಅರಿವಿಗೆ ಬಂದವು. ಕಾಡು ಪ್ರಾಣಿಗಳು ಹಾಗು ಅರಣ್ಯ ಸಂರಕ್ಷಣೆಗಾಗಿ ಸಿಬ್ಬಂದಿ ಮಾಡುವ ಕೆಲಸಕ್ಕೆ ಬೆಲೆ ಕಟ್ಟಲಾಗುವುದಿಲ್ಲವೆಂದು ಜಿಲ್ಲಾ ಪ್ರಧಾನ ಮತ್ತು ಸತ್ರ ನ್ಯಾಯಾಧೀಶರಾದ ಹೇಮಾವತಿ ಅವರು ಹೇಳಿದರು.

ಅರಣ್ಯ ಇಲಾಖೆ ವತಿಯಿಂದ ನಗರದ ಅರಣ್ಯ ಭವನದಲ್ಲಿ ಗುರುವಾರ ಹಮ್ಮಿಕೊಂಡಿದ್ದ ರಾಷ್ಟ್ರೀಯ ಅರಣ್ಯ ಹುತಾತ್ಮರ ದಿನಾಚರಣೆಯಲ್ಲಿ ಹುತಾತ್ಮರ ಸ್ಮಾರಕಕ್ಕೆ ಗೌರವ ಸಲ್ಲಿಸಿ ಮಾತನಾಡಿ, ಅರಣ್ಯ ಸಂರಕ್ಷಣೆಗಾಗಿ ಪ್ರಾಣದ ಹಂಗು ತೊರೆದು ಕೆಲಸ ಮಾಡಿದ ಸಿಬ್ಬಂದಿಯನ್ನು ಸ್ಮರಿಸುವುದು ಪ್ರಜ್ಞಾವಂತ ನಾಗರಿಕರ ಕರ್ತವ್ಯ. ಅರಣ್ಯ ಸಂರಕ್ಷಣೆ ಮನುಷ್ಯನ ಉಳಿಯುವಿಕೆಯ ಭಾಗ. ಮೊದಲೆಲ್ಲಾ ಸಕಾಲದಲ್ಲಿ ಮಳೆ ಆಗುತ್ತಿತ್ತು. ಇತ್ತೀಚಿನ ದಿನಗಳಲ್ಲಿ ವೈಯುಕ್ತಿಕ ಲಾಭಕ್ಕಾಗಿ ಪರಿಸರ ಹಾಳು ಮಾಡುತ್ತಿದ್ದೇವೆ. ಕಾಡು ಪ್ರಾಣಿಗಳು ನಾಡಿಗೆ ಬರುವಂತೆ ನಾವೇ ಮಾಡಿದ್ದೇವೆ. ಈ ಲೋಪದಲ್ಲಿ ಅಭಿವೃದ್ಧಿ ಜೊತೆಗೆ ವೈಯಕ್ತಿಕ ಹಿತಾಸಕ್ತಿಯು ಅಡಗಿದೆ. ಅರಣ್ಯ ಸಂರಕ್ಷಣೆಗಾಗಿ ಜೀವದ ಹಂಗು ತೊರೆದು ಕುಟುಂಬವನ್ನು ಮರೆತು ಮಡಿದ ಸಿಬ್ಬಂದಿಗೆ ಗೌರವ ಸಲ್ಲಿಸಬೇಕೆಂದು ಹೇಳಿದರು.



2013ರಿಂದ ರಾಷ್ಟ್ರದಲ್ಲಿ ಅರಣ್ಯ ಹುತಾತ್ಮರ ದಿನಾಚರಣೆ ಜಾರಿಗೆ ಬಂದಿದೆ. ಬೇರೆಯವರ ಉತ್ತಮ ಬದುಕಿಗಾಗಿ ತಮ್ಮ ಪ್ರಾಣ ತ್ಯಜಿಸಿದ ಮಹನೀಯರಿಗೆ ಗೌರವಿಸೋಣ. ಪರಿಸರ ಸಂರಕ್ಷಣೆ ದೃಷ್ಟಿಯಿಂದ ಕಾನೂನು ಎಷ್ಟೇ ಬಿಗಿಯಾಗಿದ್ದರೂ ಅರಣ್ಯ ನಾಶ, ಒತ್ತುವರಿ ನಡೆಯುತ್ತಲೇ ಇದೆ. ಈ ಬಗ್ಗೆ ಜನರಿಗೆ ತಿಳಿವಳಿಕೆ ಮೂಡಿಸುವ ಕಾರ್ಯಕ್ರಮಗಳು ಹೆಚ್ಚಬೇಕೆಂದರು.

ಜಿಲ್ಲಾಧಿಕಾರಿ ಕೆ.ಎಸ್.ಲತಾಕುಮಾರಿ ಅವರು ಮಾತನಾಡಿ, ಜೀವವನ್ನು ತೊರೆದು ಅರಣ್ಯಕ್ಕಾಗಿ ಪ್ರಾಣ ಬಿಟ್ಟವರ ಬಗ್ಗೆ ಹೆಮ್ಮೆಯಾಗುತ್ತದೆ. ಪರಿಸರ ಸಮತೋಲನಕ್ಕೆ ಅರಣ್ಯ ಅತ್ಯವಶ್ಯ. ಕಾಡು ಪ್ರಾಣಿಗಳ ಉಪಟಳ ನಿಯಂತ್ರಣ, ಅರಣ್ಯ ಸಂಪತ್ತು ನಾಶದ ವಿರುದ್ಧ ಕಾರ್ಯಾಚರಣೆಯಲ್ಲಿ ಸಿಬ್ಬಂದಿ ವಹಿಸುವ ಪಾತ್ರ ಮೆಚ್ಚುವಂತಹುದು. ಮನುಷ್ಯರು ಮತ್ತು ಕಾಡು ಪ್ರಾಣಿಗಳ ನಡುವೆ ಸೇತುವೆಯಾಗಿ ಸಿಬ್ಬಂದಿ ಕೆಲಸ ಮಾಡುತ್ತಾರೆ. ಇಲಾಖೆಯ ಕೆಳ ಹಂತದ ಸಿಬ್ಬಂದಿ ಕೆಲಸ ಕಷ್ಟಕರವಾಗಿದ್ದು ಅವರಿಗೆ ಗೌರವಿಸಲೇಬೇಕೆಂದರು.

ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರ ಸದಸ್ಯ ಕಾರ್ಯದರ್ಶಿ ಜಿ.ಕೆ.ದಾಕ್ಷಾಯಿಣಿ ಅವರು ಮಾತನಾಡಿ, ಅರಣ್ಯ ಇಲಾಖೆಯ ಹೊರ ಗುತ್ತಿಗೆ ನೌಕರರು ಕರ್ತವ್ಯ ವೇಳೆ ಮೃತಪಟ್ಟರೆ ಅವರ ಕುಟುಂಬಸ್ಥರಿಗೆ ಅನುಕಂಪದ ಆಧಾರದ ಮೇಲೆ ಕೆಲಸ ಕೊಡಲು ಆಗುತ್ತಿಲ್ಲ. ಈ ನಿಟ್ಟಿನಲ್ಲಿ ಬದಲಾವಣೆ ತರಬೇಕು. ಸರ್ಕಾರ ಆ ನಿಟ್ಟಿನಲ್ಲಿ ಯೋಚಿಸಬೇಕೆಂದರು.

ಅರಣ್ಯ ಸಂರಕ್ಷಣಾಧಿಕಾರಿ ಏಡುಕುಂಡಲು ಅವರು ಮಾತನಾಡಿ, 1730ರಲ್ಲಿ ರಾಜಸ್ಥಾನದ ಖೇಜ್ರಿ » ನಾಲ್ಕನೇ ಪುಟದಲ್ಲಿ

CMYK CMYK CMYK CMYK

# ಸಿನಿ ಪ್ರಜಾ

# ಕಾಂತಾರ-1 ಅಬ್ಬರಕ್ಕೆ ಹೆದರಿ ಸೆಪ್ಟೆಂಬರ್‌ನಲ್ಲಿ ಸಿನಿಜಾತ್ರೆ: ಒಂದೇ ದಿನ ತೆರೆಗೆ ಅಪ್ಪಳಿಸಲಿವೆ 10 ಕನ್ನಡ ಚಿತ್ರಗಳು!



ಸೆಪ್ಟೆಂಬರ್ ತಿಂಗಳಿನಲ್ಲಿ ಕನ್ನಡದ ಹಲವು ಚಿತ್ರಗಳು ಬಿಡುಗಡೆಗೆ ಸಜ್ಜಾಗಿವೆ. ಸೆಪ್ಟೆಂಬರ್ 12ರಂದು ಬರೋಬ್ಬರಿ 10 ಚಿತ್ರಗಳು ತಮ್ಮ ಬಿಡುಗಡೆಯನ್ನು ಘೋಷಿಸಿಕೊಂಡಿವೆ.

ಕಾಂತಾರ ಸಿನಿಮಾದ ಸೀಕ್ವೆಲ್ ಕಾಂತಾರ-1, ಅಕ್ಟೋಬರ್ 2ರಂದು ಬಿಡುಗಡೆಯಾಗಿದೆ. ರಿಷಬ್ ಶೆಟ್ಟಿ ಬರೆದು ನಿರ್ದೇಶಿಸಿದ ಮತ್ತು ನಟಿಸಿದ ಕಾಂತಾರ ಸಿನಿಮಾ 2022 ರಲ್ಲಿ ದೊಡ್ಡ ಯಶಸ್ಸು ಗಳಿಸಿತ್ತು. ಹಾಗಾಗಿ ಇದರ ಸೀಕ್ವೆಲ್ ಆಗಿರುವ ಕಾಂತಾರ-1 ಮೇಲಿರುವ ನಿರೀಕ್ಷೆಗಳು ದೊಡ್ಡ ಮಟ್ಟದಲ್ಲಿವೆ. ಈ ಕಾರಣದಿಂದಾಗಿ

## ಈ ವಾರ 10ಸಿನಿಮಾಗಳು ತೆರೆಗೆ ಬರಲಿವೆ.

ಸೆಪ್ಟೆಂಬರ್ ತಿಂಗಳಿನಲ್ಲಿ ಕನ್ನಡದ ಹಲವು ಚಿತ್ರಗಳು ಬಿಡುಗಡೆಗೆ ಸಜ್ಜಾಗಿವೆ. ಸೆಪ್ಟೆಂಬರ್ 12ರಂದು ಬರೋಬ್ಬರಿ 10 ಚಿತ್ರಗಳು ತಮ್ಮ ಬಿಡುಗಡೆಯನ್ನು ಘೋಷಿಸಿಕೊಂಡಿವೆ.

**ಬಿಡುಗಡೆಯಾಗುತ್ತಿರುವ ಸಿನಿಮಾಗಳು**

**ಜಂಬೂ ಸರ್ಕಸ್:** ಎಂ.ಡಿ. ಶ್ರೀಧರ್ ನಿರ್ದೇಶನದ ಈ ಚಿತ್ರವನ್ನು ಎಚ್.ಸಿ. ಸುರೇಶ್ ನಿರ್ಮಿಸಿದ್ದಾರೆ. ಪ್ರವೀಣ್ ತೇಜ್ ಮತ್ತು ಅಂಜಲಿ ಅನೀಶ್ ನಟಿಸಿರುವ ಈ ಸಿನಿಮಾ ಇಬ್ಬರು ಆತ್ಮೀಯ ಸ್ನೇಹಿತರ ಕಥೆಯನ್ನು ಹೇಳುತ್ತದೆ. ಒಂದೇ ದಿನ ಹುಟ್ಟಿದ ಮಕ್ಕಳು, ಒಂದೇ ಶಾಲಾ-ಕಾಲೇಜು, ಒಂದೇ ಮಂಟಪದಲ್ಲಿ ಮದುವೆ ಹೀಗೆ ಅನೇಕ ಕಾಕತಾಳೀಯಗಳನ್ನು ಹೊಂದಿರುವ ಕಥೆಯಲ್ಲಿ ಹಲವು ಟ್ವಿಸ್ಟ್‌ಗಳಿವೆ ಎನ್ನಲಾಗಿದೆ.

**ಸೆಪ್ಟೆಂಬರ್ 10:** ಸಾಯಿಪ್ರಕಾಶ್ ಅವರ 105ನೇ ನಿರ್ದೇಶನದ ಈ ಚಿತ್ರವನ್ನು ರಾಜಮ್ಮ ಸಾಯಿಪ್ರಕಾಶ್ ನಿರ್ಮಿಸಿದ್ದಾರೆ. ಶಶಿಕುಮಾರ್, ಗಣೇಶ್ ರಾವ್ ಕೇಸಕರ್, ಸಂಧ್ಯಾರಾಣಿ ಮತ್ತು ಶ್ರೀರಕ್ಷಾ ಪ್ರಮುಖ ಪಾತ್ರಗಳಲ್ಲಿ ನಟಿಸಿದ್ದಾರೆ. ಈ ಸಿನಿಮಾದಲ್ಲಿ





ಭಾವನಾತ್ಮಕ ಮತ್ತು ಹಾಸ್ಯಮಯ ಸಿನಿಮಾ ಇದಾಗಿದೆ.

**ಸನ್ ಆಫ್ ಮುತ್ತಣ್ಣ:** ಪ್ರಣಾಮ್ ದೇವರಾಜ್ ನಾಯಕನಾಗಿ ನಟಿಸಿರುವ ಈ ಚಿತ್ರಕ್ಕೆ ಶ್ರೀಕಾಂತ್ ಹುಣಸೂರು ಆಕ್ಷನ್ ಕಟ್ ಹೇಳಿದ್ದಾರೆ. ಖುಷಿ ರವಿ ನಾಯಕಿಯಾಗಿದ್ದು, ರಂಗಾಯಣ ರಘು ಪ್ರಮುಖ ಪಾತ್ರದಲ್ಲಿದ್ದಾರೆ. ತಂದೆ- ಮಗನ ಬಾಂಧವ್ಯದ ಸುತ್ತ ಹೆಣೆದಿರುವ ಸಿನಿಮಾ ಇದಾಗಿದೆ.



**ನಿದ್ರಾದೇವಿ ನೆಕ್ಸ್ಟ್ ಡೋರ್:** ಸುರಾಗ್ ನಿರ್ದೇಶನದ ಮತ್ತು ಜಯರಾಮ ದೇವಸಮುದ್ರ ನಿರ್ಮಿಸಿರುವ ಈ ಚಿತ್ರದಲ್ಲಿ ಪ್ರವೀರ್ ಮತ್ತು ರಿಷಿಕಾ ನಾಯಕ-ನಾಯಕಿಯಾಗಿ ಕಾಣಿಸಿಕೊಂಡಿದ್ದಾರೆ. ಇದು ನಿದ್ದೆ ಸಮಸ್ಯೆ ಇರುವ ಯುವಕನೊಬ್ಬನ ಕಥೆ. ತನ್ನ ಸಮಸ್ಯೆಯಿಂದ ಹೊರಬರಲು ಅವನು ನಡೆಸುವ ಹೋರಾಟದ ಕಥಾಹಂದರವನ್ನು ಈ ಸಿನಿಮಾ ಹೊಂದಿದೆ.

**ಮಿಡಲ್ ಕ್ಲಾಸ್ ರಾಮಾಯಣ:** ಧನುಶ್ ಗೌಡ ವಿ ನಿರ್ದೇಶನದ ಮತ್ತು ಜಯರಾಮ್ ಗಂಗಪ್ಪನಹಳ್ಳಿ ನಿರ್ಮಿಸಿರುವ ಈ ಚಿತ್ರದಲ್ಲಿ ಮೋಕ್ಷಿತಾ ಪೈ ಮತ್ತು ವಿನು ಗೌಡ ಮುಖ್ಯ ಪಾತ್ರಗಳಲ್ಲಿದ್ದಾರೆ. ಒಬ್ಬ ಕಪ್ಪು ಹುಡುಗಿಯನ್ನು ಪ್ರೀತಿಸಿ ಮದುವೆಯಾಗುವ





ನಾಯಕನ ಕಥೆಯು ಹಲವು ಸವಾಲುಗಳನ್ನು ಎದುರಿಸುವ ಅಂಶಗಳನ್ನು ಒಳಗೊಂಡಿದೆ. ಎಸ್. ನಾರಾಯಣ್ ಮತ್ತು ವೀಣಾ ಸುಂದರ್ ಕೂಡಾ ಸಿನಿಮಾದಲ್ಲಿ ನಟಿಸಿದ್ದಾರೆ.

**ರಕ್ಷಕ:** ವಿಜಯ್‌ಕುಮಾರ್ ನಿರ್ದೇಶನ ಮತ್ತು ನಟನೆ ಮಾಡಿರುವ ಈ ಚಿತ್ರದಲ್ಲಿ ಅವರು ಒಬ್ಬ ದಕ್ಷ ಪೊಲೀಸ್ ಅಧಿಕಾರಿಯಾಗಿ ಕಾಣಿಸಿಕೊಂಡಿದ್ದಾರೆ.

ಮಾಯಾವಿ: ಶಂಕರ್ ಜಿ. ನಿರ್ದೇಶನದ ಮತ್ತು ಡಾ. ಮಹಂತೇಶ್ ಹೆಚ್. ನಿರ್ಮಿಸಿರುವ ಈ ಚಿತ್ರದಲ್ಲಿ ರಘುರಾಮ್ ನಾಯಕರಾಗಿ ಮತ್ತು

ನಿಶ್ಚಿತಾ ಶೆಟ್ಟಿ ನಾಯಕಿಯಾಗಿ ನಟಿಸಿದ್ದಾರೆ. ಇದೊಂದು ಸಸ್ಪೆನ್ಸ್ ಮತ್ತು ಕ್ರೈಮ್ ಥ್ರಿಲ್ಲರ್ ಸಿನಿಮಾ ಆಗಿದೆ.

**ರೂಮ್‌ಬಾಯ್:** ಲಿಖಿತ್ ಸೂರ್ಯ ನಾಯಕನಾಗಿ ಮತ್ತು ನಿರ್ಮಾಪಕರಾಗಿರುವ ಈ ಚಿತ್ರವನ್ನು ರವಿ ನಾಗಡದಿನ್ನಿ ನಿರ್ದೇಶಿಸಿದ್ದಾರೆ. ಸೈಕಾಲಜಿಕಲ್ ಸಸ್ಪೆನ್ಸ್ ಕಂ ಕ್ರೈಮ್ ಥ್ರಿಲ್ಲರ್ ಕಥಾಹಂದರ ಹೊಂದಿರುವ ಈ ಸಿನಿಮಾದಲ್ಲಿ ಅನೇಕ ಹೊಸ ಕಲಾವಿದರು ಇದ್ದಾರೆ.

**ಗುರಿ:** ಸೆಲ್ವಂ ಮಾದಪ್ಪನ್ ನಿರ್ದೇಶನದ ಈ ಚಿತ್ರವನ್ನು ರಾಧಿಕಾ.ಎಸ್.ಆರ್ ಮತ್ತು ಚಿತ್ರಲೇಖಾ.ಎಸ್. ನಿರ್ಮಿಸಿದ್ದಾರೆ. ಸರ್ಕಾರಿ ಮತ್ತು ಖಾಸಗಿ ಶಾಲೆಗಳ ನಡುವಿನ ಸಂಘರ್ಷ ಹಾಗೂ ಶಿಕ್ಷಕ-ವಿದ್ಯಾರ್ಥಿ ಬಾಂಧವ್ಯವನ್ನು ಈ ಸಿನಿಮಾ ಹೊರತರಲಿದೆ.

**ರಾಮನಗರ:** ವಿಜಯ್ ರಾಜ್ ನಿರ್ದೇಶಿಸಿರುವ ಈ ಚಿತ್ರವನ್ನು ಸಿ.ಕೆ. ಮಂಜುನಾಥ್ ನಿರ್ಮಿಸಿದ್ದಾರೆ. ಪ್ರಭು ಸೂರ್ಯ ನಾಯಕನಾಗಿ ನಟಿಸಿರುವ ಈ ಚಿತ್ರಕ್ಕೆ ರಾಜ ಯಾರ್ ಗೊತ್ತಾ ಎಂಬ ಟ್ಯಾಗ್‌ಲೈನ್ ಇದೆ.

---

# ಚಿತ್ರ ಶುರುವಾಗಿದೆ, ಯಾವಾಗ ಮುಗಿಯುವುದೋ ಗೊತ್ತಿಲ್ಲ...

ಕನ್ನಡದಲ್ಲಿ ಮುಂದುವರಿದ ಭಾಗಗಳ ಟ್ರೆಂಡ್ ಹೆಚ್ಚಾಗುತ್ತಿದೆ. ಒಂದು ಭಾಗದಲ್ಲಿ ಹೇಳಬೇಕಾದ ಕಥೆಯನ್ನು ಎರಡು ಭಾಗಗಳಿಗೆ ಹಿಗ್ಗಿಸಲಾಗುತ್ತಿದೆ. ಒಂದು ಕಡೆ ಮೊದಲ ಭಾಗದಲ್ಲಿ ಕಥೆ ಮುಂದೆ ಸಾಗುವುದೇ ಇಲ್ಲ, ಇನ್ನೊಂದೆಡೆ ಎರಡನೆಯ ಭಾಗ ಬಿಡುಗಡೆಯಾಗುವುದೂ ಇಲ್ಲ. ಒಟ್ಟಾರೆ ಅರ್ಧಂಬರ್ಧ ಚಿತ್ರ ನೋಡಿ ಪ್ರೇಕ್ಷಕರಿಗೆ ಭ್ರಮನಿರಸನವಾಗಿದೆ

ಗರ್ಭಿಣಿಯರ ಸರಣಿ ಕೊಲೆಗಳಿಗೆ ಅವನೇ ಕಾರಣ ಎಂದು ಪೊಲೀಸರು ಬೆನ್ನಟ್ಟಿ ಹಿಡಿಯುತ್ತಾರೆ. ಆದರೆ, ಅವನನ್ನು ಮೀರಿದ ಇನ್ನೊಬ್ಬ ಕೊಲೆಗಾರನಿದ್ದಾನೆ. ಅವನ್ಯಾರು? ಮುಂದಿನ ಭಾಗದಲ್ಲಿ ನೋಡಿ ಇಷ್ಟಕ್ಕೂ ಆ ಶಂಖ ಎಲ್ಲಿ ಹೋಯಿತು? ಅವರಿಬ್ಬರ ಜೊತೆಗೆ ಮುತ್ತ ಎಲ್ಲಿಗೆ ಹೋದ? ಉತ್ತರ ಮುಂದಿನ ಭಾಗದಲ್ಲಿ....

ವಿಜಯನಗರ ಸಾಮ್ರಾಜ್ಯಕ್ಕೂ, ನಾಯಕನ ಎದೆಯ ಮೇಲಿರುವ ಹಚ್ಚೆಗೂ ಏನು ಸಂಬಂಧ? ಹಚ್ಚೆ 2 ನೋಡಿ ಜಾಸ್ಮಿನ್ ಮಾಯವಾಗಿದ್ದೆಲ್ಲಿ? ಡಿಸೋಜ ಯಾಕೆ ಆಸ್ಟಿನ್ ಮತ್ತು ಜಾಸ್ಮಿನ್ ಮದುವೆಯಾಗಲು ಬಿಡುವುದಿಲ್ಲ? ಉತ್ತರಕ್ಕಾಗಿ ಮುಂದಿನ ಭಾಗ ಬರುವವರೆಗೂ ಕಾಯಬೇಕು....

ಕನ್ನಡ ಚಿತ್ರರಂಗದಲ್ಲಿ ಕೆಲವು ವರ್ಷಗಳಿಂದೀಚೆಗೆ ಒಂದು ವಿಚಿತ್ರ ಟ್ರೆಂಡ್ ಶುರುವಾಗಿದೆ. ಬಿಡುಗಡೆಯಾಗುತ್ತಿರುವ ಕೆಲವು ಚಿತ್ರಗಳಿಗೆ ಅಂತ್ಯವೇ ಇರುವುದಿಲ್ಲ. ಚಿತ್ರವೇನೋ ಶುರುವಾಗಿದೆ, ಆದರೆ ಅದು ಯಾವಾಗ ಮುಗಿಯುವುದೋ ಗೊತ್ತಿಲ್ಲ. ಏಕೆಂದರೆ, ಕಥೆ ಆ ಚಿತ್ರದಲ್ಲಿ ಅಂತ್ಯವಾಗುವುದಿಲ್ಲ. ಕಥೆಯನ್ನು ಅರ್ಧಕ್ಕೆ ನಿಲ್ಲಿಸಿ, ಇನ್ನೊಂದು ಭಾಗಕ್ಕೆ ಮುಂದುವರಿಸಲಾಗುತ್ತಿದೆ. ಕಳೆದೊಂದು ತಿಂಗಳಲ್ಲಿ ಹಚ್ಚೆ, ಎಲ್ಟೂ ಮುತ್ತಾ, ಉಸಿರು ಮತ್ತು ಆಸ್ಟಿನ್‌ನ ಮಹಾನ್ಮೌನ ಸೇರಿದಂತೆ ನಾಲ್ಕು ಚಿತ್ರಗಳು ಅಂತ್ಯವಾಗದೆ, ಇನ್ನೊಂದು ಭಾಗದಲ್ಲಿ ಮುಂದುವರೆಯುವುದಾಗಿ ಘೋಷಿಸಿವೆ.

ಬಾಹುಬಲಿ ಚಿತ್ರದಿಂದ ಶುರುವಾದ ಟ್ರೆಂಡ್: ಭಾರತೀಯ ಚಿತ್ರರಂಗದಲ್ಲಿ ಇಂಥದ್ದೊಂದು ಟ್ರೆಂಡ್ ಶುರುವಾಗಿದ್ದು ಎಸ್.ಎಸ್. ರಾಜಮೌಳಿ ನಿರ್ದೇಶನದ ಬಾಹುಬಲಿ ಚಿತ್ರದಿಂದ. ಬಾಹುಬಲಿ ಚಿತ್ರವನ್ನು ಮೊದಲು ಒಂದೇ ಭಾಗದಲ್ಲಿ ಮಾಡಬೇಕೆಂದು ಉದ್ದೇಶಿಸಲಾಗಿತ್ತು. ಆದರೆ, ಕಥೆ ಮತ್ತು ಕ್ಯಾನ್ವಾಸ್ ಬಹಳ ದೊಡ್ಡದಾಗಿದ್ದರಿಂದ, ಕಥೆಯು ಒಂದು ಚಿತ್ರಕ್ಕೆ ಹೊಂದಿಕೊಳ್ಳಲಿಲ್ಲ. ಚಿತ್ರದಲ್ಲಿನ ಭಾವನೆಗಳಿಗೆ ಧಕ್ಕೆಯಾಗದಂತೆ ಮತ್ತು ಪ್ರೇಕ್ಷಕರು ಆಸಕ್ತಿ ಕಳೆದುಕೊಳ್ಳದಂತೆ ಅದನ್ನು ಹೇಗೆ ನಿರೂಪಿಸಬೇಕು ಎಂಬುದು ರಾಜಮೌಳಿ ಮತ್ತು ಅವರ ತಂದೆ ವಿಜಯೇಂದ್ರ ಪ್ರಸಾದ್ ಅವರಿಗೆ ಚೆನ್ನಾಗಿ ತಿಳಿದಿತ್ತು. ಹಾಗಾಗಿ, ಕಥೆಗೆ ಇನ್ನೊಂದಿಷ್ಟು ವಿಷಯಗಳನ್ನು ಸೇರಿಸಿ, ಎರಡು ಚಿತ್ರಗಳನ್ನಾಗಿ ಮಾಡಿ, ಎಲ್ಲೂ ಚಿತ್ರ ಸಡಿಲವಾಗದಂತೆ ನೋಡಿಕೊಂಡರು. ಎರಡೂ ಚಿತ್ರಗಳು ದೊಡ್ಡ ಯಶಸ್ಸು ಕಾಣುವುದರ ಜೊತೆಗೆ, ಭಾರತೀಯ ಚಿತ್ರರಂಗದಲ್ಲಿ ಮುಂದುವರಿದ ಭಾಗಗಳ ಟ್ರೆಂಡ್ ಶುರುವಾಯಿತು.

ಕನ್ನಡದಲ್ಲಿ ಕೆಜಿಎಫ್ ಹುಟ್ಟುಹಾಕಿದ ಟ್ರೆಂಡ್: ಕನ್ನಡದ ವಿಷಯಕ್ಕೆ ಬಂದರೆ, ಈ ಟ್ರೆಂಡ್ ಯಶ್ ಅಭಿನಯದ ಕೆಜಿಎಫ್ ಚಿತ್ರದಿಂದ ಪ್ರಾರಂಭವಾಯಿತು. ಈ ಚಿತ್ರ ಸಹ ಒಂದೇ ಭಾಗವಾಗಿ ಶುರುವಾಗಿ, ಬೆಳೆಯುತ್ತಾ ದೊಡ್ಡದಾಯಿತು. ಕೊನೆಗೆ ನಿರ್ದೇಶಕ ಪ್ರಶಾಂತ್ ನೀಲ್ ಕಥೆಯನ್ನು ಇನ್ನಷ್ಟು ವಿಸ್ತರಿಸಿ ಎರಡು ಚಿತ್ರಗಳನ್ನಾಗಿ ಮಾಡಿದರು. ಕೆಜಿಎಫ್ ಮೊದಲ ಭಾಗ ಗೆದ್ದ ನಂತರ, ಕನ್ನಡದಲ್ಲಿ ಇದೊಂದು ಟ್ರೆಂಡ್ ಆಗಿದೆ. ಹಲವು ನಿರ್ದೇಶಕರು ಮುಂದುವರಿದ ಭಾಗ ಮಾಡುವ ಪ್ರಯತ್ನಕ್ಕೆ ಕೈಹಾಕಿದ್ದಾರೆ. ಈ ಪೈಕಿ ಯಶಸ್ವಿಯಾಗದಿದ್ದರೂ, ಹೇಳಿದಂತೆ ಎರಡು ಭಾಗಗಳಲ್ಲಿ ಚಿತ್ರ ಮಾಡಿದ್ದು ಸಪ್ತ ಸಾಗರದಾಚೆ ಎಲ್ಲೋ ಮತ್ತು ತೋತಾಪುರಿ ಚಿತ್ರತಂಡಗಳು ಮಾತ್ರ. ಆದರೆ, ಈ ಎರಡೂ ಚಿತ್ರಗಳಿಗೆ ಮುಂದುವರಿದ ಭಾಗಗಳ ಅವಶ್ಯಕತೆ ಇರಲಿಲ್ಲ, ಒಂದೇ ಭಾಗದಲ್ಲಿ ಹೇಳಬಹುದಿತ್ತು ಎಂದು ಚಿತ್ರ ನೋಡಿದವರು ಅಭಿಪ್ರಾಯಪಟ್ಟಿದ್ದೂ ಇದೆ.

ಚಿತ್ರಗಳಿಗೆ ಸಮಂಜಸ ಅಂತ್ಯವೇ ಇಲ್ಲ: ಕಳೆದ ಕೆಲವು ವರ್ಷಗಳಲ್ಲಿ ಹಲವು ಚಿತ್ರಗಳು ಈ ಮುಂದುವರಿದ ಭಾಗದ ಹೆಸರಿನಲ್ಲಿ ಬಿಡುಗಡೆಯಾಗಿವೆ. ಚಿತ್ರಗಳು ಪ್ರಾರಂಭವಾಗಿವೆಯಾದರೂ, ಇನ್ನೂ ಮುಗಿದಿಲ್ಲ. ಕಥೆಗಳು ಅರ್ಧಕ್ಕೆ ನಿಂತಿವೆ. ಉಪೇಂದ್ರ ಅಭಿನಯದ ಕಬ್ಜ, ಶಿವರಾಜಕುಮಾರ್ ಅಭಿನಯದ ಘೋಸ್ಟ್, ಹೇಮಂತ್ ಹೆಗಡೆ ಅಭಿನಯದ ನಮ್ ನಾಣಿ ಮದ್ವೆ ಪ್ರಸಂಗ, ರಾಘವೇಂದ್ರ ರಾಜ್‌ಕುಮಾರ್ ಅಭಿನಯದ 13, ವಿನೋದ್ ಪ್ರಭಾಕರ್ ಅಭಿನಯದ ಫೈಟರ್ ಚಿತ್ರಗಳ ಜೊತೆಗೆ ಇತ್ತೀಚೆಗೆ ಇನ್ನೊಂದಿಷ್ಟು ಚಿತ್ರಗಳು ಸೇರ್ಪಡೆಯಾಗಿವೆ. ಈ ಯಾವ ಚಿತ್ರವೂ ಪೂರ್ಣವಾಗಿಲ್ಲ. ಈ ಚಿತ್ರಗಳಿಗೊಂದು ಸಮಂಜಸ ಅಂತ್ಯವೂ ಇಲ್ಲ, ಚಿತ್ರದಲ್ಲಿರುವ ಪ್ರಶ್ನೆಗಳಿಗೆ ಉತ್ತರಗಳೂ ಸಿಕ್ಕಿಲ್ಲ. ಪ್ರೇಕ್ಷಕರಿಗೆ ಚಿತ್ರ ನೋಡಿದ ಸಂತೃಪ್ತಿಯಾದರೂ ಸಿಗುತ್ತದೆಯೇ ಎಂದರೆ ಅದೂ ಇಲ್ಲ. ಹೋಗಲಿ, ಪ್ರೇಕ್ಷಕರಿಗೆ ಮುಂದುವರಿದ ಭಾಗ ನೋಡುವ ಆಸಕ್ತಿಯಾದರೂ ಇದೆಯೇ ಎಂದರೆ ಅದೂ ಕಾಣುವುದಿಲ್ಲ.

ಸ್ಪಷ್ಟತೆಯ ಕೊರತೆಯೇ ಕಾರಣ: ಸ್ಪಷ್ಟತೆಯ ಕೊರತೆಯೇ ಇದೆಲ್ಲಕ್ಕೂ ಕಾರಣ ಎಂದು ಹೇಳಲಾಗುತ್ತಿದೆ. ಬಾಹುಬಲಿ ಆಗಲಿ, ಪುಷ್ಪ ಮತ್ತು ಕೆಜಿಎಫ್ ಚಿತ್ರಗಳಾಗಲಿ, ಒಂದು ಚಿತ್ರದಿಂದ ಎರಡು ಚಿತ್ರಗಳಿಗೆ ವಿಸ್ತರಣೆಯಾದಾಗ, ಆ ಚಿತ್ರಕ್ಕೊಂದು ಅಂತ್ಯವನ್ನು ಹೇಗೆ ನೀಡಬೇಕೆಂಬ ಸ್ಪಷ್ಟತೆ ಆ ಚಿತ್ರತಂಡಗಳಿಗೆ ಇತ್ತು. ಮುಂದುವರಿದ ಭಾಗಗಳಲ್ಲಿ ಹಲವು ಓರೆಕೋರೆಗಳಿದ್ದರೂ, ಅದನ್ನು ನೋಡಿಕೊಂಡು ಹೋಗಬಹುದೆಂದು ನಿರ್ದೇಶಕರಿಗೆ ತಿಳಿದಿತ್ತು. ಹಾಗಾಗಿ, ಅವರು ಧೈರ್ಯವಾಗಿ ಮುಂದುವರಿದ ಭಾಗಗಳನ್ನು ಮಾಡಿದರು. ಈ ಮೂರೂ ಚಿತ್ರಗಳ ಮೊದಲ ಭಾಗಕ್ಕಿಂತ ಎರಡನೆಯ ಭಾಗಗಳು ದೊಡ್ಡ ಯಶಸ್ಸು ಕಂಡವು. ಆದರೆ, ಇದೇ ಸೂತ್ರವನ್ನು ಬೇರೆ ಚಿತ್ರಗಳಿಗೆ ಅನ್ವಯಿಸಲು ಸಾಧ್ಯವಿಲ್ಲ.

ಮೊದಲ ಭಾಗದ ಯಶಸ್ಸೇ ಮಾನದಂಡ: ಈ ಚಿತ್ರಗಳು ನಿಜಕ್ಕೂ ಮುಂದುವರೆಯುತ್ತವೆಯೇ ಎಂಬುದು ಗೊತ್ತಿಲ್ಲ. ಪ್ರಮುಖವಾಗಿ ಯಾವುದೇ ಚಿತ್ರ ಮುಂದುವರಿದು, ಎರಡನೇ ಭಾಗ ಬರಬೇಕೆಂದರೆ ಮೊದಲ ಭಾಗ ಗೆದ್ದಿರಬೇಕು ಅಥವಾ ಸ್ವಲ್ಪವಾದರೂ ಸದ್ದು ಮಾಡಿರಬೇಕು. ಎರಡನೆಯ ಭಾಗಕ್ಕೆ ಮೊದಲ ಭಾಗದ ಗೆಲುವೇ ಮಾನದಂಡವಾಗುತ್ತದೆ. ಮೊದಲ ಭಾಗ ಗೆದ್ದರಷ್ಟೇ ಎರಡನೆಯ ಭಾಗದ ಮೇಲೆ ಪ್ರೇಕ್ಷಕರಿಗೆ ಕುತೂಹಲ ಮತ್ತು ನಿರೀಕ್ಷೆ ಹೆಚ್ಚಾಗುತ್ತದೆ. ಅದು ಹೆಚ್ಚಾದರಷ್ಟೇ ಚಿತ್ರದ ವ್ಯಾಪಾರ ದೊಡ್ಡ ಮಟ್ಟದಲ್ಲಿ ಆಗುತ್ತದೆ. ಆದರೆ, ಘೋಸ್ಟ್ ಹೊರತುಪಡಿಸಿದರೆ, ಮೇಲೆ ಉಲ್ಲೇಖಿಸಿದ ಯಾವುದೇ ಚಿತ್ರವೂ ಯಶಸ್ಸು ಕಂಡಿಲ್ಲ ಅಥವಾ ಒಳ್ಳೆಯ ಗಳಿಕೆಯನ್ನೂ ಮಾಡಿಲ್ಲ. ಬಾಕ್ಸ್ ಆಫೀಸ್ ಗಳಿಕೆಯ ಜೊತೆಗೆ ಬೇರೆ ಯಾವ ಹಕ್ಕುಗಳಿಂದಲೂ (ಡಬ್ಬಿಂಗ್, ಸ್ಯಾಟಿಲೈಟ್, ಓಟಿಟಿ) ಹಣ ಬಂದಿಲ್ಲ. ಮೊದಲ ಚಿತ್ರದಲ್ಲೇ ನಷ್ಟವಾಗಿರುವಾಗ, ನಿರ್ಮಾಪಕರು ಇನ್ನೊಂದು ಚಿತ್ರಕ್ಕೆ ಹಣ ಹೂಡುತ್ತಾರೆಯೇ? ಹಾಗಾಗಿ, ಆ ಚಿತ್ರಗಳು ಮುಂದುವರೆಯುವುದರ ಬಗ್ಗೆ ಅನುಮಾನಗಳಿವೆ.



ಎರಡನೇ ಭಾಗದ ಅವಶ್ಯಕತೆ ಇದೆಯೇ?: ಹಾಗೆ ನೋಡಿದರೆ, ಈ ಚಿತ್ರಗಳನ್ನು ಎರಡು ಭಾಗಗಳಿಗೆ ಹಿಗ್ಗಿಸುವ ಅವಶ್ಯಕತೆಯೇ ಇರಲಿಲ್ಲ. ಹೇಳಬೇಕಾದದ್ದನ್ನು ಒಂದೇ ಭಾಗದಲ್ಲಿ ಹೇಳಿ ಮುಗಿಸಬಹುದಿತ್ತು. ಆದರೆ, ಮೊದಲ ಭಾಗದಲ್ಲೂ ಕಥೆಯನ್ನು ಪೂರ್ಣಗೊಳಿಸದೆ ಸುಮ್ಮನೆ ಎಳೆದಾಡಲಾಗಿದೆ. ಈ ಪೈಕಿ ಬಹಳಷ್ಟು ಚಿತ್ರಗಳು ಶುರುವಾಗುವುದೇ ಮಧ್ಯಂತರದ ನಂತರ. ಅಲ್ಲಿಯವರೆಗೂ ಪರಿಸರ ಮತ್ತು ಪಾತ್ರಗಳನ್ನು ಪರಿಚಯಿಸುವುದಕ್ಕೇ ಸಮಯ ಮೀಸಲಿಡಲಾಗುತ್ತದೆ. ಹೀಗೆ ಸಾಕಷ್ಟು ಸಮಯ ಹಾಳು ಮಾಡಿ, ಕೊನೆಗೆ ಅವಸರದಲ್ಲಿ ಎಲ್ಲವನ್ನೂ ಮುಂದಿನ ಭಾಗಕ್ಕೆ ಮುಂದೂಡಲಾಗುತ್ತದೆ. ಇದರಿಂದ ಮೊದಲ ಭಾಗದಲ್ಲಿ ಏನಾಗುತ್ತಿದೆ ಎಂದು ಗೊತ್ತಾಗದೆ, ಎರಡನೆಯ ಭಾಗವೂ ಬಿಡುಗಡೆಯಾಗದೆ, ಇವು ಒಂದು ರೀತಿ ಅತಂತ್ರ ಸ್ಥಿತಿಯಲ್ಲಿವೆ. ಇದರಿಂದ ಪ್ರೇಕ್ಷಕರ ತಾಳ್ಮೆ, ಸಮಯ, ಹಣ ವ್ಯರ್ಥವಾಗುವುದರ ಜೊತೆಗೆ, ಚಿತ್ರಗಳ ಮೇಲೆ ನಂಬಿಕೆ ಕಳೆದುಕೊಳ್ಳುವಂತಾಗಿದೆ. ನಂಬಿಕೆ ಕಳೆದುಕೊಂಡ ಪ್ರೇಕ್ಷಕರು, ನಾಳೆ ಒಳ್ಳೆಯ ಚಿತ್ರಗಳು ಬಂದಿವೆ ಎಂದರೂ ನೋಡುವುದಕ್ಕೆ ಯೋಚಿಸುವಂತಾಗುತ್ತದೆ.

ಇಷ್ಟಕ್ಕೂ ಎರಡನೆಯ ಭಾಗದ ಅವಶ್ಯಕತೆಯಾದರೂ ಏನಿದೆ?: ಈ ಕುರಿತು ಮಾತನಾಡುವ ಆಸ್ಟಿನ್‌ನ ಮಹಾನ್ಮೌನ ಚಿತ್ರದ ನಾಯಕ-ನಿರ್ದೇಶಕ ವಿನಯ್ ಕುಮಾರ್ ವೈದ್ಯನಾಥನ್, ನನಗೆ ಎರಡು ಭಾಗಗಳಲ್ಲಿ ಕಥೆ ಹೇಳುವ ಉದ್ದೇಶವಿರಲಿಲ್ಲ. ಆದರೆ, ಚಿತ್ರ ಬೆಳೆಯುತ್ತಾ ಹೋದಂತೆ, ಅದರ ಅವಧಿ ಮೂರೂವರೆ ಗಂಟೆಗಳಷ್ಟಾಯಿತು. ಅಷ್ಟು ಹೊತ್ತು ಜನ ಚಿತ್ರ ನೋಡುವುದಿಲ್ಲ, ಕತ್ತರಿಸಿ ವೇಗವಾಗಿ ಹೇಳಿದರೆ, ಅದು ಪ್ರೇಕ್ಷಕರಿಗೆ ಕನೆಕ್ಟ್ ಆಗುವುದಿಲ್ಲ. ಪ್ರೇಕ್ಷಕರಿಗೆ ಕನೆಕ್ಟ್ ಆಗಬೇಕೆಂದರೆ, ಪ್ರತಿಯೊಂದು ಭಾವನೆಯನ್ನು ವಿವರವಾಗಿ ಹೇಳಬೇಕು. ಹಾಗಾಗಿ, ಎರಡು ಭಾಗಗಳನ್ನಾಗಿ ವಿಂಗಡನೆ ಮಾಡಿದೆ ಎನ್ನುತ್ತಾರೆ. ಹಾಗಾದರೆ, ಆಸ್ಟಿನ್‌ನ ಮಹಾನ್ಮೌನ ಚಿತ್ರದ ಮುಂದುವರಿದ ಭಾಗ ಬರುತ್ತದೆಯೇ? ಖಂಡಿತ ಮಾಡುತ್ತೇನೆ. ಆದರೆ, ಯಾವಾಗ ಎಂದು ಗೊತ್ತಿಲ್ಲ. ಚಿತ್ರದ ಬಗ್ಗೆ ಮಿಶ್ರ ಪ್ರತಿಕ್ರಿಯೆಗಳು ಬರುತ್ತಿವೆ. ಮುಂದಿನ ಪ್ರತಿಕ್ರಿಯೆ ನೋಡಿಕೊಂಡು ನಿರ್ಧಾರ ಮಾಡುತ್ತೇನೆ ಎನ್ನುತ್ತಾರೆ ವಿನಯ್.

ಇದು ಬರೀ ಕನ್ನಡದಲ್ಲಿ ಮಾತ್ರವಲ್ಲ, ಬೇರೆ ಭಾಷೆಗಳಲ್ಲೂ ಇಂತಹದ್ದು ನಡೆದಿದೆ. ಸಲಾರ್, ಕಲ್ಕಿ 2898 ಎಡಿ, ಬ್ರಹ್ಮಾಸ್ತ್ರ, ಕಂಗುವಾ ಹೀಗೆ ಕೆಲವು ಚಿತ್ರಗಳು ಒಂದು ಚಿತ್ರವೆಂದು ಶುರುವಾಗಿ ಎರಡು ಚಿತ್ರಗಳಾಗಿವೆ. ಈ ಎಲ್ಲಾ ಚಿತ್ರಗಳ ಒಂದೊಂದು ಭಾಗ ಮಾತ್ರ ಬಿಡುಗಡೆಯಾಗಿದ್ದು, ಇನ್ನೊಂದು ಭಾಗ ಇನ್ನಷ್ಟೇ ಶುರುವಾಗಬೇಕಿದೆ. ಈ ಚಿತ್ರಗಳ ಮುಂದುವರಿದ ಭಾಗಗಳು ಯಾವಾಗ ಬರುತ್ತವೆಯೋ? ಅಥವಾ ನಿಜಕ್ಕೂ ಬರುತ್ತವೆಯೇ? ಈ ಪ್ರಶ್ನೆಗಳಿಗೆ ಇನ್ನಷ್ಟೇ ಉತ್ತರ ಸಿಗಬೇಕಿದೆ.

---

## 12-9-2025 ದಿನ ಭವಿಷ್ಯ

**ಮೇಷ:** ಇಂದು ನಿಮ್ಮನ್ನು ಆವರಿಸುವ ಭಾವನಾತ್ಮಕ ಮನಸ್ಥಿತಿಯಿಂದ ನೀವು ಹೊರಬರಲು ಬಯಸಿದರೆ ಹಿಂದಿನದ್ದೆಲ್ಲವನ್ನೂ ಮರೆತುಬಿಡಬೇಕು. ಜೀವನ ಸಂಗಾತಿಯೊಂದಿಗೆ ಹಣಕ್ಕೆ ಸಂಬಂಧಿಸಿದ ಯಾವುದೇ ವಿಷಯದ ಬಗ್ಗೆ ಜಗಳವಾಗುವ ಸಾಧ್ಯತೆ ಇದೆ. ಇಂದು ನಿಮ್ಮ ದುಂದುಗಾರಿಕೆಯ ಮೇಲೆ ನಿಮ್ಮ ಸಂಗಾತಿ ನಿಮಗೆ ಮಾತುಗಳು ಹೇಳಬಹುದು.

**ವೃಷಭ:** ವಿಶ್ರಾಂತಿ ತೆಗೆದುಕೊಳ್ಳಿ ಮತ್ತು ಕೆಲಸದ ನಡುವೆ ಸಾಧ್ಯವಾದಷ್ಟೂ ವಿಶ್ರಾಂತಿ ಪಡೆಯಲು ಪ್ರಯತ್ನಿಸಿ. ರಿಯಲ್ ಎಸ್ಟೇಟ್‌ನಲ್ಲಿ ಹೂಡಿಕೆ ಲಾಭದಾಯಕವಾಗಬಹುದು. ಪ್ರೀತಿ ಸಾಂಗತ್ಯ ಮತ್ತು ಬಂಧ ಏರಿಕೆಯಲ್ಲಿರುತ್ತವೆ. ನಿಮ್ಮ ಪ್ರೀತಿಪಾತ್ರರು ನಿಮ್ಮನ್ನು ಸಂತೋಷವಾಗಿರಿಸಲು ಕೆಲಸಗಳನ್ನು ಮಾಡುತ್ತಾರೆ.

**ಮಿಥುನ:** ತೊಂದರೆಯಲ್ಲಿರುವ ಯಾರಿಗಾದರೂ ಸಹಾಯ ಮಾಡಲು ನಿಮ್ಮ ಚೈತನ್ಯವನ್ನು ಬಳಸಿ. ಲೋಕೋಪಕಾರಕ್ಕಾಗಲ್ಲದಿದ್ದಲ್ಲಿ ಈ ನಶ್ವರ ದೇಹದ ಉಪಯೋಗವಾದರೂ ಏನು. ನೀವು ಜನರು ನಿಮ್ಮಿಂದ ಏನು ಬಯಸುತ್ತಾರೆಂದು ನಿಖರವಾಗಿ ತಿಳಿದಿರುವಂತೆ ತೋರುತ್ತದೆ-ಆದರೆ ಇಂದು ನಿಮ್ಮ ಖರ್ಚುಗಳಲ್ಲಿ ತುಂಬಾ ಉದಾರಿಯಾಗದಿರಲು ಪ್ರಯತ್ನಿಸಿ.

**ಕರ್ಕಾಟಕ:** ಅತಿಯಾಗಿ ತಿನ್ನುವುದನ್ನು ತಪ್ಪಿಸಿ ಮತ್ತು ಫಿಟ್ ಆಗಿ ಉಳಿಯಲು ನಿಯಮಿತವಾಗಿ ಹೆಲ್ತ್ ಕ್ಲಬ್‌ಗೆ ಭೇಟಿ ನೀಡಿ. ನಿಮ್ಮ ಹಣವನ್ನು ಒಂದು ಸುರಕ್ಷಿತ ಸ್ಥಳದಲ್ಲಿರಿಸಿ ಹಾಗೂ ಇದು ಮುಂದಿನ ಕಾಲದಲ್ಲಿ ನಿಮಗೆ ಒಳ್ಳೆಯ ಆದಾಯ ತರುತ್ತದೆ. ನೀವು ಕುಟುಂಬದ ಸದಸ್ಯರ ಜೊತೆ ಸ್ವಲ್ಪ ತೊಂದರೆ ಹೊಂದಿದ್ದರೂ ನಿಮ್ಮ ಮನಶ್ಶಾಂತಿಯನ್ನು ಹಾಳು ಮಾಡಲು ಅವಕಾಶ ನೀಡಬೇಡಿ.

**ಸಿಂಹ:** ನಿಮ್ಮಲ್ಲಿ ಇಂದು ಚುರುಕುತನವನ್ನು ನೋಡಬಹುದು. ನಿಮ್ಮ ಆರೋಗ್ಯವು ಇಂದು ನಿಮ್ಮನ್ನು ಸಂಪೂರ್ಣವಾಗಿ ಬೆಂಬಲಿಸುತ್ತದೆ. ನಿಮ್ಮ ತಾಯಿಯ ಬದಿಯಿಂದ ಇಂದು ಹಣಕಾಸಿನ ಲಾಭವನ್ನು ಪಡೆಯುವ ಪೂರ್ಣ ಸಾಧ್ಯತೆ ಇದೆ. ನಿಮ್ಮ ಮಾಮ ಅಥವಾ ತಾತ ನಿಮಗೆ ಆರ್ಥಿಕ ಬೆಂಬಲ ಮಾಡಬಹುದು.

**ಕನ್ಯಾ:** ಸಾಮಾಜಿಕ ಜೀವನಕ್ಕಿಂತ ಆರೋಗ್ಯಕ್ಕೆ ಆದ್ಯತೆ ನೀಡಬೇಕು. ವ್ಯಾಪರದಲ್ಲಿ ಪ್ರಯೋಜನ ಇಂದು ಅನೇಕ ವ್ಯಾಪಾರಿಗಳ ಮುಖದ ಮೇಲೆ ಸಂತೋಷವನ್ನು ತರಬಹುದು. ಮಕ್ಕಳಿಂದ ಅನಿರೀಕ್ಷಿತ ಸುದ್ದಿ ಸಂತೋಷದ ಕ್ಷಣಗಳನ್ನು ತರುತ್ತದೆ. ಇಂದು ನಿಮ್ಮ ಕೆಟ್ಟ ಅಭ್ಯಾಸಗಳು ನಿಮ್ಮ ಪ್ರೇಮಿಗೆ ಕೆಟ್ಟ ಭಾವನೆ ಉಂಟು ಮಾಡಬಹುದು, ನಿಮ್ಮ ಮೇಲೆ ಕೋಪಗೊಳ್ಳಬಹುದು.

**ತುಲಾ:** ನಿಮ್ಮ ದಯಾಳು ಪ್ರಕೃತಿ ಇಂದು ಅನೇಕ ಸಂತೋಷದ ಕ್ಷಣಗಳನ್ನು ತರುತ್ತದೆ. ವಿವಾಹಿತ ಜನರು ಇಂದು ತಮ್ಮ ಮಕ್ಕಳ ಶಿಕ್ಷಣದ ಮೇಲೆ ಹೆಚ್ಚು ಹಣವನ್ನು ಖರ್ಚು ಮಾಡಬೇಕಾಗುತ್ತದೆ. ಪ್ರೀತಿ ಕೇವಲ ವಸಂತ; ಹೂಗಳು, ಗಾಳಿ, ಬಿಸಿಲು, ಚಿಟ್ಟೆಗಳು. ನೀವು ಇಂದು ಪ್ರಣಯದ ಕಚಗುಳಿಯನ್ನು ಅನುಭವಿಸುತ್ತೀರಿ.

**ವೃಶ್ಚಿಕ:** ನಗು ನಿಮ್ಮ ಎಲ್ಲ ಸಮಸ್ಯೆಗಳಿಗೆ ಪರಿಹಾರವಾದ್ದರಿಂದ ನಕ್ಕುಬಿಡಿ. ನಿಮ್ಮ ಮೂಲಕ ಹಣವನ್ನು ಉಳಿಸಲು ಮಾಡಲಾಗಿರುವ ಪ್ರಯತ್ನವು ಇಂದು ವಿಫಲವಾಗಬಹುದು, ಹೇಗಾದರೂ, ನೀವು ಅದರ ಬಗ್ಗೆ ಚಿಂತಿಸಬೇಕಾಗಿಲ್ಲ, ಪರಿಸ್ಥಿತಿ ಶೀಘ್ರದಲ್ಲೇ ಸುಧಾರಿಸುತ್ತದೆ. ನಿಮ್ಮ ಬಿಡುವಿನ ವೇಳೆಯನ್ನು ನಿಮ್ಮ ಮನೆಯ ಸೌಂದರ್ಯ ಹೆಚ್ಚಿಸಲು ಬಳಸಿ.

**ಧನು:** ಒಬ್ಬ ಸಂತನಿಂದ ಆಧ್ಯಾತ್ಮಿಕ ಜ್ಞಾನ ಸಾಂತ್ವನ ಮತ್ತು ಆರಾಮವನ್ನು ಒದಗಿಸುತ್ತದೆ. ನೀವು ನಿಮ್ಮ ಇಂದಿನ ದಿನವನ್ನು ಉತ್ತಮಗೊಳಿಸಲು ಕಳೆದ ದಿನಗಳಲ್ಲಿ ಹಣವನ್ನು ಹೂಡಿಕೆ ಮಾಡಿದ್ದರೆ, ಅದರ ಪ್ರಯೋಜನವನ್ನು ಇಂದು ನೀವು ಪಡೆಯಬಹುದು. ನಿಮ್ಮ ಕುಟುಂಬ ಸದಸ್ಯರು ಹೇಳಿದ್ದೆಲ್ಲವಕ್ಕೂ ನೀವು ಒಪ್ಪದಿರಬಹುದು - ಆದರೆ ನೀವು ಅವರ ಅನುಭವದಿಂದ ಕಲಿಯಲು ಪ್ರಯತ್ನಿಸಬೇಕು.


**ಮಕರ:** ಆರೋಗ್ಯ ಪರಿಪೂರ್ಣವಾಗಿರುತ್ತದೆ. ನಿಧಿಗಳ ಹಠಾತ್ ಒಳಹರಿವು ನಿಮ್ಮ ಪಾವತಿಗಳು ಮತ್ತು ತಕ್ಷಣದ ವೆಚ್ಚಗಳನ್ನು ನೋಡಿಕೊಳ್ಳುತ್ತದೆ. ನಿಮ್ಮಲ್ಲಿ ಕೆಲವು ಆಭರಣ ಅಥವಾ ಗೃಹಬಳಕೆಯ ಸಾಧನಗಳನ್ನು ಖರೀದಿಸುವ ಸಾಧ್ಯತೆಗಳಿವೆ. ಸ್ನೇಹ ಕಳೆದುಕೊಳ್ಳುವ ಸಾಧ್ಯತೆಗಳು ಇಂದು ಹೆಚ್ಚಾಗಿರುವುದರಿಂದ ಎಚ್ಚರಿಕೆಯಿಂದಿರಿ.

**ಕುಂಭ:** ಪ್ರೀತಿ, ಭರವಸೆ, ನಂಬಿಕೆ, ಸಹಾನುಭೂತಿ, ಆಶಾವಾದ ಮತ್ತು ನಿಷ್ಠೆಗಳಂಥ ಧನಾತ್ಮಕ ಭಾವನೆಗಳನ್ನು ಗ್ರಹಿಸಲು ಮನಸ್ಸನ್ನು ಪ್ರೋತ್ಸಾಹಿಸಿ. ಒಮ್ಮೆ ಈ ಭಾವನೆಗಳು ಸಂಪೂರ್ಣವಾಗಿ ಹತೋಟಿಗೆ ತೆಗೆದುಕೊಂಡ ನಂತರ ಮನಸು ತಾನಾಗಿಯೇ ಪ್ರತಿ ಪರಿಸ್ಥಿತಿಗೂ ಧನಾತ್ಮಕವಾಗಿ ಪ್ರತಿಕ್ರಿಯಿಸುತ್ತದೆ. ಸೃಜನಶೀಲ ಪ್ರಕೃತಿಯ ಕೆಲಸಗಳಲ್ಲಿ ತೊಡಗಿಸಿಕೊಳ್ಳಿ.

**ಮೀನ:** ನಿಮ್ಮ ಮಗುವಿನ ಸಾಧನೆ ನಿಮಗೆ ಅಪಾರ ಸಂತೋಷ ನೀಡಬಹುದು. ಇಂದು ಮಾಡಿದ ಹೂಡಿಕೆ ನಿಮ್ಮ ಅಭ್ಯುದಯ ಮತ್ತು ಆರ್ಥಿಕ ಭದ್ರತೆಯನ್ನು ಹೆಚ್ಚಿಸುತ್ತದೆ. ಮಕ್ಕಳು ನಿಮಗೆ ಮನೆ ಕೆಲಸಗಳನ್ನು ಮಾಡಲು ಸಹಾಯ ಮಾಡುತ್ತಾರೆ. ನೀವು ಪ್ರಣಯದ ಮನೋಭಾವ ಹೊಂದಿರುತ್ತೀರಿ- ನೀವು ಮತ್ತು ನಿಮ್ಮ ಪ್ರೀತಿಪಾತ್ರರಿಗಾಗಿ ವಿಶೇಷ ಯೋಜನೆಗಳನ್ನು ಮಾಡಲು ಮರೆಯಬೇಡಿ.

---

# ರಗಡ್ ಅವತಾರದಲ್ಲಿ ಚಾಕಲೇಟ್ ಹೀರೋ ಸುಮುಖ್





ನಿರ್ದೇಶಕ ಯೋಗರಾಜ್ ಭಟ್ ಮತ್ತು ಸಂಗೀತ ನಿರ್ದೇಶಕ ವಿ. ಹರಿಕೃಷ್ಣ ಕಾಂಬಿನೇಷನ್‌ನಲ್ಲಿ ಮೂಡಿಬಂದ, ಈ ವರ್ಷಾರಂಭದಲ್ಲಿ ತೆರೆಗೆ ಬಂದ ಮನದ ಕಡಲು ಸಿನಿಮಾ ಮೂಲಕ ಕನ್ನಡ ಚಿತ್ರರಂಗದಲ್ಲಿ ಗಮನ ಸೆಳೆದ ಸುಮುಖ್ ಅಭಿನಯದ ಹೊಸ ಚಿತ್ರ ಘೋಷಣೆಯಾಗಿದೆ. ಇತ್ತೀಚೆಗೆ ಅವರು ಬರ್ತ್‌ಡೇ ಆಚರಿಸಿಕೊಂಡಿದ್ದು, ಈ ಹಿನ್ನೆಲೆಯಲ್ಲಿ ಚಿತ್ರದ ಪೋಸ್ಟರ್ ರಿಲೀಸ್ ಮಾಡಲಾಗಿದೆ. ಮನದ ಕಡಲು ಚಿತ್ರದಲ್ಲಿ ಲವಲವಿಕೆಯ ಹುಡುಗನಾಗಿ, ಲವರ್ ಬಾಯ್ ಆಗಿದ್ದ ಸುಮುಖ್ ಈಗ ಹೊಸ ಅವತಾರವೆತ್ತಿದ್ದಾರೆ. ಅಂದರೆ ಚಾಕಲೇಟ್ ಹೀರೋ ಸುಮುಖ್ ಕಂಪ್ಲೀಟ್ ರಗಡ್ ವೇಷದಲ್ಲಿ ನಿಮ್ಮ ಮುಂದೆ ಬರಲಿದ್ದಾರೆ. ಅದರ ಸೂಚನೆ ಪೋಸ್ಟರ್‌ನಲ್ಲಿ ಸಿಕ್ಕಿದ್ದು, ಚಿತ್ರದ ಟೈಟಲ್ ಇನ್ನೂ ಅಂತಿಮಗೊಂಡಿಲ್ಲ.

ಸುಮುಖ್ ಹುಟ್ಟುಹಬ್ಬದ ಅಂಗವಾಗಿ ಬಿಡುಗಡೆಯಾಗಿರುವ ಹೊಸ ಸಿನಿಮಾದ ಪೋಸ್ಟರ್ ಹಲವರ ಮನ ಗೆದ್ದಿದೆ. ಗಣೇಶ ಪೇಂಟಿಂಗ್ ಮುಂದೆ ಕೈಯಲ್ಲಿ ಪೇಂಟ್ ಬಾಕ್ಸ್ ಹಿಡಿದು ಸುಮುಖ್ ನಿಂತಿದ್ದಾರೆ. ಪಕ್ಕದಲ್ಲಿ ಜನ ಸಮೂಹವೇ ಕಂಡು ಬಂದಿದೆ.

ಸುಮುಖ್ ಅವರ ಇನ್‌ಸ್ಟಾಗ್ರಾಮ್ ಪೋಸ್ಟ್: ನಿರ್ದೇಶಕ ಯಾರು?

ಕಳೆದ ಹತ್ತದಿನ್ನೈದು ವರ್ಷಗಳಿಂದ ಅಸೋಸಿಯೇಟ್ ಡೈರೆಕ್ಟರ್ ಆಗಿ ದುಡಿದಿರುವ ಸಂಜಯ್ ಕೆ.ಕೆ. ಈ ಚಿತ್ರದ ಮೂಲಕ ಸ್ವತಂತ್ರ ನಿರ್ದೇಶಕರಾಗಿದ್ದಾರೆ. ಈ ಸಿನಿಮಾ ಮೂಲಕ ಡೈರೆಕ್ಟರ್ ಕುರ್ಚಿ ಅಲಂಕರಿಸುತ್ತಿರುವ ಸಂಜಯ್ ಅವರೇ ಕಥೆ ಬರೆದಿರುವುದು ವಿಶೇಷ.

ನೈಜ ಕಥೆಯಲ್ಲಿ ಸುಮುಖ್

ಸಂಜಯ್ ಇಲ್ಲಿ ನೈಜ ಕಥೆಗೆ ಸಿನಿಮಾ ರೂಪ ಕೊಟ್ಟಿದ್ದಾರೆ. ಅಂದರೆ ಬೆಂಗಳೂರಿನಲ್ಲಿ ನಡೆದ ಸತ್ಯ ಘಟನೆಯೊಂದನ್ನು ಸಿನಿಮಾ ರೂಪಕ್ಕಿಳಿಸುತ್ತಿದ್ದಾರೆ. ಕಳೆದ ಐದು ವರ್ಷಗಳಿಂದ ಕಥೆ ಹಣೆದು ಇದೀಗ ಸಿನಿಮಾ ನಿರ್ದೇಶನಕ್ಕೆ ಮುಂದಾಗಿದ್ದಾರೆ. ಈ ಚಿತ್ರದಲ್ಲಿ ಸುಮುಖ್ ಹೊಸ ಗೆಟಪ್‌ನಲ್ಲಿ ಕಾಣಿಸಿಕೊಳ್ಳಲಿದ್ದಾರೆ. ಸಂಜಯ್ ಹಾಗೂ ಸುಮುಖ್ ಅವರ ಹೊಸ ಸಾಹಸಕ್ಕೆ ರಾಯಲ್ ಫ್ಲೈ ಎಂಟರ್‌ಟೈನ್‌ಮೆಂಟ್ ಬಂಡವಾಳ ಹಾಕುತ್ತಿದೆ. ಶೀಘ್ರದಲ್ಲೇ ಚಿತ್ರತಂಡ ಉಳಿದ ಅಪ್ ಡೇಟ್ ನೀಡಲಿದೆ. ಚಿತ್ರದ ನಾಯಕಿ ಯಾರು, ತಾರಾಗಣದಲ್ಲಿ ಯಾರೆಲ್ಲ ಇರಲಿದ್ದಾರೆ ಎನ್ನುವ ವಿವರವನ್ನು ಚಿತ್ರತಂಡ ಬಿಟ್ಟುಕೊಟ್ಟಿಲ್ಲ.

2017ರಲ್ಲಿ ತೆರೆಕಂಡ ರಾಜು; ಸಿನಿಮಾ ಮೂಲಕ ಸ್ಯಾಂಡಲ್‌ವುಡ್‌ಗೆ ಕಾಲಿಟ್ಟ ಸುಮುಖ್ ಇದುವರೆಗೆ ಯಾನ, ಫಿಸಿಕ್ಸ್ ಟೀಚರ್, ಮನದ ಕಡಲು ಮುಂತಾದ ಚಿತ್ರಗಳಲ್ಲಿ ನಟಿಸಿದ್ದಾರೆ. ಆದರೆ ಹೇಳಿಕೊಳ್ಳುವಂತಹ ಬ್ರೇಕ್ ಸಿಕ್ಕಿಲ್ಲ. ಮನದ ಕಡಲು ಸಾಕಷ್ಟು ನಿರೀಕ್ಷೆ ಹುಟ್ಟು ಹಾಕಿದ್ದರೂ ಬಾಕ್ಸ್ ಆಫೀಸ್‌ನಲ್ಲಿ ಮ್ಯಾಜಿಕ್ ಮಾಡುವಲ್ಲಿ ವಿಫಲವಾಗಿತ್ತು. ಸದ್ಯ ಅವರು ಹೇಗಾದರೂ ಮಾಡಿ ಗೆಲುವಿನ ಹಳಿ ಏರಬೇಕೆಂಬ ಪ್ರಯತ್ನ ದಲ್ಲಿದ್ದು, ರಾಜಸ್ಥಾನ್ ಡೈರೀಸ್ ಸಿನಿಮಾದಲ್ಲಿಯೂ ನಟಿಸುತ್ತಿದ್ದಾರೆ. ಇದು ಕನ್ನಡದ ಜತೆಗೆ ಮರಾಠಿಯಲ್ಲೂ ತೆರೆಗೆ ಬರಲಿದೆ.



# ರಾಷ್ಟ್ರದ ಭವಿಷ್ಯ ರೂಪಿಸುವ ಮಹತ್ವದ ಜವಾಬ್ದಾರಿ ಮತದಾನ

## ವಿದ್ಯಾರ್ಥಿಗಳಿಗೆ ನನ್ನ ಮತ ನನ್ನ ಹಕ್ಕು ಪ್ರಬಂಧ ಸ್ಪರ್ಧೆ | ತಹಸೀಲ್ದಾರ್ ಮಲ್ಲಿಕಾರ್ಜುನ್

• ಪ್ರಜೋದಯ ವರದಿ






**ಆಲೂರು:** ನನ್ನ ಮತ ನನ್ನ ಹಕ್ಕು, ಪ್ರಜಾಪ್ರಭುತ್ವದ ಆಧಾರ ಸ್ತಂಭವೇ ಮತದಾನ. ಮತದಾನವು ಕೇವಲ ನಮ್ಮ ಹಕ್ಕಲ್ಲ, ಬದಲಾಗಿ ನಮ್ಮ ರಾಷ್ಟ್ರದ ಭವಿಷ್ಯವನ್ನು ರೂಪಿಸುವ ಒಂದು ಮಹತ್ವದ ಜವಾಬ್ದಾರಿಯಾಗಿದೆ ಎಂದು ಆಲೂರು ತಾಲ್ಲೂಕು ತಹಶೀಲ್ದಾರ್ ಹೆಚ್. ಮಲ್ಲಿಕಾರ್ಜುನ್ ತಿಳಿಸಿದರು.

ಅಂತರಾಷ್ಟ್ರೀಯ ಪ್ರಜಾಪ್ರಭುತ್ವ ದಿನದ ಆಚರಣೆಯ ಅಂಗವಾಗಿ ವಿದ್ಯಾರ್ಥಿಗಳಿಗೆ ನನ್ನ ಮತ ನನ್ನ ಹಕ್ಕು ಎಂಬ ವಿಷಯದ ಕುರಿತು, ಸರ್ಕಾರಿ ಬಾಲಕಿಯರ ಪ್ರೌಢಶಾಲೆಯಲ್ಲಿ ಏರ್ಪಡಿಸಲಾಗಿದ್ದ ಪ್ರಬಂಧ ಸ್ಪರ್ಧೆ ಉದ್ಘಾಟಿಸಿ ಮಾತನಾಡಿದ ಅವರು, ಭಾರತೀಯರಾದ ನಾವು ವಿಶ್ವದ ಅತಿ ದೊಡ್ಡ ಪ್ರಜಾಪ್ರಭುತ್ವ ರಾಷ್ಟ್ರದಲ್ಲಿ ಜೀವಿಸುತ್ತಿದ್ದೇವೆ. ಪ್ರತಿ ವರ್ಷ ಸೆಪ್ಟೆಂಬರ್ 15 ರಂದು ಅಂತರಾಷ್ಟ್ರೀಯ ಪ್ರಜಾಪ್ರಭುತ್ವ ದಿನವನ್ನು ಆಚರಿಸಲಾಗುತ್ತದೆ. ಪ್ರಪಂಚದಾದ್ಯಂತ ಪ್ರಜಾಪ್ರಭುತ್ವದ ತತ್ವಗಳನ್ನು ಉತ್ತೇಜಿಸುವುದು ಮತ್ತು ರಕ್ಷಿಸುವುದು ಇದರ ಮುಖ್ಯ ಉದ್ದೇಶವಾಗಿದೆ. ಪ್ರತಿಯೊಬ್ಬ ವ್ಯಕ್ತಿಯು ಪ್ರಜಾಪ್ರಭುತ್ವದ ಆಡಳಿತದಲ್ಲಿ ಭಾಗವಹಿಸಲು ಮತ್ತು ಅದರ ಬಗ್ಗೆ ತಿಳಿದುಕೊಳ್ಳಲು ಪ್ರೋತ್ಸಾಹಿಸುವುದು ಕೂಡ ಇದರ ಹಿಂದಿನ ಒಂದು ಮುಖ್ಯ ಕಾರಣವಾಗಿದೆ.

ಪ್ರಜಾಪ್ರಭುತ್ವ ದಿನವನ್ನು ಆಚರಿಸಲು ವಿಶ್ವಸಂಸ್ಥೆಯ ಸಾಮಾನ್ಯ ಸಭೆಯು 2007ರಲ್ಲಿ ನಿರ್ಣಯವನ್ನು ಅಂಗೀಕರಿಸಿತು. ನಂತರ 2008 ರಿಂದ ಈ ದಿನವನ್ನು ಅಧಿಕೃತವಾಗಿ ಆಚರಿಸಲು ಪ್ರಾರಂಭಿಸಲಾಯಿತು.

ಅಂತರಾಷ್ಟ್ರೀಯ ಪ್ರಜಾಪ್ರಭುತ್ವ ದಿನವು ಪ್ರಜಾಪ್ರಭುತ್ವದ ಮೌಲ್ಯಗಳನ್ನು ಮತ್ತು ಅದರ ಪ್ರಾಮುಖ್ಯತೆಯನ್ನು ನೆನಪಿಸುತ್ತದೆ. ಪ್ರಪಂಚದಲ್ಲಿ ಇನ್ನೂ ಪ್ರಜಾಪ್ರಭುತ್ವವಿಲ್ಲದ ಪ್ರದೇಶಗಳಲ್ಲಿ ಅದನ್ನು ಸ್ಥಾಪಿಸಲು ಮತ್ತು ಬಲಪಡಿಸಲು ಪ್ರೇರೇಪಿಸುತ್ತದೆ ಎಂದು ಹೇಳಿದರು.

ಪ್ರಜಾಪ್ರಭುತ್ವದ ಕುರಿತು ಜಾಗೃತಿ ಮೂಡಿಸಲು ಆಲೂರು ತಾಲೂಕಿನ ಆಯ್ದ ಕೆಲವು ಶಾಲಾ ಕಾಲೇಜು ವಿದ್ಯಾರ್ಥಿಗಳಿಂದ ವಿವಿಧ ಕಾರ್ಯಕ್ರಮಗಳು, ಚರ್ಚಾಕೂಟಗಳು ಮತ್ತು ವಿಚಾರ ಸಂಕಿರ್ಣಗಳನ್ನು ಮತ್ತು ಪ್ರಜಾಪ್ರಭುತ್ವ ಕುರಿತಾದ ಚಿತ್ರಕಲೆ ಸ್ಪರ್ಧೆಗಳನ್ನು ಆಯೋಜಿಸಲಾಗಿದೆ ಎಂದರು.

ಸಭೆಯಲ್ಲಿ ತಾ.ಪಂ ಇ.ಓ. ಸುಬ್ರಮಣ್ಯ ಶರ್ಮ, ಟಿ.ಎಸ್. ಡಬ್ಲ್ಯು ಕೌಸರ್ ಅಲಿ, ಬಿಸಿಎಂ ಅಧಿಕಾರಿ ಚಂದ್ರಶೇಖರ್ ಸೇರಿದಂತೆ ವಿವಿಧ ಇಲಾಖೆಯ ಅಧಿಕಾರಿಗಳು ಮತ್ತು ಸಿಬ್ಬಂದಿ ವರ್ಗದವರು ಉಪಸ್ಥಿತರಿದ್ದರು.

6-10 ತರಗತಿ ವಿದ್ಯಾರ್ಥಿಗಳಿಗೆ ಚಿತ್ರಕಲಾ ಮತ್ತು ಪಿಯುಸಿ ಯಿಂದ ಪದವಿ ಕಾಲೇಜು ವಿದ್ಯಾರ್ಥಿಗಳಿಗೆ ಪ್ರಜಾಪ್ರಭುತ್ವ ಯಶಸ್ಸಿನಲ್ಲಿ ಮತದಾನದ ಪಾತ್ರ ಕುರಿತು ಸ್ಪರ್ಧೆ ಏರ್ಪಡಿಸಲಾಗಿತ್ತು.

# ಅ.30 ರಂದು ಬೃಹತ್ ಉದ್ಯೋಗ ಮೇಳ

• ಪ್ರಜೋದಯ ವರದಿ



**ಹಾಸನ:** ಜಿಲ್ಲೆಯ ಯುವ ಜನತೆಗೆ ಉದ್ಯೋಗ ಕಲ್ಪಿಸುವ ನಿಟ್ಟಿನಲ್ಲಿ ಬೃಹತ್ ಉದ್ಯೋಗ ಮೇಳವನ್ನು ಅ.30 ರಂದು ನಗರದ ಸರ್ಕಾರಿ ಇಂಜಿನಿಯರಿಂಗ್ ಕಾಲೇಜಿನಲ್ಲಿ ಆಯೋಜನೆಗೆ ಕ್ರಮ ಕೈಗೊಳ್ಳುವಂತೆ ಸಂಸದ ಶ್ರೇಯಸ್ ಎಂ.ಪಟೇಲ್ ಅಧಿಕಾರಿಗಳಿಗೆ ಸೂಚನೆ ನೀಡಿದ್ದಾರೆ.

ಜಿಲ್ಲಾಧಿಕಾರಿ ಕಚೇರಿ ಸಭಾಂಗಣದಲ್ಲಿ ಗುರುವಾರ ಉದ್ಯೋಗ ಮೇಳ ಕುರಿತು ಅಧಿಕಾರಿಗಳೊಂದಿಗೆ ಪೂರ್ವ ಸಿದ್ದತಾ ಸಭೆ ನಡೆಸಿ ಮಾತನಾಡಿದ ಅವರು, ಯುವ ಜನತೆ ಮೇಳದಲ್ಲಿ ಹೆಚ್ಚಿನ ಸಂಖ್ಯೆಯಲ್ಲಿ ಭಾಗವಹಿಸುವ ನಿಟ್ಟಿನಲ್ಲಿ ಗ್ರಾಮೀಣ ಮಟ್ಟದಿಂದಲೂ ಪ್ರಚಾರ ನೀಡಲು ಕ್ರಮ ವಹಿಸುವಂತೆ ನಿರ್ದೇಶಿಸಿದರು.

ಉದ್ಯೋಗ ಮೇಳದ ಕುರಿತು ಎಲ್ಲೆಡೆ ಮಾಹಿತಿಗಾಗಿ ಪೋಸ್ಟರ್‌ಗಳನ್ನು ಅಳವಡಿಸಲು ಅಗತ್ಯ ಕ್ರಮ ಕೈಗೊಳ್ಳಬೇಕು, ಉದ್ಯೋಗ ಮೇಳದಲ್ಲಿ ಭಾಗವಹಿಸಲು ನೊಂದಣಿ ಮಾಡಿಕೊಳ್ಳುವಂತೆ ಅರಿವು ಮೂಡಿಸಿ ಎಂದು ತಿಳಿಸಿದರು.

ಎಸ್.ಎಸ್ಎಲ್.ಸಿ, ಪಿಯುಸಿ, ಐಟಿಐ ಡಿಪ್ಲೋಮೊ, ಪದವಿ ವ್ಯಾಸಂಗ ಮಾಡಿರುವರಿಗೂ ಕೂಡ ಉದ್ಯೋಗ ಕಲ್ಪಿಸಲು ಹೆಚ್ಚಿನ ಉದ್ಯೋಗಾದಾತ ಕಂಪನಿಗಳನ್ನು ಆಹ್ವಾನಿಸುವಂತೆ ಉದ್ಯೋಗಾಧಿಕಾರಿಗಳಿಗೆ ಸೂಚಿಸಿದರು.

ತಾಲ್ಲೂಕು ಮಟ್ಟದಲ್ಲಿಯೂ ಕೂಡ ತಹಸಿಲ್ದಾರ್ ಹಾಗೂ ಕಾರ್ಯ ನಿರ್ವಾಹಕ ಅಧಿಕಾರಿಗಳು ಸಭೆಯ ಸ್ಥಳೀಯವಾಗಿ ಯುವ ಜನರು ಹೆಚ್ಚಿನ ಸಂಖ್ಯೆಯಲ್ಲಿ ನೊಂದಣಿ ಮಾಡಿಕೊಂಡು ಭಾಗವಹಿಸಲು ಅರಿವು ಮೂಡಿಸುವಂತೆ ತಿಳಿಸಿದರು.

ಜಿಲ್ಲಾಧಿಕಾರಿ ಕೆ.ಎಸ್.ಲತಾ ಕುಮಾರಿ ಅವರು ಮಾತನಾಡಿ, ಕೃಷಿ ಪ್ರಧಾನವಾದ ಜಿಲ್ಲೆಯಾಗಿರುವುದರಿಂದ ಕೃಷಿ ಒತ್ತು ನೀಡುವ ಕಂಪನಿಗಳನ್ನು ಉದ್ಯೋಗ ಮೇಳಕ್ಕೆ ಆಹ್ವಾನಿಸಬೇಕು ಎಂದು ತಿಳಿಸಿದರು.

ಜಿಲ್ಲಾ ಪಂಚಾಯಿತಿ ಮುಖ್ಯ ಕಾರ್ಯ ನಿರ್ವಹಕಾಧಿಕಾರಿ ಬಿ.ಆರ್. ಪೂರ್ಣಿಮಾ ಅವರು ಮಾತನಾಡಿ, ಗ್ರಾಮ ಪಂಚಾಯಿತಿ ಹಂತದಲ್ಲಿ ಹೆಚ್ಚಿನ ಪ್ರಚಾರ ಮಾಡಲು ಅಧಿಕಾರಿಗಳಿಗೆ ನಿರ್ದೇಶನ ನೀಡಿ ಹೆಚ್ಚಿನ ಯುವಜನತೆ ಉದ್ಯೋಗ ಮೇಳದಲ್ಲಿ ಭಾಗವಹಿಸುವಂತೆ ಉತ್ತೇಜಿಸಲಾಗುವುದು ಎಂದು ತಿಳಿಸಿದರು.

ಇಂಡಿಯಾ ಸ್ಕಿಲ್ಸ್ -2025ರ ಕುರಿತಾದ ಪೋಸ್ಟರ್ ಬಿಡುಗಡೆ ಮಾಡಲಾಯಿತು.

ಜಿಲ್ಲಾ ಉದ್ಯೋಗಧಿಕಾರಿ ವಿಜಯಲಕ್ಷ್ಮಿ, ಅಧಿಕಾರಿಗಳು ಇದ್ದರು.

# ಗಣೇಶ ವಿಸರ್ಜನೆ: ಸಂಭ್ರಮದ ಮೆರವಣಿಗೆ



**ಆಲೂರು:** ಪಟ್ಟಣದ ಬಸ್ ನಿಲ್ದಾಣದ ಎದುರು ಪ್ರತಿಷ್ಠಾಪಿಸಲಾಗಿದ್ದ ಗೌರಿ, ಗಣೇಶ ಮೂರ್ತಿಯನ್ನು, ನಂದಿಧ್ವಜ ಕುಣಿತದೊಂದಿಗೆ ಪಟ್ಟಣದಲ್ಲಿ ಮೆರವಣಿಗೆ ನಡೆಸಿ ಸಂಭ್ರಮ, ಸಡಗರದಿಂದ ವಿಸರ್ಜಿಸಲಾಯಿತು. ಈ ಸಂದರ್ಭದಲ್ಲಿ ಮಕ್ಕಳು ಹಾಗೂ ಯುವಕರು ಖುಷಿಯಿಂದ ಪಾಲ್ಗೊಂಡಿದ್ದರು.

# ಕೆ.ಆಲದಹಳ್ಳಿಯಲ್ಲಿ ಕೃಷಿ ಮಾಹಿತಿ ಕೇಂದ್ರ ಉದ್ಘಾಟನೆ

• ಪ್ರಜೋದಯ ವರದಿ



**ಹಾಸನ:** ಕಾರೆಕೆರೆ ಕೃಷಿ ಕಾಲೇಜಿನ ಬಿಎಸ್‌ಸಿ ಅಂತಿಮ ವರ್ಷದ ವಿದ್ಯಾರ್ಥಿಗಳು ತಾಲ್ಲೂಕಿನ ಕೆ. ಆಲದಹಳ್ಳಿಯಲ್ಲಿ ಹಮ್ಮಿಕೊಂಡಿರುವ ಗ್ರಾಮೀಣ ಕೃಷಿ ಕಾರ್ಯಾನುಭವ ಶಿಬಿರದ ಅಂಗವಾಗಿ ಕೃಷಿ ಮಾಹಿತಿ ಕೇಂದ್ರ ಆರಂಭಿಸಿದ್ದಾರೆ.

ಮಾಹಿತಿ ಕೇಂದ್ರವನ್ನು ಮಹಾವಿದ್ಯಾಲಯ ಡೀನ್ (ಕೃಷಿ) ಡಾ. ಕೆ. ಎನ್. ಮುನಿಸ್ವಾಮಿಗೌಡ ಉದ್ಘಾಟಿಸಿದರು. ಸಹಾಯಕ ಪ್ರಾಧ್ಯಾಪಕಿ ಡಾ. ಜೆ.ಎಸ್. ಶಶಿಕಲಾ, ಕೃಷಿ ವಿಸ್ತರಣಾ ವಿಭಾಗ ಸಹಾಯಕ ಪ್ರಾಧ್ಯಾಪಕರು ಡಾ. ಶಿವಬಸಪ್ಪ ಕಂದಕೂರ್, ಕೃಷಿ ಇಂಜಿನಿಯರಿಂಗ್ ವಿಭಾಗದ ಸಹಾಯಕ ಪ್ರಾಧ್ಯಾಪಕ ಡಾ. ಎ. ಎಸ್. ಶಶಿಕಿರಣ್, ಕೃಷಿ ಅರ್ಥಶಾಸ್ತ್ರ ವಿಭಾಗದ ಡಾ. ವಿನೋದಾ ಶಂಕರ ನಾಯ್ಕ್, ಡಾ.ಹೆಚ್. ಮಂಜುನಾಥ ಭಾಗವಹಿಸಿದ್ದರು.

**ರೈತರಿಗೆ ಉಪಯುಕ್ತ ಮಾಹಿತಿ ಕೇಂದ್ರ:** ಕೆ.ಆಲದಹಳ್ಳಿಯಲ್ಲಿ ಕೃಷಿ ವಿದ್ಯಾರ್ಥಿಗಳು ತೆರೆದಿರುವ ಕೃಷಿ ಮಾಹಿತಿ ಕೇಂದ್ರ, ಕೇಂದ್ರ, ಗ್ರಾಮೀಣ ಜೀವನವನ್ನು ಪರಿಚಯಿಸುವುದರ ಜೊತೆಗೆ ವ್ಯವಸಾಯಕ್ಕೆ ಪೂರಕವಾಗಿದೆ. ಹಳ್ಳಿಯ ಸಂಪನ್ಮೂಲ ನಕ್ಷೆ, ಗ್ರಾಮ ಚಿತ್ರಣ, ನೆನಪಿನ ವೃಕ್ಷ, ಬೀಜ ವಿಜ್ಞಾನ ಮತ್ತು ತಂತ್ರಜ್ಞಾನ ವಿಭಾಗದಲ್ಲಿ ಬೀಜ ಉತ್ಪದನಾ ತತ್ವಗಳು, ಬೀಜೋಪಚಾರ ಹಾಗು ಅದರ ಪ್ರಯೋಜನ, ರೈತರು ಬಿತ್ತನೆ ಬೀಜ ಖರೀದಿಸುವಾಗ ಗಮನದಲ್ಲಿಡಬೇಕಾದ ಅಂಶ, ಬೀಜದಿಂದ ಸಸಿ, ಉತ್ತಮ ಬೀಜದ ಗುಣಲಕ್ಷಣ, ಬೀಜ ಒಣಗಿಸುವಿಕೆ ವಿಧಾನ ಹೀಗೆ ಎಲ್ಲಾ ಮಾಹಿತಿಯನ್ನು ಒಳಗೊಂಡಿದೆ. ಮಣ್ಣು ವಿಜ್ಞಾನ ಮತ್ತು ಕೃಷಿ ರಸಾಯನ ಶಾಸ್ತ್ರ, ತೋಟಗಾರಿಕಾ ವಿಭಾಗದಲ್ಲಿ ಶೂನ್ಯ ಶಕ್ತಿ ಘಟಕ ಮತ್ತು ಅದರ ಉಪಯೋಗ, ಕೃಷಿ ಯಂತ್ರಧಾರೆ, ತೋಟಗಾರಿಕೆ, ಎರೆಗೊಬ್ಬರ ಮಾಡುವ ವಿಧಾನ, ಸಾವಯವ ಕೃಷಿ, ಗೊಬ್ಬರದ ವಿಧಗಳು, ಬೆಳೆ ಪರಿವರ್ತನೆ, ನವ ಧಾನ್ಯಗಳ ಬಗ್ಗೆ ಮಾಹಿತಿ, ಹೊಲದಲ್ಲಿ ಬಳಸುವ ಸಲಕರಣೆಗಳು, ವಿವಿಧ ಬಗೆಯ ಹೊದಿಕೆ, ಅರಣ್ಯ ಕೃಷಿ ಬಗ್ಗೆಯೂ ಮಾಹಿತಿ ನೀಡಲಾಗುತ್ತಿದೆ.

ಜೇನು ಕೃಷಿ ವಿಭಾಗದಲ್ಲಿ ಅದರ ಪರಿಕರಗಳು ಹಾಗು ಜೇನು ಪೆಟ್ಟಿಗೆಯ ಬಗ್ಗೆ ಮಾಹಿತಿ ನೀಡಲಾಯಿತು. ರೇಷ್ಮೆ ಕೃಷಿ ವಿಭಾಗದಲ್ಲಿ ರೇಷ್ಮೆ ಹುಳುವಿನ ಪಾಲನೆ, ರೇಷ್ಮೆ ಹುಳು ಜೀವನ ಚಕ್ರ, ಪಶು ಸಂಗೋಪನೆ ಬಗ್ಗೆ ವಿದ್ಯಾರ್ಥಿಗಳು ರೈತರಿಗೆ ಅರಿವು ಮೂಡಿಸಿದರು.

# ಮದ್ದೂರು ಗಲಭೆ: ರಾಜಕೀಯ ಜಟಾಪಟಿ

» ಮೊದಲನೇ ಪುಟದಿಂದ

ಮನೆಗಳಿಗೆ ಗುರುವಾರ ಭೇಟಿ ನೀಡಿ, ಸಾಂತ್ವನ ಹೇಳಿದ ನಂತರ ಹಿಂದುತ್ವಪರ ಕಾರ್ಯಕರ್ತರನ್ನು ಉದ್ದೇಶಿಸಿ ರ‍್ಯಾಲಿಯಲ್ಲಿ ಅವರು ಮಾತನಾಡಿ, ರಾಜ್ಯದ ಬಿಜೆಪಿ ಯವರು ಹೊಂದಾಣಿಕೆ ಮಾಡಿ ಕೊಂಡಿದ್ದಾರೆ. ಬಿಜೆಪಿಯವರು ಗೌರ ವಯುತವಾಗಿ ತೆಗೆದುಕೊಳ್ಳದಿದ್ದರೆ, ರಾಜ್ಯ ದಲ್ಲಿ ಹೊಸ ಸರ್ಕಾರ ತರುತ್ತೇವೆ. ಪಾಕಿಸ್ತಾನಕ್ಕೆ ಜೈ ಎಂದು ಧ್ವಜ ಹಾರಿಸಿದ್ರೆ ಅಲ್ಲೇ ಎನ್‌ಕೌಂಟರ್ ಮಾಡುತ್ತೇವೆ. ಉತ್ತರ ಪ್ರದೇಶದ ಯೋಗಿ ಆದಿತ್ಯನಾಥ್ ರೀತಿ ಆಡಳಿತ ಕರ್ನಾಟಕದಲ್ಲಿ ಬರಲಿದೆ. ನಮ್ಮ ಸರ್ಕಾರ ಇದ್ದಾಗ ನನ್ನನ್ನು ಮಂತ್ರಿ ಮಾಡಲಿಲ್ಲ. ನಾನು ಗೃಹಮಂತ್ರಿ ಇದ್ದಿದ್ರೆ ಇವರ ಬಾಯಲ್ಲಿ ಗುಂಡು ಹಾಕುತ್ತಿದ್ದೆ ಎಂದರು.

ನಾನು ಅಧಿಕಾರಕ್ಕೆ ಬಂದರೆ ಗೋಹತ್ಯೆ ಮಾಡುವವರು ಢಮಾರ್, ವಕ್ಫ್ ಅನುದಾನವನ್ನು ಗೋರಕ್ಷಕರಿಗೆ ನೀಡುತ್ತೇನೆ. ಮೃತರ ಮೆರವಣಿಗೆ ವೇಳೆ ತಮಟೆ ಬಾರಿಸಲು ಮದ್ದೂರಿನ ಮಸೀದಿ ಮುಂದೆ ಬಿಡುತ್ತಿಲ್ಲವಂತೆ. ನಮ್ಮ ಸರ್ಕಾರ ಬಂದರೆ ಮಸೀದಿ ಮುಂದೆ ಒಂದು ಗಂಟೆ ಡ್ಯಾನ್ಸ್ ಮಾಡಲು ಅವಕಾಶ ಕೊಡುತ್ತೇನೆ. 2028ಕ್ಕೆ ಎಲ್ಲರೂ ವಿಧಾನಸೌಧದ ಮುಂದೆ ಭಗವಧ್ವಜ ತರ್ತೀರಾ? ನನ್ನನ್ನು ಕರ್ನಾಟಕ ಸಿಎಂ ಮಾಡ್ತೀರಾ? ಎಂದು ಕಾರ್ಯ ಕರ್ತರನ್ನು ಕೇಳಿದರು. ಮಂಡ್ಯ ಜಿಲ್ಲೆಯ ಜನರು ಸ್ವಾಭಿಮಾನಕ್ಕೆ ಪೆಟ್ಟು ಬಿದ್ದರೆ ಯಾರಿಗೂ ಹೆದರು ವುದಿಲ್ಲ. ಮಂಡ್ಯ ಜಿಲ್ಲೆಯಿಂದಲೇ ನನ್ನ ಯುದ್ಧ ಪ್ರಾರಂಭ. ಹಿಂದುತ್ವಪರ ಕಾರ್ಯಕರ್ತರಿಗೆ ಕಲ್ಲು ಹೊಡೆದವರಿಗೆ ಸರಿಯಾದ ಶಿಕ್ಷೆ ಆಗಬೇಕು.

# ಸಂತ ಫಿಲೋಮಿನಾ ಶಾಲೆ ಥ್ರೋಬಾಲ್‌ನಲ್ಲಿ ಪ್ರಥಮ



• ಪ್ರಜೋದಯ ವರದಿ

**ಹಾಸನ:** ನಗರ ಎ ವಿಭಾಗದ ತಾಲ್ಲೂಕು ಮಟ್ಟದ ಕ್ರೀಡಾಕೂಟದಲ್ಲಿ ಸಂತ ಫಿಲೋಮಿನಾ ಬಾಲಕಿಯರ ಪ್ರೌಢಶಾಲೆಯ ವಿದ್ಯಾರ್ಥಿನಿಯರು ಥ್ರೋ ಬಾಲ್‌ನಲ್ಲಿ ಪ್ರಥಮ ಸ್ಥಾನ, 4×100 ರಿಲೇ ದ್ವಿತೀಯ ಸ್ಥಾನ ಹೈ ಜಂಪ್‌ನಲ್ಲಿ ಪ್ರಥಮ ಸ್ಥಾನ, ವಾಕಿಂಗ್ ರೇಸ್ ಪ್ರಥಮ ಮತ್ತು ದ್ವಿತೀಯ ಸ್ಥಾನ ಪಡೆದುಕೊಂಡಿದ್ದಾರೆ.

ಸಂತ ಫಿಲೋಮಿನಾ ಬಾಲಕಿಯರ ಪ್ರೌಢಶಾಲಾ ತಂಡವು 30 ಅಂಕಗಳೊಂದಿಗೆ ಕ್ರೀಡಾಕೂಟದ ಸಮಗ್ರ ಕ್ರೀಡಾ ಪ್ರಶಸ್ತಿಯನ್ನು ಪಡೆದುಕೊಂಡಿದ್ದಾರೆ. ನಮ್ಮ ಶಾಲೆಯ ಬಾಸ್ಕೆಟ್ ಬಾಲ್ ತಂಡ ಜಿಲ್ಲಾ ಮಟ್ಟದ ದಸರಾ ಕ್ರೀಡಾಕೂಟದಲ್ಲಿ ಭಾಗವಹಿಸಿ ಬಾಸ್ಕೆಟ್ ಬಾಲ್ ನಲ್ಲಿ ಪ್ರಥಮ ಸ್ಥಾನವನ್ನು ಪಡೆದುಕೊಂಡಿರುತ್ತಾರೆ.

ಶಾಲೆಯ ಕರಾಟೆ ತಂಡವು ಅರಕಲಗೂಡಿನಲ್ಲಿ ನಡೆದ ನ್ಯಾಷನಲ್ ಕರಾಟೆ ಚಾಂಪಿಯನ್ ಶಿಪ್‌ನಲ್ಲಿ ಭಾಗವಹಿಸಿ ಪ್ರಥಮ ಸ್ಥಾನವನ್ನು ಪಡೆದುಕೊಂಡಿದ್ದಾರೆ.

ಸಂತ ಫಿಲೋಮಿನಾ ಬಾಲಕಿಯರ ಪ್ರೌಢಶಾಲೆಯು 2025- 26ನೇ ಸಾಲಿನಲ್ಲಿ ಕ್ರೀಡೆಯಲ್ಲಿ ತನ್ನದೇ ಆದ ಸಾಧನೆಯನ್ನು ಮಾಡುತ್ತಿದ್ದಾರೆ ಎಂದು ಶಾಲಾ ಆಡಳಿತ ಮಂಡಳಿ ಪದಾಧಿಕಾರಿಗಳು ತಿಳಿಸಿದೆ.

# ಪ್ರಮಾಣ ವಚನ ಸ್ವೀಕಾರ

**ಬೆಂಗಳೂರು:** ವಿಧಾನ ಸೌಧದ ಬ್ಯಾಂಕ್ವೆಟ್ ಹಾಲ್ ಗುರುವಾರ ನಡೆದ ಕಾರ್ಯಕ್ರಮದಲ್ಲಿ ಕರ್ನಾಟಕ ವಿಧಾನ ಪರಿಷತ್ತಿಗೆ ನೂತನವಾಗಿ ನಾಮನಿರ್ದೇಶನಗೊಂಡ ಡಾ.ಆರತಿ ಕೃಷ್ಣ, ರಮೇಶ್ ಬಾಬು, ಎಫ್.ಹೆಚ್.ಜಕ್ಕಪ್ಪನವರ್ ಮತ್ತು ಕೆ.ಶಿವಕುಮಾರ್ ಅವರು ವಿಧಾನ ಪರಿಷತ್‌ನ ಸದಸ್ಯರಾಗಿ ಪಮಾಣ ವಚನ ಸ್ವೀಕರಿಸಿದರು.

ವಿಧಾನ ಪರಿಷತ್ ಸಭಾಪತಿ ಬಸವರಾಜ ಹೊರಟ್ಟಿ ಅವರು ನೂತನವಾಗಿ ನಾಮನಿರ್ದೇಶನಗೊಂಡ ಸದಸ್ಯರುಗಳಿಗೆ ಪ್ರಮಾಣ ವಚನ ಬೋಧಿಸಿದರು. ಮುಖ್ಯಮಂತ್ರಿ ಸಿದ್ದರಾಮಯ್ಯ, ಉಪ ಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್, ಗೃಹ ಸಚಿವ ಡಾ. ಜಿ.ಪರಮೇಶ್ವರ, ಕಾನೂನು ಸಚಿವ ಹೆಚ್.ಕೆ. ಪಾಟೀಲ್, ಪಶುಸಂಗೋಪನೆ ಸಚಿವ ವೆಂಕಟೇಶ್, ಸಣ್ಣ ನೀರಾವರಿ, ವಿಜ್ಞಾನ ಮತ್ತು ತಂತ್ರಜ್ಞಾನ ಸಚಿವರಾದ ಎನ್.ಎಸ್. ಭೋಸರಾಜು ಇನ್ನಿತರರಿದ್ದರು.

# ಮನೆ-ಮನೆ ಸಮೀಕ್ಷೆಗೆ ಹಿಂದುಳಿದ ವರ್ಗಗಳು ಸಹಕರಿಸಲು ಮನವಿ

• ಪ್ರಜೋದಯ ವರದಿ



**ಚನ್ನರಾಯಪಟ್ಟಣ:** ರಾಜ್ಯದಲ್ಲಿ ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ ವತಿಯಿಂದ ನಡೆಯುತ್ತಿರುವ ಇದು ನಮ್ಮ ಸಮೀಕ್ಷೆಗೆ ಜವಾಬ್ದಾರಿ ಇಂದ ಪಾಲ್ಗೊಳ್ಳೋಣ ಎಂಬ ಆಂದೋಲನಕ್ಕೆ ಎಲ್ಲಾ ಹಿಂದುಳಿದ ವರ್ಗಗಳು ಕೈಜೋಡಿಸುವಂತೆ ತಾಲ್ಲೂಕು ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ ಅಧಿಕಾರಿ ರಾಜೇಶ್ ಚವ್ಹಾಣ್ ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

ಕರ್ನಾಟಕ ರಾಜ್ಯ ಹಿಂದುಳಿದ ವರ್ಗಗಳ ಆಯೋಗ ರಾಜ್ಯದ ಸಾಮಾಜಿಕ ಮತ್ತು ಶೈಕ್ಷಣಿಕ-2025 ರ ಮನೆಮನೆ ಸಮೀಕ್ಷೆಯನ್ನು ಸೆ. 22ರಿಂದ ಅಕ್ಟೋಬರ್ 7 ರವರೆಗೆ ರಾಜ್ಯಾದ್ಯಂತ ಹಮ್ಮಿಕೊಂಡಿದೆ. ಸಮೀಕ್ಷೆಯಲ್ಲಿ ಪ್ರಶ್ನಾವಳಿಯಲ್ಲಿ ಸುಮಾರು 60 ಪ್ರಶ್ನೆಗಳಿದ್ದು, ಪ್ರಶ್ನಾವಳಿಯಲ್ಲಿ ವ್ಯಾಪಾರ. ಉದ್ಯೋಗ. ವಿದ್ಯಾರ್ಹತೆ. ಕೌಶಲ್ಯ ತರಬೇತಿ ಅಗತ್ಯತೆ, ಆದಾಯ, ಕುಟುಂಬದ ಸ್ಥಿರ ಮತ್ತು ಚರಾಸ್ತಿ ವಿವರಗಳು, ಧರ್ಮ, ಜಾತಿ, ಉಪಜಾತಿ, ಕುಲಕಸುಬು ಮುಂತಾದ ಮಾಹಿತಿಗಳ ಬಗ್ಗೆ ಪ್ರಶ್ನೆಗಳು ಇರುತ್ತವೆ ಎಂದಿದ್ದಾರೆ.

ಪ್ರತಿ ಕುಟುಂಬವು ಮಾಹಿತಿ ನೀಡಲು ಪಡಿತರ ಚೀಟಿ, ಆಧಾರ್ ಕಾರ್ಡ್ ಸಂಖ್ಯೆ, ಮತದಾರರ ಗುರುತಿನ ಚೀಟಿ, ವಿಕಲ ಚೇತನ ವಾಗಿದ್ದಲ್ಲಿ ಅಲ್ವಾ ಯು.ಐ.ಡಿ ಕಾರ್ಡ್ ಅಥವಾ ಪ್ರಮಾಣ ಪತ್ರಗಳನ್ನು ಸಿದ್ಧವಾಗಿಟ್ಟುಕೊಳ್ಳಬೇಕು. ಸಮೀಕ್ಷೆ ವೇಳೆ ಇ-ಕೆವೈಸಿ ಪ್ರಕ್ರಿಯೆಗಾಗಿ ಓ.ಟಿ.ಪಿ. ಸಂಖ್ಯೆಯು ಸದಸ್ಯರ ಆಧಾರ್ ನಂಬರ್‌ಗೆ ಜೋಡಣೆ ಆಗಿರುವ ಮೊಬೈಲ್ ನಂಬರ್‌ಗೆ ಬರುತ್ತದೆ. ಒಂದು ವೇಳೆ ಸದಸ್ಯರು ಮನೆಯಲ್ಲಿ ಇಲ್ಲದಿದ್ದರೆ ಕುಟುಂಬದ ಪರವಾಗಿ ಉತ್ತರ ನೀಡುತ್ತಿರುವ ಸದಸ್ಯರು ಫೋನ್ ಮೂಲಕ ಓಟಿಪಿ ಪಡೆದು ಮಾಹಿತಿ ನೀಡಬೇಕಾಗಿರುತ್ತದೆ ಎಂದು ಸಲಹೆ ನೀಡಿದರು.

ಚನ್ನರಾಯಪಟ್ಟಣ ತಾಲ್ಲೂಕಿನಲ್ಲಿ ಸುಮಾರು 88,634 ಮನೆಗಳಿದ್ದು ಅದರಲ್ಲಿ ನಗರ ಪ್ರದೇಶದಲ್ಲಿ 18859 ಮತ್ತು ಗ್ರಾಮೀಣ ಪ್ರದೇಶದಲ್ಲಿ 69,775 ಮನೆಗಳಿವೆ ಎಂದು ಅವರು ತಿಳಿಸಿದರು.

8 ವರ್ಷ ಮೇಲ್ಪಟ್ಟ ಪ್ರತಿಯೊಬ್ಬ ಸದಸ್ಯನಿಗೂ ಆಧಾರ್ ಕಡ್ಡಾಯವಾಗಿದೆ ಆಧಾರ್ ಸಂಖ್ಯೆ ಇಲ್ಲದಿದ್ದರೆ ಹತ್ತಿರದ ಆಧಾರ್ ನೋಂದಣಿ ಕೇಂದ್ರದಲ್ಲಿ ವಿವರಗಳನ್ನು ನೋಂದಾಯಿಸಿ ನೊಂದಣಿ ಸಂಖ್ಯೆಯನ್ನು ಪಡೆದುಕೊಂಡು ಸಮೀಕ್ಷೆಯಲ್ಲಿ ಭಾಗವಹಿಸಬಹುದು.

ಹಾಗೆಯೇ ಮೊಬೈಲ್ ನಂಬರ್ ಆಧಾರ್ ನಂಬರ್ಗೆ ಲಿಂಕ್ ಆಗಿಲ್ಲದಿದ್ದರೆ ಅದನ್ನು ತಕ್ಷಣವೇ ಲಿಂಕ್ ಮಾಡಿಸಿಕೊಳ್ಳುವುದು ಹಾಗೂ ಜನ ಪ್ರತಿನಿಧಿಗಳು. ಸಂಘ ಸಂಸ್ಥೆಗಳು. ಸಮುದಾಯಗಳು ಹಾಗೂ ಸಾರ್ವಜನಿಕರು ಸಾಮಾಜಿಕ ಮತ್ತು ಶೈಕ್ಷಣಿಕ ಸಮೀಕ್ಷೆಗೆ ಸ್ವಯಂ ಪ್ರೇರಿತವಾಗಿ ಸಹಕಾರ ರಾಜ್ಯ ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ ವತಿಯಿಂದ ನಡೆಯುತ್ತಿರುವ ಸಮೀಕ್ಷೆಯನ್ನು ಯಶಸ್ವಿಗೊಳಿಸಲು ಕೋರಿದರು. ಜೊತೆಗೆ ಇದು ನಮ್ಮ ಸಮೀಕ್ಷೆ-ನಾವು ಜವಾಬ್ದಾರಿಯಿಂದ ಪಾಲ್ಗೊಳ್ಳುವಂತೆ ಅವರು ಹಿಂದುಳಿದ ವರ್ಗಗಳಲ್ಲಿ ಮನವಿ ಮಾಡಿದರು.

# ಕೃಷಿ ಪತ್ತಿನ ಸಹಕಾರ ಸಂಘಗಳು ರೈತರ ಜೀವನಾಡಿ

• ಪ್ರಜೋದಯ ವರದಿ



**ಚನ್ನರಾಯಪಟ್ಟಣ:** ಗ್ರಾಮೀಣ ಭಾಗದಲ್ಲಿನ ಜನರ ಅಭಿವೃದ್ಧಿಗೆ ಹೈನುಗಾರಿಕೆ ಮತ್ತು ಕೃಷಿ ಪತ್ತಿನ ಸಹಕಾರ ಸಂಘಗಳು ಜೀವನಾಡಿಯಾಗಿವೆ. ಸಹಕಾರ ಸಂಘಗಳೊಂದಿಗೆ ರೈತರು ಸಹಭಾಗಿತ್ವ ಹೊಂದುವ ಮೂಲಕ ಸಂಘದೊಂದಿಗೆ ತಾವು ಅಭಿವೃದ್ಧಿ ಸಾಧಿಸಲು ಸಾಧ್ಯವೆಂದು ರಾಜ್ಯ ಮಾರಾಟ ಮಹಾಮಂಡಳದ ನಿರ್ದೇಶಕ ಸಿ.ಎನ್.ಪುಟ್ಟಸ್ವಾಮೀಗೌಡ ಅಭಿಪ್ರಾಯಿಸಿದರು.

ಪಟ್ಟಣದಲ್ಲಿನ ಕಸಬಾ ಪ್ರಾಥಮಿಕ ಕೃಷಿ ಪತ್ತಿನ ಸಹಕಾರ ಸಂಘದಲ್ಲಿ ಗುರುವಾರ ನಡೆದ 2024-25ನೇ ಸಾಲಿನ ಸರ್ವಸದಸ್ಯರ ವಾರ್ಷಿಕ ಮಹಾಸಭೆಯನ್ನು ಉದ್ಘಾಟಿಸಿ ಮಾತನಾಡಿದ ಅವರು, ಷೇರುದಾರರು ಸೊಸೈಟಿಯ ಕಾರ್ಯಗಳಲ್ಲಿ ಸಕ್ರಿಯವಾಗಿ ಭಾಗಿಯಾಗಿ ಹೆಚ್ಚು ವ್ಯವಹಾರ ನಡೆಸಿದಾಗ ಸಂಘವು ಹೆಚ್ಚು ಕ್ರಿಯಾಶೀಲವಾಗಿ ಹೊಸ ಹೊಸ ಚಟುವಟಿಕೆಗಳಲ್ಲಿ ತೊಡಗಿಕೊಳ್ಳುತ್ತದೆ. 2500ಕ್ಕೂ ಹೆಚ್ಚು ಸದಸ್ಯರನ್ನು ಹೊಂದಿರುವ ಸೊಸೈಟಿಯಲ್ಲಿ ಅವರೆ ಲ್ಲರ ಹಿತ ಕಾಯುವ ಜವಬ್ದಾರಿ ಆಡಳಿತ ಮಂಡಳಿಯದ್ದಾಗಿರಬೇಕೆಂದರು.

ಸಂಘದಡಿ 1179 ಸದಸ್ಯರಿಗೆ 7ಕೋಟಿ 90 ಲಕ್ಷ ರೂ.ಗಳನ್ನು ಶೂನ್ಯ ಬಡ್ಡಿದರದಲ್ಲಿ ಸಾಲ ನೀಡಲಾಗಿದೆ. 67 ಮಂದಿಗೆ ಹೈನುಗಾರಿಕೆಗಾಗಿ 6ಲಕ್ಷದ 70ಸಾವಿರ ಸಾಲ, ಮಧ್ಯಮಾವಧಿ ಸಾಲವಾಗಿ 41 ಜನಕ್ಕೆ 2ಕೋಟಿ 69 ಲಕ್ಷ ರೂ.ಗಳ ಸಾಲ ನೀಡಲಾಗಿದೆ, 84 ಮಂದಿಗೆ ವ್ಯಾಪಾರ ಸಾಲವಾಗಿ 6 ಲಕ್ಷ 11 ಸಾವಿರ ಸಾಲ ಮತ್ತು ಅನಿಲ ಸಂಪರ್ಕ ಸಾಲವನ್ನು 22 ಮಂದಿಗೆ ನೀಡಲಾಗಿದೆ. ಕಳೆದ 13ವರ್ಷಗಳಿಂದ ಬಾಕಿಯಿರುವ ಸ್ವಸಹಾಯ ಸಂಘಗಳ ಗುಂಪುಗಳಿಗೆ ನೀಡಲಾಗಿರುವ 75 ಲಕ್ಷ ರೂ. ಸಾಲದ ಮರುಪಾವತಿಗೆ ಹೆಚ್ಚಿನ ಕ್ರಮಕ್ಕೆ ಮುಂದಾಗಬೇಕೆಂದ ಅವರು ಜಿಲ್ಲಾ ಸಹಕಾರಿ ಬ್ಯಾಂಕಿನಲ್ಲಿ ಹೊಸ ಸಾಲ ನೀಡಲು ಅನುಮೋದನೆಯಾಗಿದ್ದು, ಹೊಸ ಸಾಲಕ್ಕೆ ರೈತರು ಅರ್ಜಿ ಸಲ್ಲಿಸಲು ಅವಕಾಶವಿದೆ. ಕಸಬಾ ಸೊಸೈಟಿಯಡಿ 35ರೈತರು ಹೊಸ ಸಾಲಕ್ಕಾಗಿ ಅರ್ಜಿ ಸಲ್ಲಿಸಿದ್ದಾರೆ ಎಂದರು.

ಸಭೆಯಲ್ಲಿ 2024-25ನೇ ಲೆಕ್ಕಪತ್ರದ ಮಂಡನೆಯನ್ನು ಸೊಸೈಟಿಯ ಸಿಇಓ ಸಿ.ಎನ್.ರಮೇಶ್ ಮಂಡಿಸಿದರು. ಮುಂದಿನ ಆರ್ಥಿಕ ವರ್ಷಕ್ಕೆ ಸೊಸೈಟಿಯು ಅಂದಾಜು ಪಟ್ಟಿ ಸಿದ್ದಪಡಿಸುವಿಕೆಯ ಚರ್ಚೆಯ ಮೇಲೆ ಮಾತನಾಡಿದ ಷೇರುದಾರ ಕಾಳೇನಹಳ್ಳಿ ರಂಗಸ್ವಾಮಿ ಮಾತನಾಡಿ, ಮಧ್ಯಮಾವಧಿ ಸಾಲದಲ್ಲಿ ಸಾಲ ಪಡೆದ ಮೊತ್ತದ ಪೈಕಿ ಶೇ.20ರಷ್ಟು ಹಣ ಕಡಿತಗೊಳಿಸಿ ನೀಡುತ್ತಿದ್ದಾರೆ. ಇದರಿಂದ ರೈತರಿಗೆ ಅನ್ಯಾಯವಾಗುತ್ತದೆ. ಇದನ್ನು ಈ ಹಿಂದೆ ಇದ್ದಂತೆ ಶೇ.10ರಷ್ಟು ಇಡಿಯಲು ಅವಕಾಶವಾಗಬೇಕೆಂದರು.

ಸಂಘದ ಅಧ್ಯಕ ಸಿ.ಎಸ್.ಸುರೇಶ್, ಉಪಾಧ್ಯಕ್ಷ ಕುರವಂಕ ಮಂಜೇಗೌಡ, ನಿರ್ದೇಶಕ ವೈ.ಎನ್. ಜಯಣ್ಣ, ಹೆಚ್.ಆರ್.ವೆಂಕಟೇಶಮೂರ್ತಿ, ಕುರವಂಕ ರಾಮಕೃಷ್ಣ, ಭಾಗ್ಯಮ್ಮ, ಲತಾ ಶಂಭುಲಿಂಗೇಗೌಡ, ಜಿ.ಆರ್. ಶ್ರೀನಿವಾಸ್, ರವಿ ಮಳ್ಳೇನಹಳ್ಳಿ, ನಂಜುಂಡಯ್ಯ, ಮುದ್ದನಾಯಕ, ಕೆ.ಎನ್.ಶಂಕರ್ ಮತ್ತು ಸಂಘದ ಸಿಇಓ ಸಿ.ಎನ್.ರಮೇಶ್, ಲೆಕ್ಕಣಿಗ ಎಂ.ಪಿ.ಲೋಕೇಶ್, ಗುಮಾಸ್ತೆ ಎಂ.ಕೆ. ವಿನುತಾ, ಸಿ.ಎಸ್.ಹೇಮಾ, ರಾಘವೇಂದ್ರ, ಡಿ.ಡಿ.ಗಿರೀಶ್, ಕೆ.ಸಿ.ವಿಕಾಸ್ ಇದ್ದರು,

# ಹಿರಿಯ ಸಾಹಿತಿ ಡಾ.ಶ್ರೀವತ್ಸ ಎಸ್.ವಟಿಗೆ ಸನ್ಮಾನ

• ಪ್ರಜೋದಯ ವರದಿ



**ಬೇಲೂರು:** ದಿ.ಟಿ.ಶ್ರೀನಿವಾಸ ಸ್ಮರಣಾರ್ಥ ಪಿ.ಕೆ.ನಾರಾಯಣ ಸಾಹಿತ್ಯ ದತ್ತಿ ಪ್ರಶಸ್ತಿಗೆ ಬೇಲೂರಿನ ಹಿರಿಯ ಸಾಹಿತಿ ಡಾ. ಶ್ರೀವತ್ಸ ಎಸ್.ವಟಿ ಅವರು ಆಯ್ಕೆಯಾಗಿದ್ದು, ಅವರನ್ನು ಕನ್ನಡ ಸಾಹಿತ್ಯ ಪರಿಷತ್ತು ವತಿಯಿಂದ ಸನ್ಮಾನಿಸಿ ಗೌರವಿಸಲಾಯಿತು.

ಪಟ್ಟಣದ ಅವರ ನಿವಾಸದಲ್ಲಿ ಸನ್ಮಾನಿಸಿ ಮಾತನಾಡಿದ ತಾಲ್ಲೂಕು ಕನ್ನಡ ಸಾಹಿತ್ಯ ಪರಿಷತ್ತಿನ ಅಧ್ಯಕ್ಷ ಮಾ.ನ.ಮಂಜೇಗೌಡ ಅವರು, ಡಾ. ಶ್ರೀವತ್ಸ ಎಸ್. ವಟಿ ಅವರು ಸಾಹಿತ್ಯ ಕ್ಷೇತ್ರದಲ್ಲಿ ಮಾಡಿದ ಪರಿಶ್ರಮ, ಸಂಶೋಧನಾ ಸೇವೆ ಹಾಗೂ ಸೃಜನಶೀಲ ಕೊಡುಗೆಗಳು ಇಡೀ ಕನ್ನಡ ನಾಡಿಗೆ ಹೆಮ್ಮೆ ತಂದಿವೆ. ಅವರಂತಹ ಹಿರಿಯರು ನಮ್ಮ ತಾಲ್ಲೂಕಿನಲ್ಲಿ ಇರುವುದೇ ನಮ್ಮೆಲ್ಲರಿಗೂ ಸ್ಫೂರ್ತಿಯಾ ಗಿದೆ. ಕಸಾಪ ಪರಿಷತ್ತು ಇಂತಹ ಸಾಹಿತಿಗಳನ್ನು ಗೌರವಿಸುವ ಮೂಲಕ ಕನ್ನಡದ ಬೆಳವಣಿಗೆಗೆ ದಾರಿಯನ್ನಿಡುತ್ತಿದೆ ಎಂದು ಅಭಿಪ್ರಾಯಪಟ್ಟರು.

ಸುಮಾರು 200 ಕ್ಕೂ ಹೆಚ್ಚು ದೇವಾಲಯಗಳ ಪುನರಚನೆ ಹಾಗು ಹಳೆಗನ್ನಡವನ್ನು ಸೇರಿದಂತೆ ಹಲವು ವಿಷಯಗಳಲ್ಲಿ ಪ್ರಬುದ್ಧತೆ ಇಂತಹ ಮಹಾನ್ ಸಾಹಿತಿ ನಮ್ಮ ಬೇಲೂರಿನಲ್ಲಿ ಇರುವುದು ನಮಗೆ ಹೆಮ್ಮೆ ತರುವ ಸಂಗತಿ ಎಂದರು.

ಕನ್ನಡ ಸಾಹಿತ್ಯ ಪರಿಷತ್ತು ಗೌರವ ಕಾರ್ಯದರ್ಶಿ ಬಿ. ಬಿ. ಶಿವರಾಜು, ತಾಲ್ಲೂಕು ಸಾಹಿತ್ಯ ಪರಿಷತ್ತಿನ ಗೌರವ ಸಲಹೆಗಾರ ಮ. ಶಿವಮೂರ್ತಿ, ಮಾಜಿ ಅಧ್ಯಕ್ಷ ಬಿ.ಎಲ್.ರಾಜೇಗೌಡ, ದೇಶ ಭಕ್ತ ಬಳಗದ ಅಧ್ಯಕ್ಷ ಡಾ. ಸಂತೋಷ್, ಇಂದಿರಮ್ಮ, ಸಾಹಿತಿ ಮಧುಮಾಲತಿ ರುದ್ರೇಶ್, ಚನ್ನಕೇಶವ ದೇಗುಲ ಪ್ರಧಾನ ಅರ್ಚಕ ಶ್ರೀನಿವಾಸ್ ಭಟ್, ಪತ್ರಕರ್ತ ಗಣೇಶ್, ಪದಾಧಿಕಾರಿಗಳು, ಹಿರಿಯ ಕವಿ-ಲೇಖಕರು ಹಾಗೂ ಸಾಹಿತ್ಯಾಸಕ್ತರು ಪಾಲ್ಗೊಂಡಿದ್ದರು.

# ಅಮ್ಮನಹಳ್ಳದಲ್ಲಿ ದೊಡ್ಡಸೇವೆ, ಮಹಾಪೂಜೆ

• ಪ್ರಜೋದಯ ವರದಿ



**ಹಾರನಹಳ್ಳಿ:** ಇಲ್ಲಿನ ಗ್ರಾಮಸ್ಥರುಗಳಿಂದ ರಂಗಾಪುರ ಸಮೀಪ ಇರುವ ಅಮ್ಮನಹಳ್ಳದಲ್ಲಿ ಶ್ರೀ ಕೋಡಮ್ಮದೇವಿ ಮೂಲ ಸನ್ನಿಧಾನದಲ್ಲಿ ಸಾವಿರಾರು ಜನರ ಸಮ್ಮುಖದಲ್ಲಿ ದೊಡ್ಡ ಸೇವೆ ಮತ್ತು ಮಹಾಪೂಜೆಗಳು ಸಂಭ್ರಮದಿಂದ ಅದ್ದೂರಿಯಾಗಿ ನಡೆದವು.

ಅಮ್ಮನಹಳ್ಳದಲ್ಲಿ ಗಂಗೆ ಪೂಜೆಯಾದ ನಂತರ ಶ್ರೀ ಕೋಡಮ್ಮದೇವಿ ಯಳವಾರೆ ಶ್ರೀ ಹುಚ್ಚಮ್ಮದೇವಿ, ಧೂತರಾಯಸ್ವಾಮಿ, ವೀರಭದ್ರಸ್ವಾಮಿ, ಕೆಂಚರಾಯಸ್ವಾಮಿ, ಚಲುವರಾಯಸ್ವಾಮಿ ಹಾಗೂ ವಿವಿಧ ದೇವತೆಗಳಿಗೆ ಬಂಗಾರದ ವಡವೆ ಬೆಳ್ಳಿಯ ಒಡವೆಗಳನ್ನು ಧರಿಸಿ ಪೂಜೆ ಅಲಂಕಾರ ಮಾಡಿದ ನಂತರ ವಿವಿಧ ಧಾರ್ಮಿಕ ಪೂಜಾ ಕಾರ್ಯಕ್ರಮಗಳನ್ನು ಭಕ್ತಿ ಭಾವದಿಂದ ಭಕ್ತರುಗಳು ಪೂಜೆಯನ್ನು ಮಾಡಿದರು.

ಶ್ರೀ ಕೋಡಮ್ಮದೇವಿ, ಯಳವಾರೆ ಹುಚ್ಚಮ್ಮದೇವಿಗಳಿಗೆ ವಿವಿಧ ಬಗ್ಗೆಯ ಬಣ್ಣ, ಬಣ್ಣ ಹೂವು ತೋಮಾಲೆ, ದುಂಡುಹಾರ, ಹೊಂಬಾಳೆಗಳಿಂದ ಶೃಂಗಾರ ಮಾಡಿ ಧೂತರಾಯಸ್ವಾಮಿ, ವೀರಭದ್ರಸ್ವಾಮಿ, ಚಲುವರಾಯ ಸ್ವಾಮಿಗಳ ದೇವರುಗಳನ್ನು ಗಣಮಗನ ಮೇಲೆ ತಲೆ ಮೇಲೆ ಕೊಟ್ಟು ಕುಣಿಸಿದರು ಸೋಮನ ಕುಣಿತಕ್ಕೆ ಅರೆವಾದ್ಯ ದೊಣ್ಣು ವಾಲಗಗಳು ಸೋಮನ ಕುಣಿತಕ್ಕೆ ಮೆರುಗು ನೀಡಿತ್ತು. ಕೆಂಚಪ್ಪನಿಗೆ ಮಣೇವು ಸೇವೆ ಅಲ್ಲಿರುವ ಭೂತಗಳಿಗೆ ವಿವಿಧ ಪೂಜೆ ಸೇವೆಗಳು ನಡೆಯಿತು.

ಈ ಭಾಗದ ರೈತರು ಉತ್ತಮ ಮಳೆ ಬೆಳೆಗೆ ಪ್ರತಿ ವರ್ಷವೂ ಅಮ್ಮನಹಳ್ಳದಲ್ಲಿ ಪೂಜೆ ಮಾಡುವುದು ವಾಡಿಕೆಯಾಗಿದ್ದು, ಭಕ್ತರುಗಳು ಉತ್ತಮ ಮಳೆಯಾಗಲಿ ಅಂತ ಅಮ್ಮನಹಳ್ಳದಲ್ಲಿ ಭಕ್ತಿಭಾವದಿಂದ ಅಮ್ಮನವರನ್ನು ಪ್ರಾರ್ಥಿಸಿದರು. ಹಾರನಹಳ್ಳಿ ಗ್ರಾಮಸ್ಥರುಗಳು ಎಲ್ಲಾ ಕೋಮಿನ ಮುಖ್ಯಸ್ಥರುಗಳು, ದೇವ ಪೂಜಾರಿಗಳು, ಭಕ್ತರು ಕಾರ್ಯಕ್ರಮದಲ್ಲಿ ಭಾಗವಹಿಸುವ ಮೂಲಕ ಶ್ರದ್ಧಾ-ಭಕ್ತಿಯನ್ನು ಮೆರೆದರು.

# ವಿದ್ಯುತ್ ವ್ಯತ್ಯಯ

• ಪ್ರಜೋದಯ ವರದಿ

**ಹೊಳೆನರಸೀಪುರ:** ನೋಡಲ್ ಕೇಂದ್ರ ವ್ಯಾಪ್ತಿಯ 66/11 ಕೆ.ವಿ.ವಿ ಕೇಂದ್ರ. ಹೊಳೆನರಸೀಪುರ, ಸೋಮನ ಹಳ್ಳಿ ಮತ್ತು ಹರದನಹಳ್ಳಿ ಇಲ್ಲಿ ಸೆ.12 ರಂದು ಬೆಳಿಗ್ಗೆ 10 ರಿಂದ ಸಂಜೆ 5 ಗಂಟೆಯ ವರೆಗೆ ಎರಡನೇ ತ್ರೈಮಾಸಿಕ ಹಾಗೂ ತುರ್ತು ನಿರ್ವಹಣಾ ಕಾರ್ಯ ನಿರ್ವಹಿಸಬೇಕಾಗಿರುವುದರಿಂದ ಹೊಳೆನರಸೀಪುರ (ಕಾಪಾ) ಶಾಖಾ ವ್ಯಾಪ್ತಿಯ ಗ್ರಾಮಗಳಾದ ಹೊಳೆನರಸೀಪುರ ಟೌನ್, ಅಮಾನಿಕೆರೆ, ಆಲಗೌಡನಹಳ್ಳಿ, ಮಲ್ಲಪ್ಪನಹಳ್ಳಿ, ವಾಟರ್ ಸಪ್ಲೆ, ಮೆಣಗನಹಳ್ಳಿ, ಕೆ.ಹೆಚ್.ಬಿ. ಕಾಲೋನಿ, ಚಿಟ್ಟನಹಳ್ಳಿ, ಗಾಳಿಪುರ, ಐಚನಹಳ್ಳಿ ಹಾಗೂ ಹಳ್ಳಿಮೈಸೂರು ಶಾಖಾ ವ್ಯಾಪ್ತಿಯ ಗ್ರಾಮಗಳಾದ ಸೋಮನಹಳ್ಳಿ, ಕುಪ್ಪೆ, ನಿಡುವಣಿ, ಬಿದರಕ್ಕ, ನೇರಳೆ ಮತ್ತು ಹರದನಹಳ್ಳಿ ಶಾಖಾ ವ್ಯಾಪ್ತಿಯ ಗ್ರಾಮಗಳಾದ ಕಾಳೇನಹಳ್ಳಿ, ಬೆಟ್ಟಹಳ್ಳಿ, ಮನುಗನಹಳ್ಳಿ, ಶೀಗವಾಳು, ಕೇರಳಾಪುರ ಹಾಗೂ ಸುತ್ತಮುತ್ತಲಿನ ಗ್ರಾಮಗಳಲ್ಲಿ ವಿದ್ಯುತ್ ವ್ಯತ್ಯಯವಾಗಲಿದೆ ಎಂದು ಕವಿಪ್ರನಿನಿ, ಹೊಳೆನರಸೀಪುರ ನೋಡಲ್ ಕೇಂದ್ರ ಪ್ರಕಟಣೆಯಲ್ಲಿ ತಿಳಿಸಿದೆ.


ಹಾಸನದ 7ನೇ ಅಧಿಕ ಸಿವಿಲ್ ಜಡ್ಜ್ ಮತ್ತು
ಜೆ.ಎಂ.ಎಫ್.ಸಿ. ರವರ ನ್ಯಾಯಾಲಯದಲ್ಲಿ
ಸಿ.ಮಿಸ್: 465/2025

ಅರ್ಜಿದಾರರು 1) ಅಭಿಷೇಕ್‌ಗೌಡ ಬಿ.ಎಂ.
ಬಿನ್ ಲೇಟ್ ಮಂಜೇಗೌಡ ಬಿ.ಜೆ., ಸುಮಾರು 30 ವರ್ಷ
2) ದಯಾನಂದಗೌಡ ಬಿ.ಎಂ.
ಬಿನ್ ಲೇಟ್ ಮಂಜೇಗೌಡ ಬಿ.ಜೆ., ಸುಮಾರು 28 ವರ್ಷ,
ಇಬ್ಬರ ವಾಸ
ಬಳ್ಳೇಕೆರೆ ಗ್ರಾಮ, ಕಟ್ಟಾಯ ಹೋಬಳಿ, ಹಾಸನ ತಾಲ್ಲೂಕು.
: : ವಿರುದ್ಧ : :
ರೆಸ್ಪಾಂಡೆಂಟರು : ತಹಸೀಲ್ದಾರ್‌ರವರು, ಜನನ ಮತ್ತು ಮರಣ ನೊಂದಣಾಧಿಕಾರಿಗಳು, ಹಾಸನ ತಾಲ್ಲೂಕು, ಹಾಸನ.

ಪತ್ರಿಕಾ ಪ್ರಕಟಣೆ

ಅರ್ಜಿದಾರರು ಹಾಸನ ತಾಲ್ಲೂಕು, ಕಟ್ಟಾಯ ಹೋಬಳಿ, ಬಳ್ಳೇಕೆರೆ ಗ್ರಾಮದಲ್ಲಿ ವಾಸವಾಗಿರುವ ಅಭಿಷೇಕ್‌ಗೌಡ ಬಿ.ಎಂ. ಮತ್ತು ದಯಾನಂದಗೌಡ ಬಿ.ಎಂ. ರವರ ಅಜ್ಜಿಯವರಾದ ಜಯಮ್ಮ ಕೋಂ ಜಡೇಗೌಡ ರವರು ದಿನಾಂಕ: 01/01/1978 ರಂದು ಮರಣ ಹೊಂದಿರುತ್ತಾರೆಂದು ಅರ್ಜಿದಾರರ ಅಜ್ಜಿಯ ಮರಣ ಪ್ರಮಾಣ ಪತ್ರವು ಸಂಬಂಧಪಟ್ಟ ಕಚೇರಿಯಲ್ಲಿ ನೊಂದಣಿಯಾಗಿಲ್ಲ ವೆಂದು ಅರ್ಜಿದಾರರ ಅಜ್ಜಿಯಾದ ಜಯಮ್ಮ ಕೋಂ ಜಡೇಗೌಡ ರವರ ಮರಣ ಪ್ರಮಾಣ ಪತ್ರವು ಅತ್ಯವಶ್ಯಕವಾಗಿ ಬೇಕಾಗಿರುತ್ತದೆಂದು ಮಾನ್ಯ ನ್ಯಾಯಾಲಯದಲ್ಲಿ ಅರ್ಜಿಯನ್ನು ತಂದಿರುತ್ತಾರೆ. ಜಯಮ್ಮ ಕೋಂ ಜಡೇಗೌಡ ರವರ ಬಳ್ಳೇಕೆರೆ ಗ್ರಾಮದವರಾಗಿದ್ದು, ಸದರಿ ಗ್ರಾಮದಲ್ಲಿ ಮರಣ ಹೊಂದಿರುತ್ತಾರೆಂದು ಅರ್ಜಿಯಲ್ಲಿ ತಿಳಿಸಿರುತ್ತಾರೆ. ಅರ್ಜಿದಾರರ ಅಜ್ಜಿಯಾದ ಜಯಮ್ಮ ಕೋಂ ಜಡೇಗೌಡ ರವರ ವಾರಸುದಾರರು ಯಾರಾದರೂ ಇದ್ದಲ್ಲಿ ಅರ್ಜಿಯ ವಿರುದ್ಧ ಕಾರಣವನ್ನು ತೋರಿಸಲು ದಿನಾಂಕ: 29/10/25 ರಂದು ಪೂರ್ವಾಹ್ನ 11 ಗಂಟೆಗೆ ನೀವುಗಳು ಖುದ್ದಾಗಿ ಅಥವಾ ಸರಿಯಾಗಿ ಮಾಹಿತಿ ಪಡೆದಿರುವ ವಕೀಲರ ಮೂಲಕ ನ್ಯಾಯಾಲಯದಲ್ಲಿ ಹಾಜರಾಗಬೇಕೆಂದು ಇದಕ್ಕೆ ತಪ್ಪಿದ್ದರೆ ಸದರಿ ಅರ್ಜಿಯನ್ನು ಏಕಪಕ್ಷೀಯವಾಗಿ ವಿಚಾರಣೆ ಮಾಡಲಾಗುವುದೆಂದು ಮತ್ತು ತೀರ್ಮಾನಿಸಲಾಗುವುದೆಂದು ಈ ಮೂಲಕ ತಿಳಿಯಪಡಿಸಲಾಗಿದೆ.

2025ನೇ ವರ್ಷದ 11/09/25 ನೇ ದಿವಸದಂದು ಇದನ್ನು ನನ್ನ ಸಹಿಯೊಡನೆ ಮತ್ತು ನ್ಯಾಯಾಲಯದ ಮೊಹರಿನೊಡನೆ ನೀಡಲಾಗಿದೆ.

ಅರ್ಜಿದಾರರ ಪರ ವಕೀಲರು
ಹಾಸನ
ದಿನಾಂಕ: 11/9/2025

ನ್ಯಾಯಾಲಯದ ಅಪ್ಪಣೆಯ ಮೇರೆಗೆ
ಶಿರಸ್ತೇದಾರರು
ಹಾಸನ 7ನೇ ಅಧಿಕ ಸಿವಿಲ್ ಜಡ್ಜ್ (ಕಿ.ವಿ.)
ನ್ಯಾಯಾಲಯದಲ್ಲಿ



ಹಾಸನದ 7ನೇ ಅಧಿಕ ಸಿವಿಲ್ ಜಡ್ಜ್ ಮತ್ತು
ಜೆ.ಎಂ.ಎಫ್.ಸಿ. ರವರ ನ್ಯಾಯಾಲಯದಲ್ಲಿ
ಸಿ.ಮಿಸ್. 444/2025

ಅರ್ಜಿದಾರರು : ಈರೇಗೌಡ ಬಿನ್ ತಿಮ್ಮೇಗೌಡ, ಸುಮಾರು 53 ವರ್ಷ,
ಬಳ್ಳೇಕೆರೆ ಗ್ರಾಮ, ಕಟ್ಟಾಯ ಹೋಬಳಿ, ಹಾಸನ ತಾಲ್ಲೂಕು.
: : ವಿರುದ್ಧ : :
ರೆಸ್ಪಾಂಡೆಂಟರು : ತಹಸೀಲ್ದಾರ್‌ರವರು
ಜನನ ಮತ್ತು ಮರಣ ನೊಂದಣಾಧಿಕಾರಿಗಳು
ಹಾಸನ ತಾಲ್ಲೂಕು, ಹಾಸನ.

ಪತ್ರಿಕಾ ಪ್ರಕಟಣೆ

ಅರ್ಜಿದಾರರು ಹಾಸನ ತಾಲ್ಲೂಕು, ಕಟ್ಟಾಯ ಹೋಬಳಿ, ಬಳ್ಳೇಕೆರೆ ಗ್ರಾಮದಲ್ಲಿ ವಾಸವಾಗಿರುವ ಈರೇಗೌಡ ರವರ ಅಜ್ಜಿಯವರಾದ ಜವರಮ್ಮ ಕೋಂ ಲೇಟ್ ಮೊಗಣ್ಣಗೌಡ ರವರು ದಿನಾಂಕ: 01/04/1990 ರಂದು ಮರಣ ಹೊಂದಿರುತ್ತಾರೆಂದು ಅರ್ಜಿದಾರರ ಅಜ್ಜಿಯ ಮರಣ ಪ್ರಮಾಣ ಪತ್ರವು ಸಂಬಂಧಪಟ್ಟ ಕಚೇರಿಯಲ್ಲಿ ನೊಂದಣಿಯಾಗಿಲ್ಲವೆಂದು ಅಜ್ಜಿಯವರಾದ ಜವರಮ್ಮ ಕೋಂ ಲೇಟ್ ಮೊಗಣ್ಣಗೌಡ ರವರ ಮರಣ ಪ್ರಮಾಣ ಪತ್ರವು ಅತ್ಯವಶ್ಯಕವಾಗಿ ಬೇಕಾಗಿರುತ್ತದೆಂದು ಮಾನ್ಯ ನ್ಯಾಯಾಲಯದಲ್ಲಿ ಅರ್ಜಿಯನ್ನು ತಂದಿರುತ್ತಾರೆ. ಜವರಮ್ಮ ಕೋಂ ಲೇಟ್ ಮೊಗಣ್ಣಗೌಡ ರವರು ಬಳ್ಳೇಕೆರೆ ಗ್ರಾಮದವರಾಗಿದ್ದು, ಸದರಿ ಗ್ರಾಮದಲ್ಲಿ ಮರಣ ಹೊಂದಿರುತ್ತಾರೆಂದು ಅರ್ಜಿಯಲ್ಲಿ ತಿಳಿಸಿರುತ್ತಾರೆ. ಅರ್ಜಿದಾರರ ಅಜ್ಜಿಯವರಾದ ಜವರಮ್ಮ ಕೋಂ ಲೇಟ್ ಮೊಗಣ್ಣಗೌಡ ರವರ ವಾರಸುದಾರರು ಯಾರಾದರೂ ಇದ್ದಲ್ಲಿ ಅರ್ಜಿಯ ವಿರುದ್ಧ ಕಾರಣವನ್ನು ತೋರಿಸಲು ದಿನಾಂಕ: 29/10/25 ರಂದು ಪೂರ್ವಾಹ್ನ 11 ಗಂಟೆಗೆ ನೀವುಗಳು ಖುದ್ದಾಗಿ ಅಥವಾ ಸರಿಯಾಗಿ ಮಾಹಿತಿ ಪಡೆದಿರುವ ವಕೀಲರ ಮೂಲಕ ನ್ಯಾಯಾಲಯದಲ್ಲಿ ಹಾಜರಾಗಬೇಕೆಂದು ಇದಕ್ಕೆ ತಪ್ಪಿದ್ದರೆ ಸದರಿ ಅರ್ಜಿಯನ್ನು ಏಕಪಕ್ಷೀಯವಾಗಿ ವಿಚಾರಣೆ ಮಾಡಲಾಗುವುದೆಂದು ಮತ್ತು ತೀರ್ಮಾನಿಸಲಾಗುವುದೆಂದು ಈ ಮೂಲಕ ತಿಳಿಯಪಡಿಸಲಾಗಿದೆ.

2025 ನೇ ವರ್ಷದ 11/09/25 ನೇ ದಿವಸದಂದು ಇದನ್ನು ನನ್ನ ಸಹಿಯೊಡನೆ ಮತ್ತು ನ್ಯಾಯಾಲಯದ ಮೊಹರಿನೊಡನೆ ನೀಡಲಾಗಿದೆ.

ಅರ್ಜಿದಾರರ ಪರ ವಕೀಲರು
ಹಾಸನ
ದಿನಾಂಕ: 11/9/2025

ನ್ಯಾಯಾಲಯದ ಅಪ್ಪಣೆಯ ಮೇರೆಗೆ
ಶಿರಸ್ತೇದಾರರು
ಹಾಸನ 7ನೇ ಅಧಿಕ ಸಿವಿಲ್ ಜಡ್ಜ್ (ಕಿ.ವಿ.)
ನ್ಯಾಯಾಲಯದಲ್ಲಿ

## ವಿಷ್ಣುವರ್ಧನ್, ಸರೋಜಾದೇವಿಗೆ ಕರ್ನಾಟಕ ರತ್ನ



**ಬೆಂಗಳೂರು:** ಕನ್ನಡ ಚಿತ್ರರಂಗದ ಖ್ಯಾತ ಕಲಾವಿದರಾದ ಸಾಹಸ ಸಿಂಹ ಖ್ಯಾತಿಯ ವಿಷ್ಣು ವರ್ಧನ್ ಹಾಗು ಬಿ.ಸರೋಜಾದೇವಿ ಅವರಿಗೆ ಕರ್ನಾಟಕ ರತ್ನ ಪ್ರಶಸ್ತಿಯನ್ನು ಮರಣೋತ್ತರ ವಾಗಿ ನೀಡಲಾಗುವುದೆಂದು ಕಾನೂನು ಸಚಿವ ಹೆಚ್.ಕೆ.ಪಾಟೀಲ್ ಅವರು ಹೇಳಿದರು.

ಗುರುವಾರ ಸಚಿವ ಸಂಪುಟ ಸಭೆ ಬಳಿಕ ನಡೆಸಿದ ಪತ್ರಿಕಾಗೋಷ್ಠಿಯಲ್ಲಿ ಈ ವಿಷಯವನ್ನು ತಿಳಿಸಿದರು. ವಿಷ್ಣುವರ್ಧನ್ ಸ್ಮಾರಕಕ್ಕೆ ಜಮೀನು ನೀಡಬೇಕೆಂದು ಅವರ ಅಭಿಮಾನಿಗಳು ಮುಖ್ಯ ಮಂತ್ರಿಯವರಿಗೆ ಮನವಿ ಸಲ್ಲಿಸಿದ್ದರು. ಆದರೆ ಈ ಬಗ್ಗೆ ಸಭೆಯಲ್ಲಿ ಚರ್ಚೆಯಾಗಿಲ್ಲ ಎಂದು ಅವರು ಮಾಹಿತಿ ನೀಡಿದರು.

ವಿಷ್ಣುವರ್ಧನ್ ಅವರಿಗೆ ಮರಣೋತ್ತರವಾಗಿ ಕರ್ನಾಟಕ ರತ್ನ ಪ್ರಶಸ್ತಿ ನೀಡುವಂತೆ ಕನ್ನಡ ಚಲನಚಿತ್ರ ರಂಗದ ಹಿರಿಯ ನಟಿಯರಾದ ಜಯಮಾಲ, ಶ್ರುತಿ ಮತ್ತು ಮಾಳವಿಕ ಅವಿನಾಶ್ ಇತ್ತೀಚೆಗೆ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರನ್ನು ಭೇಟಿ ಮಾಡಿ ಮನವಿ ಮಾಡಿದ್ದರು. ಇದೇ ವೇಳೆ ರಾಷ್ಟ್ರಕವಿ ಕುವೆಂಪು ಅವರಿಗೆ ಭಾರತ ರತ್ನ ಪ್ರಶಸ್ತಿಯನ್ನು ಮರಣೋತ್ತರವಾಗಿ ನೀಡಲು ಕೇಂದ್ರ ಸರ್ಕಾರಕ್ಕೆ ಶಿಫಾರಸು ಮಾಡಲು ಸಭೆಯಲ್ಲಿ ತೀರ್ಮಾನಿಸಿದ್ದಾಗಿಯೂ ಹೇಳಿದರು.

# ನೇಪಾಳದಲ್ಲಿ ಮುಂದುವರಿದ ಸರ್ಕಾರ ರಚನೆ ಕಸರತ್ತು

## ಅಧ್ಯಕ್ಷ ಪೌಡೆಲ್-ಜೆನ್ ಝಿ ಮಾತುಕತೆ | ಹಲವೆಡೆ ವಿದ್ಯಾರ್ಥಿ ಸಂಘಟನೆ ಪ್ರತಿಭಟನೆ

• ಪ್ರಜೋದಯ ವರದಿ

**ಕಠ್ಮಂಡು:** ಪ್ರತಿಭಟನೆ, ಹಿಂಸಾಚಾರದಿಂದ ಅರಾಜಕತೆ ಸೃಷ್ಟಿಯಾಗಿರುವ ನೇಪಾಳದಲ್ಲಿ ಮಧ್ಯಂತರ ಸರ್ಕಾರ ರಚನೆ ಕುರಿತು ಜೆನ್ ಝಿ ತಲೆಮಾರಿನ ಮುಖಂಡರು ಅಧ್ಯಕ್ಷ ರಾಮಚಂದ್ರ ಪೌಡೆಲ್ ಹಾಗು ಸೇನಾ ಮುಖ್ಯಸ್ಥ ಅಶೋಕ್ ರಾಜ್ ಸಿಗ್ಡೆಲ್ ಅವರು ಮಾತುಕತೆ ನಡೆಸಿದ್ದಾರೆ.

ಪ್ರಧಾನಿ ಸ್ಥಾನಕ್ಕೆ ಮಾಜಿ ಮುಖ್ಯ ನ್ಯಾಯಮೂರ್ತಿ ಸುಶೀಲಾ ಕರ್ಕಿ, ಕಠ್ಮಂಡು ಮೇಯರ್ ಬಾಲೇಂದ್ರ ಶಾ ಮತ್ತು ಇನ್ನಿಬ್ಬರ ಹೆಸರು ಕೇಳಿಬಂದಿದ್ದು, ಮಧ್ಯಂತರ ಸರ್ಕಾರದ ಚುಕ್ಕಾಣಿ ಯಾರಿಗೆ ನೀಡಬೇಕು ಎಂಬುದರ ಕುರಿತು ಜೆನ್ ಝಿ ಗುಂಪು ಚರ್ಚಿಸಿದೆ.

ವಿವಿಧ ಸಾಮಾಜಿಕ ಮಾಧ್ಯಮಗಳ ನಿಷೇಧದಿಂದ ಆರಂಭವಾದ ಯುವ ಸಮುದಾಯದ ಪ್ರತಿಭಟನೆ ನಂತರ ಅಧಿಕಾರ ದುರುಪಯೋಗ ಮತ್ತು ಭ್ರಷ್ಟಾಚಾರದ ವಿರುದ್ಧ ಆಕ್ರೋಶವೂ ಸೇರಿ ಹೋರಾಟದ ಕಾವು ಹೆಚ್ಚಿತು. ಅದರ ಪರಿಣಾಮ ಹಲವರು ಪ್ರಾಣ ಕಳೆದುಕೊಂಡರು. ಹೋರಾಟಕ್ಕೆ ಮಣಿದು ಪ್ರಧಾನಿ ಕೆ.ಪಿ. ಶರ್ಮಾ ಓಲಿ ರಾಜೀನಾಮೆ ನೀಡಿದರು. ಇದೀಗ ನೂತನ ಪ್ರಧಾನಿ ಆಯ್ಕೆ ಕುರಿತ ಚರ್ಚೆಗೆ ವೇದಿಕೆ




ಸಜ್ಜಾಗಿದೆ.

ದೇಶದ ಸದ್ಯದ ಪರಿಸ್ಥಿತಿ ಮತ್ತು ಕಾನೂನು ಹಾಗು ಸುವ್ಯವಸ್ಥೆ ಕಾಪಾಡುವ ನಿಟ್ಟಿನಲ್ಲಿ ಚರ್ಚೆ ನಡೆಯಿತು. ಬುಧವಾರವೂ ಸಭೆ ನಡೆದರೂ, ಯಾವುದೇ ನಿರ್ಧಾರ ಅಂತಿಮಗೊಂಡಿಲ್ಲ. ಮಧ್ಯಂತರ ಸರ್ಕಾರದ ಮುಖ್ಯಸ್ಥರು ಯಾರಾಗಬೇಕು ಎಂಬುದರ ಕುರಿತು ಚರ್ಚೆಗಳು ನಡೆದವು ಎಂದು ಮೂಲಗಳು ತಿಳಿಸಿವೆ.

ಕರ್ಕಿ ಮತ್ತು ಶಾ ಹೊರತುಪಡಿಸಿ, ನೇಪಾಳ ಇಂಧನ ಪ್ರಾಧಿಕಾರದ ಸಿಇಒ ಕುಲ್ಮನ್ ಘಿಸಿಂಗ್ ಮತ್ತು ಮೇಯರ್ ಧರಣ್ ಹರ್ಕ ಸಂಪಂಗ್ ಅವರ ಹೆಸರು ಗಳೂ ಕೇಳಿಬಂದಿವೆ. ಮೇಯರ್ ಶಾ ಅವರು ಮಾಜಿ ಮುಖ್ಯ ನ್ಯಾಯಮೂರ್ತಿ ಕರ್ಕಿ ಅವರನ್ನು ಬೆಂಬಲಿಸಿದ್ದಾರೆ. ಆದರೆ ನೂತನ ಸಂಪುಟದ ಅಧ್ಯಕ್ಷರು ಯಾರಾಗಲಿದ್ದಾರೆಂಬುದು ಇನ್ನಷ್ಟೇ ಸ್ಪಷ್ಟವಾಗಬೇಕಿದೆ. ಇವರ ಹೆಸರಿಗೂ ಜೆನ್ ಝಿ ಸಮುದಾಯದ ಒಂದು ಗುಂಪು ಆಕ್ಷೇಪ ವ್ಯಕ್ತಪಡಿಸಿದೆ. ಪ್ರಜಾಪ್ರಭುತ್ವ ಮತ್ತು ಮಾನವ ಹಕ್ಕುಗಳ ರಕ್ಷಣೆಗೆ ಪ್ರಮುಖ ಪಕ್ಷಗಳ ವಿದ್ಯಾರ್ಥಿ ಸಂಘಟನೆಗಳು ಕಠ್ಮಂಡುವಿನ ಹಲವೆಡೆ ಪ್ರತಿಭಟನೆ ನಡೆಸಿದ್ದಾರೆ.

### ವಿಮಾನ ಸೇವೆ ಆರಂಭ

ಭಾರತೀಯ ವಿಮಾನಯಾನ ಸಂಸ್ಥೆಗಳು ಗುರುವಾರ ನೇಪಾಳ ರಾಜಧಾನಿ ಕಠ್ಮಂಡುವಿಗೆ ಸೇವೆಗಳನ್ನು ಪುನರಾರಂಭಿಸಿವೆ. ಹಿಂಸಾಚಾರದಿಂದಾಗಿ ನೇಪಾಳದಲ್ಲಿ ಸಿಲುಕಿರುವ ಭಾರತೀಯರನ್ನು ಸ್ವದೇಶಕ್ಕೆ ಕರೆತರಲು ಏರ್ ಇಂಡಿಯಾ ಮತ್ತು ಇಂಡಿಗೊ ಸಂಸ್ಥೆಗಳು ಹೆಚ್ಚುವರಿ ವಿಮಾನ ಸೇವೆ ಒದಗಿಸುತ್ತಿವೆ ಎಂದು ನಾಗರಿಕ ವಿಮಾನಯಾನ ಸಚಿವ ಕೆ. ರಾಮಮೋಹನ್ ನಾಯ್ಡು ತಿಳಿಸಿದ್ದಾರೆ. ಪ್ರಯಾಣಿಕರಿಂದ ಹೆಚ್ಚುವರಿ ದರ ಪಡೆಯದಂತೆ ವಿಮಾನಯಾನ ಸಂಸ್ಥೆಗಳಿಗೆ ನಿರ್ದೇಶನ ನೀಡಲಾಗಿದೆ. ಕಠ್ಮಂಡು ಸೇರಿ ಹಲವೆಡೆ ಪ್ರತಿಭಟನೆಗಳು ತೀವ್ರಗೊಂಡಿದ್ದ ಹಿನ್ನಲೆಯಲ್ಲಿ ತ್ರಿಭುವನ್ ಅಂತರರಾಷ್ಟ್ರೀಯ ವಿಮಾನವನ್ನು ಬಂದ್ ಮಾಡಲಾಗಿತ್ತು. ಸದ್ಯ ಪರಿಸ್ಥಿತಿ ಹತೋಟಿಯಲ್ಲಿದ್ದು, ವಿಮಾನ ನಿಲ್ದಾಣವು ಮತ್ತೆ ಕಾರ್ಯಾರಂಭಿಸಿದೆ.

ನೇಪಾಳದಲ್ಲಿ ಸಿಲುಕಿಕೊಂಡಿರುವ ಪ್ರಯಾಣಿಕರಿಗೆ ಸಹಾಯ ಮಾಡುವ ನಿಟ್ಟಿನಲ್ಲಿ ಇಂದು ಮತ್ತು ನಾಳೆ ದೆಹಲಿಯಿಂದ ಕಠ್ಮಂಡುವಿಗೆ ತೆರಳಲು ಮತ್ತು ಹಿಂತಿರುಗಲು ವಿಶೇಷ ವಿಮಾನಗಳು ಕಾರ್ಯ ನಿರ್ವಹಿಸಲಿವೆ ಎಂದು ಏರ್ ಇಂಡಿಯಾ ಎಕ್ಸ್‌ನಲ್ಲಿ ಪೋಸ್ಟ್ ಮಾಡಿದೆ.

ನವದೆಹಲಿ ಮತ್ತು ಕಠ್ಮಂಡು ನಡುವೆ ಪ್ರತಿದಿನ 12 ವಿಮಾನಗಳನ್ನು ನಿರ್ವಹಿಸುವ ಏರ್ ಇಂಡಿಯಾ, ಮಂಗಳವಾರ ನಾಲ್ಕು ವಿಮಾನಗಳ ಹಾರಾಟವನ್ನು ರದ್ದುಗೊಳಿಸಿತ್ತು. ಜತೆಗೆ, ಏರ್ ಇಂಡಿಯಾ ಎಕ್ಸ್‌ಪ್ರೆಸ್, ಇಂಡಿಗೊ, ಸ್ಪೈಸ್‌ಜೆಟ್ ಸೇರಿ ನೇಪಾಳ ಏರ್‌ಲೈನ್ಸ್ ಸಂಸ್ಥೆಗಳು ಕೂಡ ವಿಮಾನ ಹಾರಾಟವನ್ನು ರದ್ದುಗೊಳಿಸಿದ್ದವು.

ಘರ್ಷಣೆಯನ್ನು ಹತ್ತಿಕ್ಕುವ ಸಲುವಾಗಿ ನೇಪಾಳ ಸೇನೆಯು ರಾಷ್ಟ್ರದಾದ್ಯಂತ ನಿರ್ಬಂಧ ಆದೇಶ ಮತ್ತು ನಿಷೇಧಾಜ್ಞೆಯನ್ನು ಜಾರಿಗೊಳಿಸಿದೆ. ಕೆ.ಪಿ. ಶರ್ಮಾ ಓಲಿ ಅವರು ಪ್ರಧಾನಿ ಸ್ಥಾನಕ್ಕೆ ರಾಜೀನಾಮೆ ನೀಡಿದ ಬೆನ್ನಲ್ಲೇ, ಸೇನೆಯು ನಿರ್ಬಂಧಗಳನ್ನು ವಿಧಿಸುವ ಮೂಲಕ ದೇಶವನ್ನು ನಿಯಂತ್ರಣಕ್ಕೆ ತೆಗೆದುಕೊಂಡಿದೆ. ಈ ನಡುವೆ, ದೇಶದಲ್ಲಿ ಮಧ್ಯಂತರ ಸರ್ಕಾರ ರಚಿಸುವ ಕುರಿತ ಪ್ರಯತ್ನಗಳಿಗೂ ಚಾಲನೆ ದೊರೆತಿದೆ.

## ಭ್ರಷ್ಟರ ಕೂಪವಾದ ಜಿಲ್ಲಾ ಪಂಚಾಯಿತಿ: ಸಿಇಒಗೆ ಪಾಲೆಷ್ಟು?

» ಮೊದಲನೇ ಪುಟದಿಂದ

ಜನಸಾಮಾನ್ಯರು ಜೀವನ ನಿರ್ವಹಣೆಗಾಗಿ ವಸತಿ, ದನ-ಕುರಿ ಸಾಕಾಣಿಕೆಗೆ ಕೊಟ್ಟಿಗೆ ನಿರ್ಮಾಣ, ಬಾವಿ, ಅಡಿಕೆ ತೋಟ ನಿರ್ಮಾಣಕ್ಕೆ ಸಹಾಯ ಧನ ಸೇರಿ ಸರ್ಕಾರದಿಂದ ಯಾವುದೇ ಸೌಲಭ್ಯ ಪಡೆಯಬೇಕಾದರೂ ತಾಲ್ಲೂಕು ಪಂಚಾಯಿತಿ ಅಧಿಕಾರಿಗಳು, ಪಿಡಿಒಗಳಿಗೆ ಲಂಚ ನೀಡಲೇಬೇಕಾದ ಪರಿಸ್ಥಿತಿ ನಿರ್ಮಾಣವಾಗಿರುವುದರಿಂದ ಅಧಿಕಾರಿಗಳ ವಿರುದ್ಧ ಜನರು ಆಕ್ರೋಶ ವ್ಯಕ್ತಪಡಿಸಿ ಹಿಡಿಶಾಪ ಹಾಕುತ್ತಿದ್ದಾರೆ.

**ಅಕ್ರಮದ ಬಗ್ಗೆ ಸರ್ಕಾರ, ಸಚಿವರಿಗೆ ಪತ್ರ:** ಜಿಲ್ಲೆಯಲ್ಲಿ ವಸತಿ ಯೋಜನೆಯಡಿ ನಡೆದಿರುವ ಅಕ್ರಮದಲ್ಲಿ ಜಿಲ್ಲಾ ಪಂಚಾಯಿತಿ ಮುಖ್ಯ ಕಾರ್ಯ ನಿರ್ವಹಣಾಧಿಕಾರಿ ಭಾಗಿಯಾಗಿದ್ದಾರೆ. ಅವರ ಗಮನಕ್ಕೆ ಬಾರದೆ ದೊಡ್ಡ ಮಟ್ಟದ ಹಗರಣ ನಡೆಯಲು ಸಾಧ್ಯ ವಿಲ್ಲ. ಕೂಡಲೇ ಸಿಇಒ ಸೇರಿ ಸಂಬಂಧಪಟ್ಟ ಅಧಿಕಾರಿಗಳನ್ನು ಸೇವೆಯಿಂದ ಅಮಾನತುಗೊಳಿಸಿ, ಬಂಧನಕ್ಕೆ ಒಳಪಡಿಸಿ ತನಿಖೆ ನಡೆಸಬೇಕೆಂದು ಬಿಜೆಪಿ ಶಾಸಕರು ಒತ್ತಾಯಿಸಿ ಸರ್ಕಾ ರಕ್ಕೆ ಪತ್ರ ಬರೆಯುವುದು ಮಾತ್ರವ ಲ್ಲದೇ, ಜಿಲ್ಲಾ ಉಸ್ತುವಾರಿ ಸಚಿವ ಕೃಷ್ಣಬೈರೇ ಗೌಡ, ವಸತಿ ಸಚಿವ ಜಮೀರ್ ಅಹಮದ್ ಖಾನ್ ಅವರಿಗೆ ದೂರು ನೀಡಿದ್ದಾರೆ.

ಬಿಜೆಪಿಯಿಂದ ಜಿಲ್ಲಾ ಪಂಚಾಯಿತಿ ಕಚೇರಿ ಎದುರು ಪ್ರತಿಭಟನೆ ನಡೆಸಿ ಆಕ್ರೋಶ ವ್ಯಕ್ತ ಪಡಿಸಿದ್ದಾರೆ. ಜೆಡಿಎಸ್, ಎಎಪಿ ಮುಖಂಡರು ಕೂಡ ಜಿಲ್ಲಾ ಪಂಚಾಯಿತಿಯಲ್ಲಿ ನಡೆ ಯುತ್ತಿರುವ ಅಕ್ರಮಗಳ ಬಗ್ಗೆ ಧ್ವನಿ ಎತ್ತಿ, ಕೂಡಲೇ ಸರ್ಕಾರ ಭ್ರಷ್ಟ ಅಧಿ ಕಾರಿಗಳ ಮೇಲೆ ಕ್ರಮ ಕೈಗೊಳ್ಳದಿದ್ದರೆ ಬೀದಿಗಿಳಿದು ಹೋರಾಟ ನಡೆಸುವುದಾಗಿ ಎಚ್ಚರಿಕೆ ನೀಡಿದ್ದಾರೆ.

ಎಎಪಿ ಮುಖಂಡರು ಗುರುವಾರ ಒಂದು ಹೆಜ್ಜೆ ಮುಂದೆ ಹೋಗಿ, ಜಿಲ್ಲಾ ಪಂಚಾಯಿತಿ ಮುಖ್ಯ ಕಾರ್ಯ ನಿರ್ವಹಣಾಧಿಕಾರಿ ಬಿ.ಆರ್. ಪೂರ್ಣಿಮಾ ಸೇರಿ ತಾಲ್ಲೂಕು ಪಂಚಾಯಿತಿ ಕಾರ್ಯ ನಿರ್ವಹಕ ಅಧಿಕಾರಿಗಳ ವಿರುದ್ಧ ಲೋಕಾಯುಕ್ತಕ್ಕೆ ದೂರು ನೀಡಿ, ತನಿಖೆ ನಡೆಸುವಂತೆ ಆಗ್ರಹಿಸಿದ್ದಾರೆ.

**ಭ್ರಷ್ಟರ ವಿರುದ್ಧ ಲೋಕಾ ಅಸ್ತ್ರ**

ಜಿಲ್ಲಾ ಪಂಚಾಯಿತಿ ಅಧಿಕಾರಿಗಳ ಲಂಚ ಬಾಕತನ ಸಹಿಸಿಕೊಳ್ಳಲಾಗದೆ ಗುತ್ತಿಗೆದಾರರು, ಲೋಕಾಯುಕ್ತ ಅಸ್ತ್ರ ಪ್ರಯೋಗಿಸಲು ಮುಂದಾಗಿದ್ದಾರೆ. ಬುಧವಾರವಷ್ಟೇ ಬೇಲೂರು ತಾಲ್ಲೂಕಿನ ಗುತ್ತಿಗೆದಾರ ಶಶಿಧರ್ ಎಂಬುವವರು ಕಾಮಗಾರಿಗೆ ಹಣ ಬಿಡುಗಡೆ ಮಾಡಲು ಲಂಚ ಕೇಳುತ್ತಿದ್ದಾರೆಂದು ನೀಡಿದ ದೂರಿನ ಆಧಾರದ ಮೇಲೆ, ಲೋಕಾಯುಕ್ತ ಅಧಿಕಾರಿಗಳು ಪಂಚಾಯತ್‌ರಾಜ್ ಇಂಜಿನೀಯರ್ ಕಚೇರಿ ಮೇಲೆ ದಾಳಿ ನಡೆಸಿ ಲಂಚಕ್ಕೆ ಬೇಡಿಕೆ ಇಟ್ಟಿದ್ದ ಕಚೇರಿ ಅಧೀಕ್ಷಕ ರಾಮಚಂದ್ರ ಹಾಗು ಪ್ರಥಮ ದರ್ಜೆ ಸಹಾಯಕಿ ಲತಾ ಎಂಬುವವರನ್ನು ಬಲೆಗೆ ಬೀಳಿಸಿದ್ದಾರೆ.

## ಬೂವನಹಳ್ಳಿ ಮಾದರಿ ಗ್ರಾಮವಾಗಿಸುವ ಭರವಸೆ

» ಮೊದಲನೇ ಪುಟದಿಂದ

ಮುಗಿಸಿ ಪಾಲಿಕೆಗೆ ಹಸ್ತಾಂತರಿಸಿ, ಕಾಂಪೌಂಡ್ ಇಲ್ಲವೇ ತಂತಿ ಬೇಲಿ ಹಾಕಬೇಕೆಂದು ಅಧಿಕಾರಿಗಳಿಗೆ ಸಲಹೆ ನೀಡಿದರು.

ಬೂವನಹಳ್ಳಿ ಕೆರೆ ಅಭಿವೃದ್ಧಿ ಕಾಮಗಾರಿ ಪರಿಶೀಲಿಸಿ, ನಿಗದಿತ ಗಡುವಿನೊಳಗೆ ಕೆಲಸ ಮುಗಿಸುವಂತೆ ಗುತ್ತಿಗೆದಾರರು ಹಾಗು ಅಧಿಕಾರಿಗಳಿಗೆ ನಿರ್ದೇಶನ ನೀಡಿದರು.

ಕೆರೆಗಳು ಗ್ರಾಮೀಣ ಜನರ ಜೀವನಾಧಾರ. ಅವುಗಳ ಸಂರಕ್ಷಣೆ ಹಾಗು ಅಭಿವೃದ್ಧಿ ನಮ್ಮ ಜವಾಬ್ದಾರಿ. ಕೆರೆ ತೊಡಕು ತೆರವು, ಬಂಡೆ ಕಟ್ಟು ಬಲ, ನೀರಿನ ಹರಿವು ಸುಗಮಗೊಳಿಸುವುದು ಹಾಗು ಸ್ವಚ್ಛತೆಗೆ ಆದ್ಯತೆ ನೀಡಬೇಕೆಂದು ಹೇಳಿದರು.

ಮಹಾನಗರ ಪಾಲಿಕೆ ಆಯುಕ್ತ ಆರ್. ಕೃಷ್ಣಮೂರ್ತಿ, ಜಿಲ್ಲಾ.ಪಂ. ಮಾಜಿ ಉಪಾಧ್ಯಕ್ಷ ಸ್ವಾಮಿಗೌಡ, ತಾಲ್ಲೂಕು ಪಂಚಾಯಿತಿ ಮಾಜಿ ಸದಸ್ಯ ಜಯರಾಂ, ಕೃಷಿ ಪತ್ತಿನ ಸಹಕಾರ ಸಂಘದ ಅಧ್ಯಕ್ಷ ಬಿ.ಆರ್.ಬೊಮ್ಮೇಗೌಡ, ಮುಖಂಡರಾದ ತುಳಸಿರಾಂ, ಮಲ್ಲೇಶ್, ಕರಿಯಯ್ಯ, ಲಕ್ಷ್ಮಣ್, ಸಂಕೇನಹಳ್ಳಿ ವೇಣು, ಸೋಮೇಶ್ ಇದ್ದರು.

# ಸಿಇಓ, ಇಓ ವಿರುದ್ಧ ಲೋಕಾಯುಕ್ತಕ್ಕೆ ದೂರು

## ವಸತಿ ಅಕ್ರಮ: ತಪ್ಪಿತಸ್ಥರ ವಿರುದ್ಧ ಕ್ರಮಕ್ಕೆ ಅಗಿಲೆ ಯೋಗೇಶ್ ಆಗ್ರಹ

• ಪ್ರಜೋದಯ ವರದಿ

**ಹಾಸನ:** ಪ್ರಧಾನ ಮಂತ್ರಿ ಆವಾಜ್ ಯೋಜನೆಯಡಿ ಜಿಲ್ಲೆಯಲ್ಲಿ ನಡೆದಿರುವ ಅಕ್ರಮದ ಬಗ್ಗೆ ಜಿಲ್ಲಾ ಪಂಚಾಯಿತಿ ಮುಖ್ಯಕಾರ್ಯ ನಿರ್ವಹಣಾಧಿಕಾರಿ ಸೇರಿ ಒಟ್ಟು ಏಳು ಜನರ ವಿರುದ್ಧ ಲೋಕಾಯುಕ್ತಕ್ಕೆ ದೂರು ನೀಡುತ್ತೇನೆಂದು ಎಎಪಿ ರಾಜ್ಯ ಉಪಾಧ್ಯಕ್ಷ ಅಗಿಲೆ ಯೋಗೇಶ್ ಅವರು ತಿಳಿಸಿದರು.

ಗುರುವಾರ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಪಿಎಂಎವೈ ಅವ್ಯವಹಾರದಲ್ಲಿ ಭಾಗಿಯಾಗಿರುವ ಜಿಲ್ಲಾ ಪಂಚಾಯಿತಿ ಮುಖ್ಯ ಲೆಕ್ಕಾಧಿಕಾರಿ ತಫಜುಲ್ ಹುಸೇನ್, ಸಕಲೇಶಪುರ ತಾಲ್ಲೂಕು ಪಂಚಾಯಿತಿ ಕಾರ್ಯ ನಿರ್ವಹಣಾಧಿಕಾರಿ ಜಿ.ಡಿ.ಗಂಗಾಧರನ್, ಅರಸೀಕೆರೆ ತಾಲ್ಲೂಕು ಪಂಚಾಯಿತಿ ಇಒ ಸತೀಶ್, ವಸತಿ ಜಿಲ್ಲಾ ನೋಡಲ್ ಅಧಿಕಾರಿ ರಾಜೇಶ್, ತಾಲ್ಲೂಕು ನೋಡಲ್ ಅಧಿಕಾರಿಗಳಾದ ಚಿದಾನಂದ, ಗುರುಮೂರ್ತಿ, ಪಾಲಾಕ್ಷ ಅವರ ವಿರುದ್ಧ ದೂರು ನೀಡುವುದಾಗಿ ಹೇಳಿದರು.

ಪಿಎಂಎವೈ ಯೋಜನೆ ಕೇಂದ್ರ ಶೇ.60, ರಾಜ್ಯದ ಶೇ.40 ಅನುದಾನದಲ್ಲಿ ಮನೆ ಇಲ್ಲದವರಿಗೆ ಸೂರು ನಿರ್ಮಿಸಿಕೊಡುವುದಾಗಿದೆ. ಪಿಡಿಒಗಳು ಮನೆಯಿಲ್ಲದವರನ್ನು ಗುರುತಿಸಿ ಪಟ್ಟಿ ಮಾಡುತ್ತಾರೆ. ತಾಲ್ಲೂಕು ಪಂಚಾಯಿತಿ ಕಾರ್ಯ ನಿರ್ವಹಣಾಧಿಕಾರಿ ಪರಿಶೀಲಿಸಿ, ಜಿಲ್ಲಾ ಪಂಚಾಯಿತಿ ಯೋಜನಾಧಿಕಾರಿಗೆ ಕಳುಹಿಸು ತ್ತಾರೆ. ಮುಖ್ಯ ಲೆಕ್ಕಾಧಿಕಾರಿ ಅರ್ಹರಿಗೆ ಹಣ ಬಿಡುಗಡೆ ಮಾಡುತ್ತಾರೆ. ಹೊರ ಗುತ್ತಿಗೆ ನೌಕರ ನೊಂದಿಗೆ ವಿವಿಧ ಅಧಿಕಾರಿಗಳು ಸೇರಿ ಜಿಲ್ಲೆ 4 ಕೋಟಿ ಗೂ ಹೆಚ್ಚಿನ ಭ್ರಷ್ಟಚಾರ ನಡೆಸಲಾಗಿದೆ. ಜಿಲ್ಲೆ ಮಾತ್ರವಲ್ಲದೆ ರಾಜ್ಯಾದ್ಯಂತ ನೂರಾರು ಕೋಟಿ ಅವ್ಯವಹಾರ ನಡೆದಿದೆ ಎಂದು ಆರೋ ಪಿಸಿದರು.



ಈ ಹಗರಣದಲ್ಲಿ ಪಿಡಿಒಗಳನ್ನು ಮಾತ್ರ ಅಮಾನತು ಮಾಡಿದರೆ ಸಾಲದು ಪಟ್ಟಿ ಪರಿಶೀಲಿಸುವ, ಹಣ ಬಿಡುಗಡೆ ಮಾಡುವ ಅಧಿಕಾರಿಗಳನ್ನೂ ದಂಡಿಸಬೇಕು. ಫಲಾನುಭವಿಗಳಲ್ಲದವರ ಬ್ಯಾಂಕ್ ಖಾತೆಗೆ ಹಣ ಹಾಕಿ ನಂತರ ಬೆದರಿಸಿ ವಾಪಾಸ್ ಪಡೆದುಕೊಂಡಿದ್ದಾರೆ. ಯಾರೆಲ್ಲಾ ಭಾಗಿಯಾಗಿದ್ದಾರೋ ಅವರಿಗೆ ತಕ್ಕ ಶಿಕ್ಷೆಯಾಗಬೇಕು. ಜಿಲ್ಲಾ ಪಂಚಾಯಿತಿ ಮುಖ್ಯ ಕಾರ್ಯ ನಿರ್ವಹಣಾಧಿಕಾರಿ ಗಮನಕ್ಕೆ ಬಾರದೆ ಯಾವುದು ನಡೆಯುವುದಿಲ್ಲ. ಮೊದಲು ಅವರನ್ನು ತನಿಖೆಗೆ ಒಳಪಡಿಸಬೇಕೆಂದು ಒತ್ತಾಯಿಸಿದರು.

ಅಧಿಕಾರಿಗಳ ಮೇಲೆ ಕ್ರಮ ಕೈಗೊಳ್ಳುವುದನ್ನು ಬಿಟ್ಟು ಪಂಚಾಯಿತಿ ಅಭಿವೃದ್ಧಿ ಅಧಿಕಾರಿ ಗಳನ್ನು ಅಮಾನತುಗೊಳಿಸಲಾಗುತ್ತಿದೆ. ಪಿಡಿಒ ಗಳು ಈ ಹಗರಣದಲ್ಲಿ ನಮ್ಮ ಪಾತ್ರವಿಲ್ಲ ಎಂದು ಹೇಳುತ್ತಿದ್ದಾರೆ. ಆದ್ದರಿಂದ ಜಿಲ್ಲಾಧಿಕಾರಿ 3 ದಿನಗಳ ಒಳಗಾಗಿ ತಪ್ಪಿತಸ್ಥ ಅಧಿ ಕಾರಿಗಳ ವಿರುದ್ಧ ಕ್ರಮ ಕೈಗೊಳ್ಳದಿದ್ದರೆ ಜಿಲ್ಲಾಧಿಕಾರಿ ಕಚೇರಿ ಎದುರು ಪ್ರತಿಭಟನೆ ನಡೆಸಲಾಗುವುದು. ಆಗಲೂ ಯಾವುದೇ ಕ್ರಮವಾಗದಿದ್ದರೆ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್‌ರಾಜ್ ಸಚಿವರ ಮನೆ ಮುಂದೆ ಪ್ರತಿಭಟನೆ ನಡೆಸುವುದಾಗಿ ಎಚ್ಚರಿಸಿದರು.

ಸುದ್ದಿಗೋಷ್ಠಿ ನಂತರ ಜಿಲ್ಲಾ ಪಂಚಾಯಿತಿ ಮುಖ್ಯಲೆಕ್ಕಾಧಿಕಾರಿ, ಸಕಲೇಶಪುರ, ಅರಸೀಕೆರೆ ತಾಲ್ಲೂಕು ಪಂಚಾಯಿತಿ ಕಾರ್ಯನಿರ್ವಹಣಾಧಿಕಾರಿ, ವಸತಿ ಜಿಲ್ಲಾ ಮತ್ತು ಮೂವರು ತಾಲ್ಲೂಕು ನೋಡಲ್ ಅಧಿಕಾರಿಗಳ ವಿರುದ್ಧ ಲೋಕಾಯುಕ್ತಕ್ಕೆ ದೂರು ಸಲ್ಲಿಸಿದರು. ಶುಕ್ರವಾರ ಜಿಲ್ಲಾ ಪಂಚಾಯಿತಿ ಸಿಇಓ ವಿರುದ್ಧ ದೂರು ನೀಡುವುದಾಗಿ ತಿಳಿಸಿದರು. ಎಎಪಿ ಜಿಲ್ಲಾಧ್ಯಕ್ಷ ತೇಜೂರು ಆನಂದ್, ತಾಲ್ಲೂಕು ಅಧ್ಯಕ್ಷ ಮಂಜುನಾಥ್ ಇದ್ದರು.

## ಅರಣ್ಯ ಇಲಾಖೆ ಸಿಬ್ಬಂದಿ ಕರ್ತವ್ಯಕ್ಕೆ ಬೆಲೆ ಕಟ್ಟಲು ಸಾಧ್ಯವಿಲ್ಲ

» ಮೊದಲನೇ ಪುಟದಿಂದ

ಗ್ರಾಮದಲ್ಲಿಮಹಾರಾಜ ಅಭಯ್ ಸಿಂಗ್ ಅವರ ಆದೇಶದಂತೆ ಖೇಜ್ರಿ ಮರಗಳನ್ನು ಕಡಿಯಲು ಮುಂದಾದಾಗ ಬಿಷ್ಣೋಯ್ ಸಮುದಾಯದ 363 ಜನರು ಮರಗಳನ್ನು ರಕ್ಷಿಸಲು ತಮ್ಮ ಪ್ರಾಣ ತ್ಯಾಗ ಮಾಡಿದರು. ಅವರ ದಿನವನ್ನು ಕೇಂದ್ರ ಸರ್ಕಾರ ಹುತಾತ್ಮರ ದಿನವಾಗಿ ಘೋಷಿಸಿದೆ ಎಂದರು.

ಅರಣ್ಯ ನಾಶದಿಂದ ಭವಿಷ್ಯದ ಪೀಳಿಗೆಗೆ ನಾವೇ ತೊಂದರೆ ಉಂಟು ಮಾಡುತ್ತಿದ್ದೇವೆ. ಭಾರತದಲ್ಲಿ ಕಾನೂನು ಗಟ್ಟಿಯಾಗಿರುವುದರಿಂದ ಇಷ್ಟು ಪ್ರಮಾಣದಲ್ಲಿ ಅರಣ್ಯ ಉಳಿಯಲು ಕಾರಣವಾಗಿದೆಯೆಂದು ಅಭಿಪ್ರಾಯಪಟ್ಟರು.

ಗಾಳಿಯಲ್ಲಿ ಮೂರು ಸುತ್ತು ಗುಂಡು ಹಾರಿಸಿ ಮಡಿದ ಸಿಬ್ಬಂದಿಗೆ ಗೌರವ ಸೂಚಿಸಲಾಯಿತು. ಕಾರ್ಯಾಚರಣೆ ವೇಳೆ ಮೃತಪಟ್ಟ ಸಿಬ್ಬಂದಿ ಕುರಿತು ಸಹೋದ್ಯೋಗಿಗಳುಅನುಭವ ಹಂಚಿಕೊಂಡರು. ಜಿಲ್ಲಾ ಪಂಚಾ ಯಿತಿ ಮುಖ್ಯ ಕಾರ್ಯನಿರ್ವಹಣಾಧಿಕಾರಿ ಬಿ.ಆರ್.ಪೂರ್ಣಿಮಾ, ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಮೊಹಮ್ಮದ್ ಸುಜಿತಾ, ಡಿಸಿಎಫ್ ಸೌರಭ್ ಕುಮಾರ್, ಅಧಿಕಾರಿಗಳಾದ ಕಾವ್ಯಶ್ರಿ, ಶಾಂತಕುಮಾರ್ ಇತರರಿದ್ದರು.

## ಚಿಕಿತ್ಸೆ ಫಲಿಸದೆ ಯುವಕ ಸಾವು

**ಹೊಳೆನರಸೀಪುರ:** ಗೂಡ್ಸ್ ವಾಹನ ಡಿಕ್ಕಿಯಾಗಿ ಗಂಭೀರ ಗಾಯಗೊಂಡಿದ್ದ ಯುವಕ ಚಿಕಿತ್ಸೆ ಫಲಿಸದೆ ಮೃತಪಟ್ಟಿರುವ ಘಟನೆ ತಾಲ್ಲೂಕಿನ ಉಲಿವಾಲ ಗ್ರಾಮದಲ್ಲಿ ನಡೆದಿದೆ. ಗ್ರಾಮದ ಗಣೇಶ (28) ಮೃತರು. ಸೆ.1 ರಂದು ಕಾರ್ಯನಿಮಿತ್ತ ಹೇಮಾವತಿ ಸಕ್ಕರೆ ಕಾರ್ಖಾನೆಗೆ ಹೋಗುತ್ತಿದ್ದಾಗ ಗನ್ನಿಕಡದ ಹಳೆಯ ಸೇತುವೆ ಮೇಲೆ ಎದುರುಗಡೆಯಿಂದ ವೇಗವಾಗಿ ಬಂದ ಗೂಡ್ಸ್ ವಾಹನ ಡಿಕ್ಕಿಯಾಗಿದೆ. ಅಪಘಾತದಲ್ಲಿ ಗಂಭೀರ ಗಾಯಗೊಂಡಿದ್ದ ಗಣೇಶ್‌ನನ್ನು ಬೆಂಗಳೂರಿನ ವಿಕ್ಟೋರಿಯಾ ಆಸ್ಪತ್ರೆಗೆ ದಾಖಲಿಸಲಾಗಿತ್ತಾದರೂ ಚಿಕಿತ್ಸೆ ಫಲಿಸದೆ ಬುಧವಾರ ಮೃತಪಟ್ಟಿದ್ದಾರೆ. ಗ್ರಾಮಾಂತರ ಠಾಣೆಯಲ್ಲಿ ಪ್ರಕರಣ ದಾಖಲಾಗಿದೆ.

## ಯೂಟ್ಯೂಬರ್ ಸುಮಂತ್ ವಿರುದ್ಧ ಮಾನನಷ್ಟ ಮೊಕದ್ದಮೆ: ಅಭಿಷೇಕ್

• ಪ್ರಜೋದಯ ವರದಿ

**ಚನ್ನರಾಯಪಟ್ಟಣ:** ಧರ್ಮಸ್ಥಳ ವಿರುದ್ಧ ಅಪಪ್ರಚಾರ ಮಾಡಲು ನಾನು ಯಾರಿಂದಲೂ ಹಣ ಪಡೆದಿಲ್ಲ, ಪ್ರಕರಣದಲ್ಲಿ ನನ್ನನ್ನು ಸಿಲುಕಿಸಲು ಸುಳ್ಳು ಹೇಳುತ್ತಿರುವವರ ವಿರುದ್ಧ ಮಾನ ನಷ್ಟ ಮೊಕದ್ದಮೆ ದಾಖಲಿಸುತ್ತೇನೆಂದು ಯೂಟ್ಯೂಬರ್ ಅಭಿಷೇಕ್ ತಿಳಿಸಿದ್ದಾರೆ.

ಗುರುವಾರ ಪಟ್ಟಣದಲ್ಲಿ ಸುದ್ದಿಗಾರರೊಂದಿಗೆ ಮಾತನಾಡಿ, ಮಂಡ್ಯದ ಸುಮಂತ್ ನನ್ನ ವಿರುದ್ಧ ಇಲ್ಲಸಲ್ಲದ ಆರೋಪ ಮಾಡಿ ಹೆಸರಿಗೆ ಮಸಿ ಬಳಿಯುತ್ತಿದ್ದಾನೆ. ಆತನ ವಿರುದ್ಧ ಮಾನ ನಷ್ಟ ಮೊಕದ್ದಮೆ ದಾಖಲಿಸಲು ಪೊಲೀಸ್ ಠಾಣೆಗೆ ಬಂದಿದ್ದೆ. ಪೊಲೀಸರು ನ್ಯಾಯಾಲಯದಲ್ಲಿ ದಾವೆ ಹೂಡಲು ಸೂಚಿಸಿದ್ದಾರೆ. ನನ್ನ ವಿರುದ್ಧ ಅಪಪ್ರಚಾರ ಮಾಡಿದವರ ವಿರುದ್ಧ ಕಾನೂನು ಹೋರಾಟ ಮುಂದುವರೆಸುತ್ತೇನೆಂದರು.

ನಾನು ಧರ್ಮಸ್ಥಳ ವಿರುದ್ಧ ವಿಡಿಯೋ ಮಾಡಲು ಹಣ ಪಡೆದಿದ್ದೇನೆ. ಆಡಿಯೋ ಮಾಡಲು



ಒತ್ತಾಯಿಸಿದ್ದೇನೆ, ಮತ್ತೊಬ್ಬ ಯೂಟ್ಯೂಬರ್ ಚಂದನ್‌ಗೌಡ ಮೂಲಕ ವಿಡಿಯೋ ಮಾಡಿ ಸಲು ಯತ್ನಿಸಿದ್ದೇನೆ. ನನ್ನ ಕ್ಯಾಮರಾವನ್ನು ಧರ್ಮಸ್ಥಳ ವಿರೋಧಿ ವ್ಯಕ್ತಿಗಳಿಂದ ಕೊಡುಗೆಯಾಗಿ ಪಡೆದಿದ್ದೇನೆಂದು ನಿರಾಧಾರ ಆರೋಪಗಳನ್ನು ಸುಮಂತ್ ಮಾಡಿದ್ದಾನೆಂದರು.

ಕಳೆದ ಮಾರ್ಚ್ ತಿಂಗಳಿನಿಂದ ಧರ್ಮಸ್ಥಳದಲ್ಲಿ ನಡೆದ ಘಟನೆಗಳ ಬಗ್ಗೆ ಮಾತ್ರ ವಿಡಿಯೋ ಮಾಡಿ ಯೂಟ್ಯೂಬ್‌ಗೆ ಅಪ್‌ಲೋಡ್ ಮಾಡಿದ್ದೆ. ಎಸ್‌ಐಟಿ ತನಿಖೆಗೆ ಹಾಜರಾಗಿ ಎಲ್ಲಾ ಮಾಹಿತಿ ನೀಡಿದ್ದೇನೆ. ಕ್ಯಾಮರಾ, ಮೊಬೈಲ್ ಸೇರಿ ಇತರೆ ಉಪಕರಣಗಳನ್ನು ಅಧಿಕಾರಿಗಳ ವಶಕ್ಕೆ ನೀಡಿದ್ದೇನೆ. ಮತ್ತೆ ವಿಚಾರಣೆಗೆ ಕರೆದರೆ ಹೋಗುತ್ತೇನೆ. ತನಿಖೆಯಿಂದಲೇ ಸತ್ಯ ಬಹಿರಂಗವಾಗಲಿದೆಯೆಂದು ವಿಶ್ವಾಸ ವ್ಯಕ್ತಪಡಿಸಿದರು.

## 3 ಲಕ್ಷ ರೂ. ಲಾಭದಲ್ಲಿ ಬಾಳ್ಳುಪೇಟೆ ಹಾಲು ಉತ್ಪಾದಕರ ಸಂಘ

• ಪ್ರಜೋದಯ ವರದಿ

**ಸಕಲೇಶಪುರ:** ತಾಲ್ಲೂಕಿನ ಬಾಳ್ಳುಪೇಟೆ ಹಾಲು ಉತ್ಪಾದಕರ ಸಹಕಾರ ಸಂಘ ಈ ವರ್ಷ 3,00,302 ರೂ. ಲಾಭ ಗಳಿಸಿದೆ ಎಂದು ಸಂಘದ ಅಧ್ಯಕ್ಷ ಬಿ.ಬಿ.ಲೋಕೇಶ್ ಅವರು ತಿಳಿಸಿದರು.

ಗುರುವಾರ ನಡೆದ ಸಂಘದ ವಾರ್ಷಿಕ ಸಭೆಯ ಅಧ್ಯಕ್ಷತೆ ವಹಿಸಿ ಮಾತನಾಡಿ, ಹೈನುಗಾರರು ಸಂಘಕ್ಕೆ ಗುಣಮಟ್ಟದ ಹಾಲು ನೀಡುವ ಮೂಲಕ ಆರ್ಥಿಕವಾಗಿ ಸಬಲರಾಗಬೇಕು. ಹಾಲು ಒಕ್ಕೂಟದ ಸೌಲಭ್ಯಗಳ ಸದುಪಯೋಗ ಪಡೆಯಬೇಕು. 1,23,494 ರೂ. ಲಾಭಾಂಶ ಇದ್ದು ಸಂಘದ ಅಭಿವೃದ್ಧಿ ಕೆಲಸಗಳ ಬಳಕೆಗೆ ಸದಸ್ಯರ ಒಪ್ಪಿಗೆ ಪಡೆಯಲಾಗಿದೆ. ಸಂಘದ ಕಟ್ಟಡ ಮೇಲ್ದರ್ಜೆಗೇರಿಸಲು ಕ್ರಮ ಕೈಗೊಳ್ಳಲಾಗುವುದೆಂದರು.

ಜಿಲ್ಲಾ ಹಾಲು ಒಕ್ಕೂಟದ ನಿರ್ದೇಶಕ ಪಿ.ಎಲ್.ನಿಂಗರಾಜು ಅವರು ಮಾತನಾಡಿ, ಬಾಳ್ಳುಪೇಟೆ ಉತ್ಪಾದಕರ ಸಂಘ ಉನ್ನತ ಮಟ್ಟಕ್ಕೆ ಬೆಳೆಯಲು ಅಧ್ಯಕ್ಷರು, ನಿರ್ದೇಶಕರು ಹಾಗು ಸದಸ್ಯರ ಬದ್ಧತೆ ಕಾರಣವಾಗಿದೆ. ಒಕ್ಕೂಟದಿಂದ ದೊರೆಯುವ ಸೌಲಭ್ಯಗಳನ್ನು ಅರ್ಹರಿಗೆ ತಲುಪಿಸುವ ಕೆಲಸವನ್ನು ಜಿಲ್ಲಾ ಸಂಘದಿಂದ ಮಾಡಲಾಗುವುದು. ಸಂಘವು ಮತ್ತಷ್ಟು ಎತ್ತರಕ್ಕೆ ಬೆಳೆಯಬೇಕೆಂದರೆ ದಾನಿಗಳು ಹಾಗು ಸರ್ಕಾರದ ಸಹಾಯವನ್ನು ಸದ್ಬಳಕೆ ಮಾಡಿಕೊಳ್ಳಬೇಕು ಎಂದರು.



ಇಲ್ಲಿ ಸಂಗ್ರಹವಾಗುವ ಹಾಲು ಅಮೇರಿಕಾದಂತಹ ದೇಶಗಳಿಗೆ ಸರಬರಾಜು ಆಗುತ್ತದೆ ಎನ್ನುವುದು ಹೆಮ್ಮೆಯ ವಿಷಯ. ಮುಂದಿನ ದಿನಗಳಲ್ಲಿ ನಮ್ಮ ದೇಶ ಹೈನುಗಾರಿಕೆ ಕ್ಷೇತ್ರದಲ್ಲಿ ಅಂತರರಾಷ್ಟ್ರೀಯ ಮಟ್ಟದಲ್ಲಿ ಸಾಧನೆ ಮಾಡುತ್ತದೆಂದು ವಿಶ್ವಾಸ ವ್ಯಕ್ತಪಡಿಸಿದರು.

ಪಶು ವೈದ್ಯಾಧಿಕಾರಿ ನಿತ್ಯಾನಂದ ಅವರು ಮಾತನಾಡಿ, ಪಶುಗಳಿಗೆ ತಪ್ಪದೇ ವ್ಯಾಕ್ಸಿನ್ ಕೊಡಿಸಬೇಕು. ಹಸು ಆರೋಗ್ಯವಾಗಿದ್ದರೆ ಮಾತ್ರ ಶುದ್ಧ ಹಾಲು ದೊರೆಯಲು ಸಾಧ್ಯ. ಕೊಟ್ಟಿಗೆ ಯನ್ನು ದಿನನಿತ್ಯ ಸ್ವಚ್ಛವಾಗಿಟ್ಟುಕೊಳ್ಳುವುದರಿಂದ ಹಸುಗಳಿಗೆ ತಗುಲುವ ರೋಗಗಳಿಂದ ದೂರವಿರಿಸಬಹುದೆಂದರು.

ಹೆಚ್ಚು ಹಾಲು ಉತ್ಪಾದಕರಾದ ಅಬ್ಬನ ಸಂಪತ್, ವಿಕ್ರಂ ಸಕ್ವಾಲ್, ಮೋಹನ್ ಕುಮಾರ್ ಅವರನ್ನು ಅಭಿನಂದಿಸಲಾಯಿತು.

ಈ ಸಂದರ್ಭದಲ್ಲಿ ಸಂಘದ ನಿರ್ದೇಶಕರಾದ ಎಂ.ಬಿ. ನಾಗೇಶ್, ಎಂ.ಎಸ್.ಧರ್ಮ ಪ್ರಕಾಶ್, ಎಂ. ಎಂ.ಸತ್ಯ ಪ್ರಕಾಶ್, ಆರ್. ಆನಂದಮೂರ್ತಿ, ಬಿ.ಹೆಚ್. ಶಂಭುಲಿಂಗ, ವನಿತಾ, ವೀಣಾ, ದೃಶ್ಯಮಣಿ, ಅಣ್ಣಪ್ಪ, ನಿವೃತ್ತ ಶಿಕ್ಷಕ ದಿವಾಕರ್, ಬೆಳಗಾರರ ಸಂಘದ ಮಾಜಿ ಅಧ್ಯಕ್ಷ ಬಿ.ಎನ್.ಬಸವಣ್ಣ, ಗ್ರಾಮ ಪಂಚಾಯಿತಿ ಸದಸ್ಯ ಸಂಜು, ಸಂಘದ ಕಾರ್ಯದರ್ಶಿ ಎಂ.ಆರ್ .ಜಯಪ್ರಕಾಶ್ ಮತ್ತಿತರರಿದ್ದರು.

## ವೈದ್ಯರ ನಿರ್ಲಕ್ಷ್ಯದಿಂದ ಯುವಕ ಸಾವು: ಆರೋಪ

• ಪ್ರಜೋದಯ ವರದಿ

**ಹಾಸನ:** ಹೊಟ್ಟೆ ನೋವು ಸಮಸ್ಯೆಯಿಂದ ಆಸ್ಪತ್ರೆಗೆ ಬಂದ ಯುವಕನಿಗೆ ಸೂಕ್ತ ಚಿಕಿತ್ಸೆ ನೀಡದೆ ಚನ್ನರಾಯಪಟ್ಟಣ ತಾಲ್ಲೂಕು ನುಗ್ಗೇಹಳ್ಳಿ ಪ್ರಾಥಮಿಕ ಕೇಂದ್ರದ ವೈದ್ಯರು ನಿರ್ಲಕ್ಷ್ಯ ತೋರಿದ್ದರಿಂದ ಯುವಕ ಮೃತಪಟ್ಟಿದ್ದು, ತಪ್ಪಿತಸ್ಥರ ವಿರುದ್ಧ ಕ್ರಮ ಜರುಗಿಸಬೇಕೆಂದು ಆಗ್ರಹಿಸಿ ಕೆಆರ್‌ಎಸ್ ಕಾರ್ಯಕರ್ತರು ಗುರುವಾರ ಜಿಲ್ಲಾಧಿಕಾರಿಗೆ ಮನವಿ ಸಲ್ಲಿಸಿದರು.

ಜಿಲ್ಲಾಧಿಕಾರಿ ಕೆ.ಎಸ್.ಲತಾಕುಮಾರಿ ಅವರಿಗೆ ಮನವಿ ಸಲ್ಲಿಸಿ ಮಾತನಾಡಿದ ಕೆಆರ್‌ಎಸ್ ಮುಖಂಡ ಹೆಚ್.ಡಿ. ಪ್ರಖ್ಯಾತ್ ಗೌಡ ಅವರು, ಜಂಬೂರು ಗ್ರಾಮದ ಅಭಿಲಾಷ್ (25) ಸೆ. 9 ರಂದು ಹೊಟ್ಟೆ ನೋವಿನಿಂದಾಗಿ ಚಿಕಿತ್ಸೆಗಾಗಿ ಆಸ್ಪತ್ರೆಗೆ ಬಂದಿದ್ದರು. ಡಾ|| ಪ್ರವೀಣ್ ಕುಮಾರ್ ರೋಗಿಯನ್ನು ಪರೀಕ್ಷಿಸದೆ ಶುಶ್ರೂಷಕಿಗೆ ಇಂಜೆಕ್ಷನ್ ನೀಡಲು ಹೇಳಿದರು. ನರ್ಸ್ ಕೂಡ ಖಾಯಿಲೆ ಕುರಿತು ಸರಿಯಾಗಿ ಮಾಹಿತಿ ಪಡೆಯದೆ ಇಂಜೆಕ್ಷನ್ ನೀಡಿದ್ದರು. ಅದಾದ ಕೆಲವೇ ಗಂಟೆಗಳಲ್ಲಿ ಯುವಕ ಮೃತಪಟ್ಟಿದ್ದಾನೆಂದರು.

ಕರ್ತವ್ಯ ಲೋಪ ಎಸಗಿದ ಡಾ|| ಪ್ರವೀಣ್ ಕುಮಾರ್ ತಮ್ಮ ಹೊಣೆಗಾರಿಕೆಯಿಂದ ಪಾರಾಗಲು ಆ್ಯಂಬುಲೆನ್ಸ್ ಮೂಲಕ ಚನ್ನರಾಯಪಟ್ಟಣ ಆಸ್ಪತ್ರೆಗೆ ಕಳುಹಿಸಿಕೊಡಲು ಪ್ರಯತ್ನಿಸಿದರು. ಮೃತನ ತಾಯಿ ಜೋರಾಗಿ ಅಳಲು ಶುರು ಮಾಡಿದಾಗ ಸ್ಥಳೀಯರು ಪರಿಶೀಲಿಸಿದ್ದು ಯುವಕ ಮೃತಪಟ್ಟಿದ್ದು ದೃಢಪಟ್ಟಿದೆ ಎಂದರು.

ಸರಿಯಾಗಿ ಚಿಕಿತ್ಸೆ ನೀಡದೆ ಇರುವುದು ಮಾತ್ರವಲ್ಲದೆ ರೋಗಿ ಸಂಬಂಧಿಕರೊಂದಿಗೆ ಆಸ್ಪತ್ರೆ ಸಿಬ್ಬಂದಿ ಅನುಚಿತವಾಗಿ ವರ್ತಿಸಿದ್ದಾರೆ. ಇಂತಹ ದುರ್ನಡತೆ ನೌಕರರ ವಿರುದ್ಧ ಕಾನೂನು ಕ್ರಮ ಜರುಗಿಸಬೇಕು. ಅಭಿಲಾಷ್ ಸಾವಿನ ಕುರಿತು ಸಮಗ್ರ ತನಿಖೆ ನಡೆಸಿ ತಪ್ಪಿತಸ್ಥರಿಗೆ ಶಿಕ್ಷೆ ವಿಧಿಸಬೇಕೆಂದು ಒತ್ತಾಯಿಸಿದರು. ಕೆಆರ್‌ಎಸ್‌ನ ಉಮೇಶ್ ಬೆಳಗುಂಬ, ರಮೇಶ್, ಮಧು ಇದ್ದರು.



## ಆಕರ್ಷಣೆಗೆ ಒಳಗಾಗದೆ ಉತ್ತಮ ಬದುಕು ಕಟ್ಟಿಕೊಳ್ಳಿ



• ಪ್ರಜೋದಯ ವರದಿ

**ಹಾಸನ:** ವಿದ್ಯಾರ್ಥಿಗಳು ಆಕರ್ಷಣೆಗೆ ಒಳಗಾಗದೆ ವ್ಯಾಸಂಗದ ಮೂಲಕ ಉತ್ತಮ ಬದುಕು ಕಟ್ಟಿಕೊಳ್ಳಬೇಕೆಂದು ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರದ ಸದಸ್ಯ ಕಾರ್ಯದರ್ಶಿ ಜಿ.ಕೆ. ದಾಕ್ಷಾಯಿಣಿ ಅವರು ಸಲಹೆ ನೀಡಿದರು.

ನಗರದ ವಾಣಿವಿಲಾಸ ಪದವಿ ಪೂರ್ವ ಕಾಲೇಜು ಸಭಾಂಗಣದಲ್ಲಿ ಗುರುವಾರ ನಡೆದ ವಿಶ್ವ ಆತ್ಮಹತ್ಯೆ ತಡೆ ದಿನದ ಕಾನೂನು ಅರಿವು-ನೆರವು ಕಾರ್ಯಕ್ರಮ ಉದ್ಘಾಟಿಸಿ ಮಾತನಾಡಿ, ವಿದ್ಯಾರ್ಥಿಗಳು ಈ ವಯಸ್ಸಿನಲ್ಲಿ ಆಕರ್ಷಣೆಗೆ ಒಳಗಾಗುವುದು ಸಹಜ. ಅದು ಜೀವನವನ್ನು ಹಾಳು ಮಾಡುವ ಮಾರ್ಗವಾಗಬಾರದು. ಕೆಟ್ಟ ವಿಚಾರಗಳ ಕಡೆ ಮನಸ್ಸು ಕೊಡದೆ ಉತ್ತಮ ಯೋಚನೆ ಮಾಡಬೇಕು. ಭವಿಷ್ಯದ ಬಗ್ಗೆ ಗಂಭೀರವಾಗಿ ಆಲೋಚಿಸಿ ಒಳ್ಳೆಯ ಪ್ರಜೆಯಾಗಿ ಬೆಳೆಯಬೇಕೆಂದರು.

ಎಸ್‌ಎಸ್‌ಎಲ್‌ಸಿ ಅಥವಾ ಪಿಯುಸಿ ಪರೀಕ್ಷೆಗಳಲ್ಲಿ ಅನುತ್ತೀರ್ಣರಾದ ಮಾತ್ರಕ್ಕೆ ಆತ್ಮಹತ್ಯೆಗೆ ಶರಣಾಗುವ ಮನಸ್ಥಿತಿಯ ವಿದ್ಯಾರ್ಥಿಗಳಿದ್ದಾರೆ. ಅದಕ್ಕಿಂತ ಜೀವನದ ಪರೀಕ್ಷೆ ಮುಖ್ಯ ಎಂಬು ದನ್ನು ಅರಿಯಬೇಕು. ಒಂದು ಬಾರಿ ಅನುತ್ತೀರ್ಣರಾದರೆ ಮತ್ತೊಂದು ಬಾರಿ ಬರೆಯುವ ಅವಕಾಶ ಸಿಗುತ್ತದೆ. ಆದರೆ ಜೀವವನ್ನೇ ತ್ಯಜಿಸಿದರೆ ಅದಕ್ಕೆ ಪರಿಹಾರವಿಲ್ಲ. ವಿದ್ಯಾರ್ಥಿಗಳು ಆತ್ಮಸ್ಥೈರ್ಯದಿಂದ ಇರಬೇಕೆಂದರು.

ಪೋಕ್ಸೋ ಕಾಯ್ದೆ ಬಗ್ಗೆ ವಿದ್ಯಾರ್ಥಿಗಳು ಅರಿವು ಹೊಂದಬೇಕು. ಹದಿಹರೆಯದ ವಯಸ್ಸಿನಲ್ಲಿ ತಪ್ಪು ಮಾಡುವ ಸಾಧ್ಯತೆಗಳು ಹೆಚ್ಚಿರುತ್ತದೆ. ಅದರಿಂದ ಅನುಭವಿಸುವ ಶಿಕ್ಷೆ ಘೋರವಾಗಿರುತ್ತದೆ. ಕಾನೂನಿನ ಮುಂದೆ ಎಲ್ಲರೂ ಒಂದೆಯಾಗಿರುವುದರಿಂದ ಪ್ರಮಾದ ಆಗದಂತೆ ಎಚ್ಚರ ವಹಿಸಬೇಕು ಎಂದರು.

ವಾಣಿವಿಲಾಸ ಪದವಿಪೂರ್ವ ಕಾಲೇಜು ಪ್ರಾಂಶುಪಾಲರಾದ ಮಲ್ಲಿಗೆಮ್ಮ, ವಕೀಲರ ಸಂಘದ ಅಧ್ಯಕ್ಷ ಕಾರ್ಲೆ ಮೊಗಣ್ಣಗೌಡ, ಜಿಲ್ಲಾ ಮಾನಸಿಕ ಆರೋಗ್ಯ ಕಾರ್ಯಕ್ರಮ ಅಧಿಕಾರಿ ಡಾ.ನಾಗೇಶ್ ಆರಾಧ್ಯ, ಉಪನ್ಯಾಸಕ ಆರ್.ರಂಗರಾಜು ಇತರರಿದ್ದರು.

# ಸದೃಢ ಆರೋಗ್ಯಕ್ಕೆ ಪೌಷ್ಟಿಕ ಆಹಾರ ಸೇವಿಸಿ

• ಪ್ರಜೋದಯ ವರದಿ

**ಚನ್ನರಾಯಪಟ್ಟಣ:** ಮಕ್ಕಳ ಬೆಳವಣಿಗೆಗೆ ಪೌಷ್ಟಿಕ ಆಹಾರ ಅವಶ್ಯಕವಾಗಿದ್ದು, ದೈಹಿಕ ಹಾಗು ಮಾನಸಿಕ ಬೆಳವಣಿಗೆಯಲ್ಲಿ ಪ್ರಮುಖ ಪಾತ್ರ ವಹಿಸುತ್ತದೆ. ಆರೋಗ್ಯಯುತ ಸಮಾಜ ನಿರ್ಮಾಣಕ್ಕೆ ಪೌಷ್ಟಿಕ ಆಹಾರ ಸೇವಿಸಬೇಕೆಂದು ಜೆಎಂಎಫ್‌ಸಿ ಪ್ರಧಾನ ಸಿವಿಲ್ ನ್ಯಾಯಾಧೀಶರಾದ ವಿ.ಕುಸುಮ ಅವರು ಹೇಳಿದರು.

ತಾಲ್ಲೂಕಿನ ಶ್ರವಣಬೆಳಗೊಳ ಹೋಬಳಿ ಸುಂಡಹಳ್ಳಿ ಗ್ರಾಮದ ಸಮುದಾಯ ಭವನದಲ್ಲಿ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ, ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ, ಶಿಶು ಅಭಿವೃದ್ಧಿ ಇಲಾಖೆ, ತಾಲ್ಲೂಕು ಕಾನೂನು ಸೇವಾ ಸಮಿತಿ ವತಿಯಿಂದ ಗುರುವಾರ ಹಮ್ಮಿಕೊಂಡಿದ್ದ ಪೌಷ್ಟಿಕ ಆಹಾರ ಸಪ್ತಾಹ ಉದ್ಘಾಟಿಸಿ ಮಾತನಾಡಿದರು.

ಮಕ್ಕಳ ದೈಹಿಕ ಮತ್ತು ಮಾನಸಿಕ ಬೆಳವಣಿಗೆಗೆ ಅಗತ್ಯವಿರುವ ಸಮತೋಲಿತ ಪೌಷ್ಟಿಕ ಆಹಾರ ಮುಖ್ಯ. ದೇಹದ ಬೆಳವಣಿಗೆ ಹಾಗು ಬುದ್ಧಿಶಕ್ತಿಗೆ ವೃದ್ಧಿಗೆ ಅದು ನೆರವಾಗುತ್ತದೆ. ತೂಕ, ಎತ್ತರ ಮತ್ತು ಬೆಳವಣಿಗೆಗೆ ಯಾವ ಆಹಾರ ಸೇವಿಸಬೇಕು, ಪೌಷ್ಟಿಕಾಂಶ, ಕಾರ್ಬೋ ಹೈಡ್ರೇಟ್, ಕೊಬ್ಬು, ವಿಟಮಿನ್ ಮುಂತಾದವುಗಳ ಬಗ್ಗೆ ಜಾಗೃತಿ ಮೂಡಿಸಿ ಆರೋಗ್ಯವಂತ ಸಮಾಜ ನಿರ್ಮಾಣ ಮಾಡುವುದು ನಮ್ಮೆಲ್ಲರ ಜವಾಬ್ದಾರಿ ಎಂದು ಹೇಳಿದರು.

ಸಹಾಯಕ ಅಭಿಯೋಜಕಿ ಸುನೀತ ಅವರು ಮಾತನಾಡಿ, ಮಕ್ಕಳ ಭವಿಷ್ಯವು ಅವರ ಆರೋಗ್ಯವನ್ನು ಅವಲಂಬಿಸಿದೆ. ಇತ್ತೀಚಿನ ದಿನಗಳಲ್ಲಿ ಪೋಷಕರು ಪೌಷ್ಟಿಕ ಆಹಾರ ಸೇವನೆಗಿಂತ ಜಂಕ್‌ಫುಡ್ ಆಹಾರಕ್ಕೆ ಆದ್ಯತೆ ನೀಡುತ್ತಿದ್ದಾರೆ. ಅವು ತಾತ್ಕಾಲಿಕ ತೃಪ್ತಿಯನ್ನು ನೀಡಿದರೂ ದೀರ್ಘಕಾಲದ ಆರೋಗ್ಯಕ್ಕೆ ಹಾನಿಕಾರಕವಾಗಿದೆ. ತ್ವರಿತ ಆಹಾರ (ಫಾಸ್ಟ್ ಫುಡ್) ಸೇವನೆ ಯಿಂದ ಪೌಷ್ಟಿಕಾಂಶದ ಕೊರತೆ ಹೆಚ್ಚುತ್ತಿದ್ದು, ದೇಹದ ಮೇಲೆ ವ್ಯತಿರಿಕ್ತ ಪರಿಣಾಮ ಬೀರುತ್ತಿದೆ ಎಂದರು.



ಹಾಲು, ಮೊಸರು, ತಾಜಾ ಹಣ್ಣು, ಹಸಿರು ತರಕಾರಿ, ಧಾನ್ಯ ಹಾಗು ನೈಸರ್ಗಿಕ ಆಹಾರ ಪದಾರ್ಥಗಳಲ್ಲಿ ಮಕ್ಕಳಿಗೆ ಬೇಕಾಗಿರುವ ವಿಟಮಿನ್‌ಗಳು, ಖನಿಜಗಳು ಮತ್ತು ಪ್ರೋಟೀನುಗಳು ದೊರೆಯುತ್ತವೆ. ಪೌಷ್ಟಿಕ ಆಹಾರ ಸೇವನೆ ಮೂಲಕ ಆರೋಗ್ಯವಂತರಾಗಿ ದೇಹದ ಶಕ್ತಿಯನ್ನು ಹೆಚ್ಚಿಸಿಕೊಳ್ಳಬೇಕು. ಈ ನಿಟ್ಟಿನಲ್ಲಿ ಪೋಷಕರು ತಮ್ಮ ಪೌಷ್ಟಿಕ ಆಹಾರ ನೀಡಿ ಪೋಷಣೆ ಮಾಡಬೇಕು ಎಂದರು.

ಒತ್ತಡದ ಬದುಕಿಗೆ ಸಿಲುಕಿರುವ ನಾವು ಆರೋಗ್ಯಕ್ಕೆ ಆದ್ಯತೆ ನೀಡುತ್ತಿಲ್ಲ. ದಿನಕ್ಕೆ 6 ರಿಂದ 8 ಗಂಟೆ ನಿದ್ರೆ ಮಾಡಬೇಕಾದರೂ ಅನೇಕರು ಮೊಬೈಲ್ ಗೀಳಿಗೆ ಬಲಿಯಾಗಿದ್ದೇವೆ. ಯುವಕರು ಬಹುತೇಕ ಸಮಯವನ್ನು ಸಾಮಾಜಿಕ ಜಾಲತಾಣಗಳಲ್ಲೇ ಕಳೆಯುತ್ತಾರೆ. ಇದು ಒಂದು ರೀತಿ ವ್ಯಸನವಾಗಿದ್ದು ಆಧುನಿಕ ತಂತ್ರಜ್ಞಾನ ಅಭಿವೃದ್ಧಿ ಜೊತೆಗೆ ಹಾನಿಯನ್ನು ಮಾಡುತ್ತಿದೆ. ಈ ಬಗ್ಗೆ ಜಾಗೃತಿ ವಹಿಸುವುದು ತುರ್ತು ಅಗತ್ಯವೆಂದು ಹೇಳಿದರು.

ನಂತರ ನ್ಯಾಯಾಧೀಶರು, ವಕೀಲರು, ಅಂಗನವಾಡಿ ಕಾರ್ಯಕರ್ತರು ಹಾಗೂ ಗ್ರಾಮಸ್ಥರು ಎತ್ತಿನಗಾಡಿ ಮೆರವಣಿಗೆ ಮೂಲಕ ಪೌಷ್ಟಿಕ ಆಹಾರದ ಬಗ್ಗೆ ಜಾಗೃತಿ ಜಾಥಾ ನಡೆಸಿದರು.

ತಾಲ್ಲೂಕು ಪಂಚಾಯಿತಿ ಮಾಜಿ ಸದಸ್ಯ ಜಯರಾಮ್, ಗ್ರಾಮ ಪಂಚಾಯಿತಿ ಸದಸ್ಯ ಮಹೇಶ್, ವಕೀಲರ ಸಂಘದ ಉಪಾಧ್ಯಕ್ಷ ಡಿ.ಪಿ. ದಿನೇಶ್, ಕೆ.ಎಲ್. ಚೇತನ್, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ ಶಿಶು ಅಭಿವೃದ್ಧಿ ಯೋಜನಾಧಿಕಾರಿ ಇಂದಿರಾ, ಮೇಲ್ವಿಚಾರಕಿ ಮಮತಾ ಹಾಗು ಅಂಗನವಾಡಿ ಕಾರ್ಯಕರ್ತರು ಇದ್ದರು.

## ಹೊಳೆನರಸೀಪುರದಲ್ಲಿ ಡಿಜೆ ಅಬ್ಬರಕ್ಕೆ ಕಿಟಕಿ ಗಾಜು ಪುಡಿ

**ಹೊಳೆನರಸೀಪುರ:** ಗಣೇಶೋತ್ಸವ ಮೆರವಣಿಗೆಯಲ್ಲಿ ಡಿಜೆ ಹಾಕುವಂತಿಲ್ಲವೆಂಬ ಸರ್ಕಾರದ ಕಟ್ಟುನಿಟ್ಟಿನ ಆದೇಶದ ನಡುವೆಯೂ ಪಟ್ಟಣದಲ್ಲಿ ಬುಧವಾರ ರಾತ್ರಿ ಮಾರ್ಧನಿಸಿದ ಡಿಜೆ ಅಬ್ಬರಕ್ಕೆ ಪೇಟೆ ಮುಖ್ಯ ರಸ್ತೆಯ ಅಂಗಡಿ ಮತ್ತು ಮನೆಗಳ ಗಾಜು ಪುಡಿ ಪುಡಿಯಾಗಿದೆ.

ಸರ್ಕಾರದ ನಿಯಮ ಉಲ್ಲಂಘಿಸಿ ಡಿಜೆಯನ್ನು ಬಳಸಲಾಗಿದೆ. ಆದರೆ ಸೌಂಡ್ ಸಿಸ್ಟಂ ಇಷ್ಟೇ ಮಿತಿಯಲ್ಲಿರಬೇಕೆಂಬ ನಿಯಮ ಇರುತ್ತದೆ. ಖುದ್ದಾಗಿ ಪೊಲೀಸರೇ ಅದನ್ನು ನಿರ್ವಹಣೆ ಮಾಡುತ್ತಾರೆ. ಆದರೆ ಪಟ್ಟಣದಲ್ಲಿ ಬುಧವಾರ ರಾತ್ರಿ ಪಟ್ಟಣದಲ್ಲಿ ನಡೆದ ಗಣೇಶ ಮೂರ್ತಿ ಮೆರವಣಿಗೆಯಲ್ಲಿ ಹಾಕಿದ್ದ ಡಿಜೆ ಶಬ್ದ ಸಾರ್ವಜನಿಕರಲ್ಲಿ ಭಯ ಮೂಡಿಸಿತು.

ಡಿಜೆ ಶಬ್ದವು ಪಟ್ಟಣದಿಂದ ಸುಮಾರು 2 ಕಿ.ಮೀ.ವರೆಗೆ ಜೋರಾಗಿ ಕೇಳುವಂತಿತ್ತು. ಅದರಿಂದ ರಸ್ತೆ ಪಕ್ಕದ ಜ್ಯುವೆಲ್ಲರಿ ಶಾಪ್ ಹಾಗು ಮನೆಗಳ ಗಾಜಿನ ಕಿಟಕಿಗಳು ಅದುರಿದವು. ಮನೆ ಮತ್ತು ಅಂಗಡಿಯ ಶೋಕೇಸ್‌ಗಳಲ್ಲಿ ಇಟ್ಟ ಪದಾರ್ಥಗಳು ನೆಲಕ್ಕುರುಳಿ ನಷ್ಟ ಉಂಟಾಗಿದೆ. ಹೃದಯ ರೋಗಿಗಳು, ಮಕ್ಕಳು, ಗರ್ಭಿಣಿಯರು ಭಯಭೀತರಾದರು.

ಪ್ರಜೋದಯ ದಿನಪತ್ರಿಕೆ, ಸಂಪಾದಕ, ಪ್ರಕಾಶಕ ಮತ್ತು ಮುದ್ರಕರು, ಜೆ.ಆರ್.ಕೆಂಚೇಗೌಡ, ಗಂಧದ ಕೋಠಿ ಹಿಂಭಾಗ, ಕೆ.ಆರ್.ಪುರಂ.ಹಾಸನ. ದೂರವಾಣಿ : 08172-231188, ಮೊ: 9449203019

CMYK CMYK CMYK CMYK